ಒಂದನೇ ಪುಟದಿಂದ

# ಅಭಿವೃದ್ಧಿಗೆ ಶಿಕ್ಷಣ ಅವಶ್ಯಕ

ಸಮಾಜದ ಒಳಿತಿಗಾಗಿ ಮಾಜಿ ಸಚಿವ ದಿ. ಬಸವರಾಜ ಪಾಟೀಲ್ ಸೇರಿ ಪಾಟೀಲ್ ಪರಿವಾರದ ಸದಸ್ಯರು ಬಹಳಷ್ಟು ಸಹಕಾರ ನೀಡಿದ್ದಾರೆ. ಅದರಂತೆ ಈಗಲೂ ಕೂಡಾ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಹೆಚ್ಚಿನ ಒತ್ತು ನೀಡುವ ಮೂಲಕ ನಮ್ಮ ಸಮಾಜಕ್ಕೆ ಸರಕಾರದ ಎಲ್ಲ ಸೌಲಭ್ಯಗಳನ್ನು ಒದಗಿಸಿಕೊಡಬೇಕು ಎಂದು ಮನವಿ ಮಾಡಿದರು.

ಅಲೆಮಾರಿ ಸಮಾಜದ ಯುವ ಮುಖಂಡ ಕೃಷ್ಣಪ್ಪ ಮಾತನಾಡಿ, ಅಲೆಮಾರಿ ಸಮಾಜದ ಬೆಳವಣಿಗೆಗಾಗಿ ಹಾಗೂ ಸರಕಾರದ ವಿವಿಧ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ನಮಗೆ ಜಾತಿ ಪ್ರಮಾಣ ಪತ್ರ ಅವಶ್ಯಕತೆ ಇದ್ದು, ಜಾತಿ ಪ್ರಮಾಣ ಪತ್ರಕ್ಕಾಗಿ ಸುಮಾರು ವರ್ಷಗಳಿಂದ ತಹಸೀಲ್ ಕಚೇರಿಗೆ ಅಲೆದಾಡುತ್ತಿದ್ದರು ಕೂಡಾ ಅಲೆಮಾರಿ ಜನಾಂಗಕ್ಕೆ ಜಾತಿ ಪ್ರಮಾಣ ಪತ್ರ ನೀಡಲು ಅಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಸರಕಾರದ ಮೇಲೆ ಹೆಚ್ಚಿನ ಒತ್ತಡ ಹಾಕುವ ಮೂಲಕ ಅಲೆಮಾರಿ ಜನಾಂಗಕ್ಕೆ ನ್ಯಾಯ ಒದಗಿಸಿಕೊಡಬೇಕು ಎಂದರು.

ಈ ಸಂದರ್ಭದಲ್ಲಿ ಹುಡಗಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ವಿರೂಪಾಕ್ಷ ಶಿವಾಚಾರ್ಯರು, ಗ್ರಾಪಂ. ಉಪಾಧ್ಯಕ್ಷ ಎಂ.ಡಿ. ಸಿದಿಕಶಾ, ಶಿವಾನಂದ ಕಟ್ಟ ಕಂಟೆಪ್ಪ ದಾನ, ಸುರೇಶ ಘಾಂಗ್ರೆ, ನೀಲಕಂಠ ಶಟ್ಟಿ, ಪ್ರದೀಪ ಪಸಾರ್ಗಿ, ಶಾಂತಕುಮಾರ ಅರಳಿ, ಅಂತೋಷ ಅತಿವಾಳ, ಸುಧಾಕರ ಸಂಗಮ, ಶಿವಕುಮಾರ ಸಾಗರ, ನರಸಿಂಹಲು ರಾಜೇಶ್ವರ, ಲಕ್ಷ್ಮಣ ಹಣಮಂತ, ಕೃಷ್ಣರಾಮಯ್ಯ, ಕೃಷ್ಣ ಕುಡಂಬಲ ಸೇರಿ ಅನೇಕರಿದ್ದರು.

## ತಟ್ಟದ ಭಾರತ್ ಬಂದ್ ಬಿಸಿ

ಎಂದಿನಂತೆ ನಡೆದವು. ಆದರೆ ವಿವಿಧ ಕಾರ್ಮಿಕ ಸಂಘಟನೆಗಳ ಸದಸ್ಯರು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸಿದರು.ಕಾರ್ಮಿಕ ಕಾನೂನುಗಳಿಗೆ ತಿದ್ದುಪಡಿಯನ್ನು ಹಿಂಪಡೆಯಬೇಕು. ಕಾರ್ಮಿಕ ವಿರೋಧಿ ನೀತಿಗಳು ಮತ್ತು ನೌಕರರ ಕೆಲಸದ ಸಮಯವನ್ನು ಹೆಚ್ಚಿಸುವ ಪ್ರಸ್ತಾಪವನ್ನು ರದ್ದುಗೊಳಿಸಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದ್ದರು. ಹುಬ್ಬಳ್ಳಿಯಲ್ಲಿ, ಕಾರ್ಮಿಕ ಸಂಘಗಳ ಜಂಟಿ ಸಮಿತಿಯ ಅಡಿಯಲ್ಲಿ ವಿವಿಧ ಕಾರ್ಮಿಕ ಸಂಘಗಳ ಸದಸ್ಯರು ಸರ್ಕಾರದ ಕಾರ್ಮಿಕ ವಿರೋಧಿ, ರೈತ ವಿರೋಧಿ ಮತ್ತು ಕಾರ್ಪೊರೇಟ್ ಪರ ನೀತಿಗಳನ್ನು ವಿರೋಧಿಸಿ ಧರಣಿ ನಡೆಸಿದರು.

ಅದೇ ರೀತಿ, ಮೈಸೂರಿನಲ್ಲಿ ಅಖಿಲ ಭಾರತ ಟ್ರೇಡ್ ಯೂನಿಯನ್ ಕಾಂಗ್ರೆಸ್ ಮತ್ತು ಇತರ ಸಂಘಟನೆಗಳು ರ‍್ಯಾಲಿಯನ್ನು ಆಯೋಜಿಸಿದ್ದವು. ಬೀದರ್‌ನಲ್ಲಿಯೂ ಸಹ, ಮಹಿಳೆಯರು ಸೇರಿದಂತೆ ಕಾರ್ಮಿಕರು ಬೀದಿಗಿಳಿದರು. 24 ಗಂಟೆಗಳ ಮುಷ್ಕರಕ್ಕೆ 10 ಕೇಂದ್ರ ಕಾರ್ಮಿಕ ಸಂಘಗಳು ಮತ್ತು ಸ್ವತಂತ್ರ ಅಖಿಲ ಭಾರತ ವಲಯ ಒಕ್ಕೂಟಗಳು ಮತ್ತು ಸಂಘಗಳನ್ನು ಒಳಗೊಂಡಿರುವ ಕಾರ್ಮಿಕ ಸಂಘಗಳ ಜಂಟಿ ವೇದಿಕೆ ಕರೆ ನೀಡಿತ್ತು.

## ಭಯ ಬೇಡ:ಡಾ.ಶರಣಪ್ರಕಾಶ ಪಾಟೀಲ

ಸಂಸ್ಥೆಗೆ ವರದಿ ಮಾಡಲು ಸರ್ಕಾರ ನೋಟಿಫೈಡ್ ಡಿಸೀಸ್ ಎಂದು ನಿರ್ಧರಿಸಿದೆ. ಹೃದಯಾಘಾತದಿಂದ ಮೃತಪಟ್ಟಲ್ಲಿ ಮುಂದಿನ ದಿನದಲ್ಲಿ ಮರಣೋತ್ತರ ಪರೀಕ್ಷೆ ನಡೆಸಲಾಗುವುದು. ಇದರಿಂದ ಸಾವಿಗೆ ನಿಖರ ಕಾರಣ ತಿಳಿದು ಬರಲಿದೆ ಎಂದ ಅವರು, ಹಾಸನದಲ್ಲಿ ಹೃದಯಾಘಾತದ ಹೆಚ್ಚಿನ ಪ್ರಕರಣ ಕಂಡುಬಂದ ಕಾರಣ ತಜ್ಞರ ಸಮಿತಿ ರಚಿಸಿದ್ದು, ವರದಿ ಬಂದ ನಂತರ ಸರ್ಕಾರ ಕ್ರಮ ಕೈಗೊಳ್ಳಲಿದೆ ಎಂದರು.

ಸಮಾಜದ ಸ್ವಾಸ್ಥ್ಯಕ್ಕಾಗಿ ದಿನದ 24 ಗಂಟೆ ಕಾರ್ಯನಿರ್ವಹಿಸುವ ಪತ್ರಕರ್ತರ ಅರೋಗ್ಯ ಕಾಳಜಿ ವಹಿಸುವ ಉದ್ದೇಶದಿಂದ ಕಲಬುರಗಿಯ ಜಯದೇವ ಆಸ್ಪತ್ರೆಯಿಂದ ಉಚಿತ ಹೃದ್ರೋಗ ಶಿಬಿರ ಆಯೋಜಿಸಿದ್ದು, ಇಲ್ಲಿ ಇ.ಸಿ.ಜಿ, 2ಡಿ ಎಕೋ, ಟಿ.ಎಂ.ಟಿ ತಪಾಸಣೆ ಮಾಡಲಾಗುತ್ತಿದೆ. ಇದರ ಲಾಭ ಪತ್ರಕರ್ತರು ಪಡೆಯಬೇಕು ಎಂದು ಅವರು ಮನವಿ ಮಾಡಿದರು. ಕಲಬುರಗಿಯಲ್ಲಿ ಆರೋಗ್ಯ ಸೇವೆ ಸುಧಾರಣೆ ಹೆಚ್ಚಿನ ಯೋಜನೆಗಳು ಹಮ್ಮಿಕೊಳ್ಳಲಾಗಿದೆ. 200 ಹಾಸಿಗೆಯ ತಾಯಿ-ಮಕ್ಕಳ ಆಸ್ಪತ್ರೆ, ಇಂದಿರಾ ಗಾಂಧಿ ಮಕ್ಕಳ ಆಸ್ಪತ್ರೆ, ನಿಮ್ಹಾನ್ಸ್ ಶಾಖೆ, ಇನ್ಸಿಟ್ಯೂಟ್ ಆಫ್ ಡಯಾಬಟಾಲಾಜಿ ಕಟ್ಟಡ ಕೆಲಸ ಪ್ರಾರಂಭವಾಗಿದ್ದು, ಮುಂದಿನ ದಿನದಲ್ಲಿ ಕಣ್ಣಿನ ಚಿಕಿತ್ಸೆಗೆ ಮಿಂಟೋ ಆಸ್ಪತ್ರೆಯ ಶಾಖೆಯನ್ನು ಸಹ ಕಲಬುರಗಿಯಲ್ಲಿ ತೆರೆಯಲು ಚಿಂತನೆ ನಡೆದಿದೆ ಎಂದರು. ಮಿತ ಅಹಾರ ಬಳಸಿ, ವ್ಯಾಯಾಮ ಮಾಡಿ: ಉತ್ತಮ ಅರೋಗ್ಯ ಕಾಪಾಡಿಕೊಳ್ಳಲು ಮಿತ ಆಹಾರ ಬಳಸಬೇಕು. ಪೌಷ್ಟಿಕಾಂಶವುಳ್ಳ ಅಹಾರ ಸೇವಿಸಬೇಕು. ತಂಬಾಕು ಉತ್ಪನ್ನ, ಮದ್ಯ ಸೇವನೆ ಬಿಡಬೇಕು. ವಿಶೇಷವಾಗಿ ಪಾಶ್ಚಿಮಾತ್ಯ ಶೈಲಿಯ ಆಹಾರಗಳಾದ ಪಿಜಾ, ಬರ್ಗರ್, ಎಣ್ಣೆಯಲ್ಲಿ ಕರಿದ ಪದಾರ್ಥಗಳನ್ನು ತಿನ್ನುವುದು ಬಿಡಬೇಕು. ಎಲ್ಲಕ್ಕಿಂತ ಮುಖ್ಯವಾಗಿ ಪ್ರತಿನಿತ್ಯ ವ್ಯಾಯಾಮ, ಯೋಗಾಭ್ಯಾಸ, ಧ್ಯಾನ ಮಾಡಬೇಕೆಂದು ಸಚಿವ ಡಾ.ಶರಣಪ್ರಕಾಶ ಪಾಟೀಲ ಸಲಹೆ ನೀಡಿದರು. ಎಲ್ಲಾ ಎದೆ ನೋವು ಹಾರ್ಟ್ ಅಟ್ಯಾಕ್ ಅಲ್ಲ: ಕಲಬುರಗಿಯ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತ ಸಂಶೋಧನಾ ಆಸ್ಪತ್ರೆಯ ಮುಖ್ಯಸ್ಥ ಡಾ.ವೀರೇಶ ಪಾಟೀಲ ಮಾತನಾಡಿ, ಹೃದ್ರೋಗ ಬಗ್ಗೆ ಜನ ಅನಗತ್ಯ ಆತಂಕಗೊಳ್ಳಬೇಕಿಲ್ಲ. ಹೃದಯದ ಆರೋಗ್ಯದ ಬಗ್ಗೆ ಕಾಳಜಿ ವಹಿಸಿದರೆ ಸಾಕು. ಎಲ್ಲಾ ಎದೆ ನೊವು ಹಾರ್ಟ್ ಅಟ್ಯಾಕ್ ಅಲ್ಲ ಎಂಬುದನ್ನು ಸಾರ್ವಜನಿಕರು ಮೊದಲು ಅರಿಯಬೇಕು ಎಂದ ಅವರು ಕಲಬುರಗಿಯ ಜಯದೇವ ಆಸ್ಪತ್ರೆಯಲ್ಲಿ ಪ್ರತಿ ಶನಿವಾರ-ರವಿವಾರ ಹಂತ-ಹಂತವಾಗಿ ಪತ್ರಕರ್ತರನ್ನು ತಪಾಸಣೆ ಮಾಡಲಾಗುವುದು ಎಂದರು. ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ ಯಡ್ರಾಮಿ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ತೀವ್ರ ಒತ್ತಡದಲ್ಲಿ ಕಾರ್ಯನಿರ್ವಹಿಸುವ ಸಂಘದ ಸುಮಾರು 600 ಸದಸ್ಯರಿಗೆ ಮುಂದಿನ ದಿನದಲ್ಲಿ ಪ್ರತಿ ಶನಿವಾರ, ರವಿವಾರ ಜಯದೇವ ಆಸ್ಪತ್ರೆಯಲ್ಲಿ ಹಂತ-ಹಂತವಾಗಿ ಉಚಿತವಾಗಿ ಹೃದ್ರೋಗ ಆರೋಗ್ಯ ತಪಾಸಣೆ ನಡೆಯಲಿದ್ದು, ಪತ್ರಕರ್ತರು ಇದರ ಸೌಲಭ್ಯ ಪಡೆಯಬೇಕು ಎಂದಲ್ಲದೆ ಡಾ.ಶರಣಪ್ರಕಾಶ ಪಾಟೀಲ ಅವರು ಈ ಭಾಗದಲ್ಲಿ ಟ್ರಾಮಾ ಸೆಂಟರ್, ಜಯದೇವ ಆಸ್ಪತ್ರೆ, ಜಿಮ್ಸ್ ಅಸ್ಪತ್ರೆ, ಕ್ಯಾನ್ಸರ್ ಆಸ್ಪತ್ರೆ ಸೇರಿದಂತೆ ಅನೇಕ ಅರೋಗ್ಯ ಸವಲತ್ತು ಕಲ್ಪಿಸುವುದರ ಮೂಲಕ ಬಡವರಿಗೆ ಉಚಿತವಾಗಿ ಮತ್ತು ಗುಣಮಟ್ಟದ ಆರೋಗ್ಯ ಸೌಕರ್ಯ ಪಡೆಯಲು ಕಾರಣೀಕರ್ತರಾಗಿದ್ದಾರೆ ಎಂದು ಸಚಿವರ ಕಾರ್ಯ ಪ್ರಶಂಸಿದರು.

ಕಾರ್ಯಕ್ರಮದಲ್ಲಿ ಪತ್ರಕರ್ತರ ಸಂಘದ ಉಪಾಧ್ಯಕ್ಷ ರಾಮಕೃಷ್ಣ ಬಡಶೇಷಿ, ಕಾರ್ಯದರ್ಶಿ ಅರುಣ ಕದಂ ಸೇರಿದಂತೆ ಪತ್ರಕರ್ತರ ಸಂಘದ ಅನೇಕ ಪದಾಧಿಕಾರಿಗಳು, ಪತ್ರಕರ್ತರು ಭಾಗವಹಿಸಿದ್ದರು. ಪ್ರಧಾನ ಕಾರ್ಯದರ್ಶಿ ಸಂಗಮನಾಥ ರೇವತಗಾಂವ ನಿರೂಪಿಸಿದರು.


# ಕಲಬುರಗಿ ರಂಗಾಯಣ: ತಂತ್ರಜ್ಞರು ಹಾಗೂ ಕಲಾವಿದರನ್ನು ನೇಮಕ ಮಾಡಿಕೊಳ್ಳಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.09:ಕಲಬುರಗಿ ರಂಗಾಯಣವು ಸಿದ್ಧಪಡಿಸುವ ನಾಟಕಗಳಿಗೆ ಹಾಗೂ ರಂಗ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಂದು ವರ್ಷದ ಅವಧಿಗೆ 03 ಜನ ತಂತ್ರಜ್ಞರು ಹಾಗೂ 12 ಜನ ಕಲಾವಿದರುಗಳನ್ನು ನೇಮಕ ಮಾಡಿಕೊಂಡು ರೆಪರ್ಟರಿ ಪ್ರಾರಂಭಿಸಲಾಗುತ್ತಿದ್ದು, ಇದಕ್ಕಾಗಿ ಆಸಕ್ತಿಯುಳ್ಳ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ರಂಗಾಯಣ ಆಡಳಿತಾಧಿಕಾರಿಗಳು ತಿಳಿಸಿದ್ದಾರೆ.

ಕಲಬುರಗಿ ರಂಗಾಯಣಕ್ಕೆ ಮೂರು ಜನ ತಂತ್ರಜ್ಞರನ್ನು ಗೌರವ ಸಂಭಾವನೆ ಆಧಾರದಲ್ಲಿ ನೇಮಿಸಿಕೊಳ್ಳಲಾಗುತ್ತಿದೆ.ಸಂಗೀತ/ ಧ್ವನಿ-ಬೆಳಕು/ ರಂಗಸಜ್ಜಿಕೆ/ ಪರಿಕರ ವಿಭಾಗದಲ್ಲಿ ಕನಿಷ್ಠ 10 ವರ್ಷಗಳ ರಂಗಾನುಭವ ಹೊಂದಿರಬೇಕು. ಕನ್ನಡ ಭಾಷೆ ಓದುವ, ಬರೆಯುವ ಮತ್ತು ಮಾತನಾಡುವ ಸಾಮಾರ್ಥ್ಯ ಹೊಂದಿರಬೇಕು. ರಂಗಾನುಭವ ಮತ್ತು ಶೈಕ್ಷಣಿಕ ಅರ್ಹತೆಗಳು ಇದ್ದಲ್ಲಿ ಅಂತಹ ತಂತ್ರಜ್ಞರಿಗೆ ಆದ್ಯತೆ ನೀಡಲಾಗುವುದು. ಈ ನೇಮಕವು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, ತಂತ್ರಜ್ಞರ ಸಂಚಿತ ಮಾಸಿಕ ಗೌರವ ಸಂಭಾವನೆ 25,000 ರೂ. ಗಳು ನೀಡಲಾಗುತ್ತದೆ. ಇತರೆ ಯಾವುದೇ ಭತ್ಯೆಗಳು ಇರುವುದಿಲ್ಲ.


# ನಿರಗುಡಿಯಲ್ಲಿ ಮಾತಾಜಿಯವರ ಗುರುವಂದನಾ ಕಾರ್ಯಕ್ರಮ ಇಂದು



ಬಸವಕಲ್ಯಾಣ:ಜು.9: ಇಲ್ಲಿನ ನಿರಗುಡಿ ಗ್ರಾಮದ ಶ್ರೀ ಗದ್ದೆ ಲಕ್ಷ್ಮೀ ದೇವಿ ಮತ್ತು ಶ್ರೀ ಭಾಗ್ಯವಂತಿದೇವಸ್ಥಾನ ಹಿರೇಮಠ ಇವರ ಸಂಯುಕ್ತಾಶ್ರಯದಲ್ಲಿ ಇಂದು ಬೆಳಿಗ್ಗೆ 10;30 ಗಂಟೆಗೆ ಗುರುವಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ನಿರಗುಡಿ ಹಿರೇಮಠದ ಶ್ರೀ ಭಾಗ್ಯವಂತಿ ದೇವಿಯವರು ದಿವ್ಯ ಸಾನಿಧ್ಯ ವಹಿಸುವರು. ಕಲಬುರಗಿ ಹೊನ್ನಕಿರಣಗಿ ಶಕ್ತಿ ಪೀಠದ ಶ್ರೀ ಶಿವಕುಮಾರ ಮುತ್ಯಾ ಸಾನಿಧ್ಯ ವಹಿಸುವರು. ಹುಮನಾಬಾದ ಮತಕ್ಷೇತ್ರದ ಶಾಸಕ ಡಾ. ಸಿದ್ದು ಪಾಟೀಲ್ ಅಧ್ಯಕ್ಷತೆ ವಹಿಸುವರು, ಮುಖ್ಯ ಅಥಿತಿಯಾಗಿ ಶಾಸಕ ಶರಣು ಸಲಗರ್, ಮಾಜಿ ಸಚಿವರಾದ ರಾಜಶೇಖರ ಬಿ. ಪಾಟೀಲ್, ಕೇಂದ್ರ ಮಾಜಿ ಸಚಿವ ಭಗವಂತ ಖೂಬಾ, ಉಮಾಕಾಂತ ನಾಗಮಾರಪಳ್ಳಿ, ಮಾಜಿ ಶಾಸಕ ಸುಭಾಷ ಕಲ್ಲೂರ, ಮಾಜಿ ಶಾಸಕ ಮಲ್ಲಿಕಾರ್ಜುನ ಖೂಬಾ ಮುಂತಾದ ಗಣ್ಯರು ಗುರುವಂದನಾ ಕಾರ್ಯಕ್ರಮದಲ್ಲಿ ಪಾಲ್ಗೋಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ. ಇದೆ ವೇಳೆ ಸಂಗೀತ ಕಾರ್ಯಕ್ರಮಗಳು ಮತ್ತು ಭಜನೆ ಜರುಗಲಿವೆ.

ಪ್ರಾಂಶುಪಾಲ ರಮಾಕಾಂತ ಬಿರಾದಾರ ಪ್ರಸ್ತಾವಿಕ ಮಾತನಾಡುವರು. ಹೀಗಾಗಿ ನಿರಗುಡಿ ಮತ್ತು ಕೌಡಿಯಾಳ ಗ್ರಾಮಸ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೋಳ್ಳಬೇಕು ಎಂದು ಸ್ವಾಗತ ಸಮಿತಿಯವರಾದ ಸಂತೋಷ ಬಿರಾದಾರ, ಶರಣಬಸ್ಸಪ್ಪ ಎಸ್ ಮಂಡೆ ಖಾನಾಪೂರ ಇವರು ಮನವಿ ಮಾಡಿದ್ದಾರೆ.

# ಅನಧಿಕೃತ ಶಾಲೆ, ಕೋಚಿಂಗ್ ಸೆಂಟರ್ ವಿರುದ್ಧ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.9: ತಾಲೂಕಿನಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಶಾಲೆ ಮತ್ತು ಕೋಚಿಂಗ್ ಸೆಂಟರ್‌ಗಳನ್ನು ಗುರುತಿಸಿ ಕೂಡಲೇ ಬಂದ್ ಮಾಡಿಸಿ ಸಂಬಂಧಿತರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಕಲ್ಯಾಣ ಕರ್ನಾಟಕ ಅನುದಾನ ರಹಿತ ಶಾಲಾ ಆಡಳಿತ ಮಂಡಳಿ ಸಂಘ ಒತ್ತಾಯಿಸಿದೆ.

ಈ ಕುರಿತು ಪಟ್ಟಣದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಯಲ್ಲಿ ಬುಧವಾರ ಕಲ್ಯಾಣ ಕರ್ನಾಟಕ ಅನುದಾನ ರಹಿತ ಶಾಲಾ ಆಡಳಿತ ಮಂಡಳಿ ಪ್ರಮುಖರು ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ ಬರೆದ ಮನವಿ ಪತ್ರ ಸಲ್ಲಿಸಿದರು.

ಪಟ್ಟಣ ಸೇರಿ ವಿವಿಧೆಡೆ ಕಾನೂನು ಬಾಹಿರವಾಗಿ ಶಾಲೆ, ಕೋಚಿಂಗ್ ಸೆಂಟರ್ ಕಾರ್ಯನಿರ್ವಹಿಸುತ್ತಿವೆ.ಇದರಿಂದ ವಿವಿಧ ಶಾಲೆಗಳಲ್ಲಿ ದಾಖಲಾಗಿರುವ ಮಕ್ಕಳ ಭವಿಷ್ಯ ಅತಂತ್ರವಾಗಿದೆ. ಕೂಡಲೇ ಮಕ್ಕಳ ಶೈಕ್ಷಣಿಕ ಪ್ರಗತಿ ದೃಷ್ಟಿಯಿಂದ ವಿವಿಧೆಡೆ ಅನಧಿಕೃತವಾಗಿ ತಲೆಯೆತ್ತಿರುವ ಶಾಲೆ-ಕೋಚಿಂಗ್ ಸೆಂಟರ್ ಪತ್ತೆ ಮಾಡಿ ಬಂದ್ ಮಾಡಿಸಬೇಕು. ಒಂದು ವೇಳೆ ವಿಳಂಬ ನೀತಿ ಅನುಸರಿಸಿದರೇ ಮುಂದಿನ ದಿನಗಳಲ್ಲಿ ಬೀದಿಗಿಳಿದು ಉಗ್ರ ಹೋರಾಟ ಮಾಡಬೇಕಾಗುತ್ತದೆ ಎಂದು ಮನವಿ ಪತ್ರದಲ್ಲಿ ಎಚ್ಚರಿಕೆ ನೀಡಲಾಗಿದೆ.ಈ ಸಂದರ್ಭದಲ್ಲಿ ಭಾರತ ಪಬ್ಲಿಕ್ ಶಾಲೆಯ ಅಧ್ಯಕ್ಷ ಪ್ರವೀಣ ಹಣಮಶೆಟ್ಟಿ, ಸೂರ್ಯೋದಯ ಪಬ್ಲಿಕ್ ಶಾಲೆಯ ಸಂತೋಷ ಖಂಡ್ರೆ, ಪಯೋನಿರ್ ಶಾಲೆಯ ಸಂಜಕುಮಾರ ಜ್ಯಾಂತೆ, ಎಂಡಿಎಸ್ ಶಾಲೆಯ ವಿನೋದ ಜಗತಾಪ್, ಶಾರದಾ ಪಬ್ಲಿಕ್ ಶಾಲೆಯ ವಸಂತ ಪಾಟೀಲ್, ನಿರ್ಮಲಾ ಹಲ್ಮಂಡಗೆ ಶಾಲೆಯ ಅಮರ ಹಲ್ಮಂಡಗೆ, ರೋಷನ್ ಉರ್ದು ಪಬ್ಲಿಕ್ ಶಾಲೆಯ ಸೈಯದ ಅಶ್ರತ್ ಅಲಿ, ಹಾಲಹಳ್ಳಿಕೆ. ಎಲ್.ಪಬ್ಲಿಕ್ ಶಾಲೆಯ ರಾಜಕುಮಾರ ಲಿಂಬಾಶೆಟ್ಟೆ, ಸದ್ಗುರು ವಿದ್ಯಾಲಯದ ಅಕ್ಷಯಕುಮಾರ ಮುದ್ದಾ, ನವ ಕಿರಣ ಹಿರಿಯ ಪ್ರಾಥಮಿಕ ಶಾಲೆಯ ಕಿರಣಕುಮಾರ ಮೇಟಾರೆ, ಖಾನಾಪೂರ ಸರ್. ಎಂ.ವಿಶ್ವೇಶ್ವರಯ್ಯ ಶಾಲೆಯ ಬಾಲಾಜಿ ಕಾಳೆ ಸೇರಿದಂತೆ ಮುಂತಾದವರು ಇದ್ದರು.

# ಭಾಲ್ಕಿ: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.9: ಪಟ್ಟಣದಲ್ಲಿ ರಾಜ್ಯ ಹಮಾಲಿ ಕಾರ್ಮಿಕರ ಫೆಡರೇಶನ್ ಸಂಘದ ಪದಾಧಿಕಾರಿಗಳು ಹಮಾಲಿ ಕಾರ್ಮಿಕರು ಸೇರಿದಂತೆ ಕಾರ್ಮಿಕ ವರ್ಗದ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಮುಷ್ಕರ ನಡೆಸಿದರು.ನಂತರ ಪ್ರಧಾನಮಂತ್ರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್‌ಗೆ ಸಲ್ಲಿಸಿ ಮಾತನಾಡಿದ ಪ್ರಮುಖರು, ಹಮಾಲಿ ಕಾರ್ಮಿಕರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ವಸತಿ ಯೋಜನೆಗಳನ್ನು ಬಳಸಿಕೊಂಡು ಸೂಕ್ತವಾದ ಗುಂಪು ವಸತಿ ಯೋಜನೆಯನ್ನು ರೂಪಿಸಬೇಕು.ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಕೂಡಲೇ ಕಾರ್ಮಿಕ ಭವನ ನಿರ್ಮಾಣ ಮಾಡಬೇಕು. ಕಾರ್ಮಿಕರ ರಕ್ಷಣಾತ್ಮಕ ಅಂಶಗಳು, ಮೂಲಭೂತ ಹಕ್ಕುಗಳು, ವೇತನ ಕುರಿತವ್ಯಾಖ್ಯಾನ, ಸಾಮಾಜಿಕ ಭದ್ರತೆ, ಮಾಲೀಕ-ಕಾರ್ಮಿಕ ಸಂಬಂಧ, ವೇತನ ಚೌಕಾಸಿ, ಆರೋಗ್ಯ ಮತ್ತು ಸುರಕ್ಷತೆ ನಿಯಮಗಳು ಹಾಗೂ ಕಲ್ಯಾಣಯೋಜನೆಗಳ ಕಲ್ಪನೆಗಳನ್ನು ದುರ್ಬಲಗೊಳಿಸುವ ಕಾರ್ಪೊರೇಟ್ ಬಂಡವಾಳಿಗರ ಪರ ರೂಪಿಸಿರುವ ಕಾರ್ಮಿಕ ಸಂಹಿತೆಗಳನ್ನು ರದ್ದುಪಡಿಸುವುದು ಸೇರಿದಂತೆ ಇತರ ಬೇಡಿಕೆಗಳನ್ನು ಈಡೇರಿಸುವಂತೆ ಮನವಿ ಪತ್ರದಲ್ಲಿ ಒತ್ತಾಯಿಸಿದ ್ದರೆ.ಪ್ರಮುಖರಾದ ಸುಂದರ್ ಎ.ಬರೂರಕರ್, ಮಹಾದೇವ ಡಿ.ಸೂರ್ಯವಂಶಿ, ಸಂದೀಪ ಬಿ.ಶಿಂಧೆ, ಬಾಬುರಾವ್ ಎಲ್. ಸಾಕರೆ, ಶಾರದಾ, ಜ್ಯೋತಿ, ಇಂದುಮತಿ, ದೀಪಕ, ಶೈಲೇಶ ಸೇರಿದಂತೆ ಇತರರು ಇದ್ದರು.

# ಸಹಕಾರ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲು ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜು.9: ಧನರಾಜ ತಾಳಂಪಳ್ಳಿ ಅವರ ನೇತೃತ್ವದಲ್ಲಿ ಸಹಕಾರ ವಿಭಾಗ ಹೆಚ್ಚೆಚ್ಚು ಅಭಿವೃದ್ಧಿ ಆಗಲಿ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಹೇಳಿದರು.

ತಾಲ್ಲೂಕಿನ ಕರಡ್ಯಾಳದ ಶ್ರೀ ಚನ್ನಬಸವೇಶ್ವರ ಗುರುಕುಲ ಶಿಕ್ಷಣ ಸಮುಚ್ಚಯದಲ್ಲಿ ಕೆಪಿಸಿಸಿ ಸಹಕಾರ ವಿಭಾಗದ ರಾಜ್ಯ ಘಟಕದ ಅಧ್ಯಕ್ಷರಾಗಿ ನೇಮಕಗೊಂಡ ಧನರಾಜ ತಾಳಂಪಳ್ಳಿ ಅವರಿಂದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ತಾಳಂಪಳ್ಳಿ ಅವರು ತುಂಬಾ ವರ್ಷಗಳಿಂದ ಉತ್ತಮ ಕಾರ್ಯ ಮಾಡುತ್ತಿರುವುದರಿಂದ ಅವರಿಗೆ ಇಂತಹ ಉನ್ನತ ಜವಬ್ದಾರಿ ಸಿಕ್ಕಿರುವುದು ತುಂಬಾ ಸಂತೋಷ ಸಂಗತಿ.

ಸಹಕಾರ ಕ್ಷೇತ್ರದಲ್ಲಿನ ಸಮಸ್ಯೆಗಳನ್ನು ಬಗೆಹರಿಸಿ ಉತ್ತಮ ಕಾರ್ಯ ಕೈಗೊಳ್ಳುವಂತ ಶಕ್ತಿ ಬಸವಣ್ಣನವರು ತಾಳಂಪಳ್ಳಿ ಅವರಿಗೆ ನೀಡಲಿ ಎಂದು ಶುಭ ಹಾರೈಸಿದರು.

ಹಿರೇಮಠದ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಧನರಾಜ ತಾಳಂಪಳ್ಳಿ ಅವರು, ಬಸವಲಿಂಗ ಪಟ್ಟದ್ದೇವರ ಆಶೀರ್ವಾದ ಶಕ್ತಿಯಿಂದ ಉನ್ನತ ಸ್ಥಾನ ದೊರೆತಿದೆ. ರಾಜ್ಯದ ಎಲ್ಲೆಡೆ ಸಹಕಾರ ವಿಭಾಗದ ಪ್ರಗತಿಗೆ ಅವಿರತವಾಗಿ ಶ್ರಮಿಸಲು ಪ್ರಯತ್ನಿಸುತ್ತೇನೆ ಎಂದು ತಿಳಿಸಿದರು.

ಬೀದರ್ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಅರ್ಜುನ ಕನಕ, ಆಡಳಿತಾಧಿಕಾರಿ ಮೋಹನರೆಡ್ಡಿ, ಪ್ರಮುಖರಾದ ಮನೋಹರ ಮೈಸೆ, ಬಸವಣ್ಣಪ್ಪ ನಿಲೋಗಿ, ಅಬ್ದುಲ್ ವಾಹಿದ್, ಯಾಹಿಯಾ ಪಾಷಾ, ರಾಜಕುಮಾರ ಘಾಳೆ ಸೇರಿದಂತೆ ಇತರರು ಇದ್ದರು.

# ಜು. 31ರಂದು ಮಹಮ್ಮದ್ ರಫಿ ಸ್ಮರಣಾರ್ಥ ಸಂಗೀತ ರಸಮಂಜರಿ ಕಾರ್ಯಕ್ರಮ: ದಂಡೆ



ಬೀದರ. ಜು. 09 : ಈ ತಿಂಗಳ 31ರಂದು ಸಾಯಂಕಾಲ ಸರಿಯಾಗಿ 5:00 ಗಂಟೆಗೆ ನಗರದ ಡಾ. ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಭಾರತೀಯ ಸಿನಿಮಾ ಜಗತ್ತಿನ ಸುಪ್ರಸಿದ್ದ ಹಿನ್ನಲೆ ಗಾಯಕರಾಗಿದ್ದ ಮಹ್ಮದ ರಫಿ ರವರ ಸ್ಮರಣಾರ್ಥವಾಗಿ "ತುಜಕೋ ತೇರೆ ಬಾದ ಜಮಾನಾ ಧೂಂಡೆಂಗಾ" ಸಂಗೀತ ಶ್ರದ್ಧಾಂಜಲಿ ರಸಮಂಜರಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ಡಾ.ಪಂಡಿತಪುಟ್ಟರಾಜಗವಾಯಿ ಮಾದರಿ ಸಂಗೀತ ಮತ್ತು ವಿವಿದುದ್ದೇಶ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರಾದ ನಾಗೇಂದ್ರ ದಂಡೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಸಿಸಿ ಮಾತನಾಡಿರುವ ಅವರು, 2011ರಲ್ಲಿ ಈ ಸಂಸ್ಥೆ ಪ್ರಾರಂಭಿಸಲಾಗಿದ್ದು, ಇಲ್ಲಿಯ ವರೆಗೆ 25 ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಕಳೆದ ವರ್ಷ ಸಂಸ್ಥೆಯ ಬೆಳ್ಳಿ ಮಹೋತ್ಸವ ಕೂಡ ಹಮ್ಮಿಕೊಳ:ಳಲಾಗಿತ್ತು. ಇದು 26ನೇ ಕಾರ್ಯಕ್ರಮವಾಗಿದೆ.

ಸಿನೇಮಾ ಸಂಗೀತಗಾರರಾದ ಜಬ್ಬಾರ ಮತ್ತು ಧನಂಜಯ ನೇತೃತ್ವದ "ಸ್ಟಾರ್ ಆಫ್ ಮೆಲ್ಲೋಡಿ"ಆರ್ಕೆಸ್ಟ್ರಾ ಈ ಸಂಗೀತ ರಸಮಂಜರಿ ಕಾರ್ಯಕ್ರಮಕ್ಕೆ ಸಂಗೀತವಾದನ ನೀಡುತ್ತಿದ್ದಾರೆ. ಮುಂಬೈನ ಹಿನ್ನಲೆ ಗಾಯಕಿ ಭಾವನಾ ಪಂಡಿತ ಹಾಗೂ ಹೈದ್ರಾಬಾದನ ಹೆಸರಾಂತ ಸ್ಟೇಜ್ ಕಲಾವಿದ ಮೌಜಮ್ ಅನ್ನರ್ ಜೊತೆಯಲ್ಲಿ ಬೀದರ ಐಡಲ್ ಪ್ರಶಸ್ತಿ ವಿಜೇತರಾದ ಕು. ಅಂಜಲಿ ಮಾಲೆ ಹಾಗೂ ಕು. ರಶ್ಮೀ ಶರ್ಮಾ ಮತ್ತು ಬೀದರನ ಹೆಸರಾಂತ ಕಲಾವಿದರಾದ ಗುರುದೇವ, ಪ್ರಿಯಂಕಾ ಗುರುದೇವ, ತಮ್ಮ ಗಾಯನದ ಮೂಲಕ ಪ್ರೇಕ್ಷಕರ ಮನತಣಿಸಲಿದ್ದಾರೆ. ಪ್ರಯುಕ್ತ ಬೀದರ ಜಿಲ್ಲೆಯ ಕಲಾ ಪ್ರೇಮಿಗಳು ಹಾಗೂ ಸಂಗೀತ ಆಸಕ್ತ ನಾಗರಿಕರು ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪ್ರಯೋಜನಪಡೆದು ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ದಂಡೆ ಮನವಿ ಮಾಡಿದರು.

100 ಅರ್ಹ ಅಭ್ಯರ್ಥಿಗಳಿಗೆ ಒಂದು ವರ್ಷದ ಯು.ಪಿ.ಎಸ್.ಸಿ ಉಚಿತ ತರಬೇತಿ:- 28ನೇ ಡಿಸೆಂಬರ್ 2025 ರಂದು ಬೀದರ ನಗರದಲ್ಲಿ ಏಷಿಯಾ ಖಂಡದ ಅತ್ಯಂತ ಬೃಹತ ಆರ್ಕೆಸ್ಟ್ರಾ ಹಾಗೂ ಸುಪ್ರಸಿದ್ದ ಹಿನ್ನೆಲೆ ಗಾಯಕರಿಂದ ರಸಮಂಜರಿ ಸಂಗೀತ ಕಾರ್ಯಕ್ರಮದ ಆಯೋಜನೆ ಮುಖೇನ ಜಾತಿ, ಧರ್ಮ, ಮತ, ಪಂಥ, ವರ್ಗ, ಲಿಂಗ ಭೇಧ ರಹಿತ 100 ಜನ ಅರ್ಹ ಅಭ್ಯರ್ಥಿಗಳಿಗೆ ಯು.ಪಿ.ಎಸ್.ಸಿ ಉಚಿತ ತರಬೇತಿ ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.ಬೀದರ ಜಿಲ್ಲೆಯ ಅರ್ಹ ಅಭ್ಯರ್ಥಿಗಳು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬಹುದಾಗಿದೆ.ಜುಲೈ 31ರಿಂದ ಡಿಸೆಂಬರ್ 28ರ ವರೆಗೆ ಈ ಯೋಜನೆಯ ಪ್ರಕ್ರಿಯ ಪ್ರಾರಂಭಿಸಲಾಗುವುದು. ಯು.ಪಿ.ಎಸ್.ಸಿ ತರಬೇತಿ ನೀಡಲು ದೇಹಲಿ ಹಾಗೂ ಹೈದ್ರಾಬಾದ್‌ನ ಪ್ರಖ್ಯಾತ ಹಾಗೂ ನುರಿತ ನಾಲ್ಕು ಜನ ಯು.ಪಿ.ಎಸ್.ಸಿ ತರಬೇತಿದಾರರನ್ನು ಕರೆಸಲಾಗುವುದು. ಈ ಮಹತ್ವದ ಕಾರ್ಯ ಕೈಗೊಳ್ಳಲು ಜುಲೈ 31ರಂದು ನಡೆಯುವ ಕಾರ್ಯಕ್ರಮಕ್ಕೆ ಬರುವ ಪ್ರೇಕ್ಷಕರಿಗೆ 500 ರೂಪಾಯಿ ಮೌಲ್ಯದ ಪಾಸ್‌ಗಳನ್ನು ಹಾಗೂ ಡಿಸೆಂಬರ್ 28ರಂದು ನಡೆಯುವ ಕಾರ್ಯಕ್ರಮದಲ್ಲಿ ರು.1,000 ಬೆಲೆಯುಳ್ಳ ವಿ.ಐ.ಪಿ ಪಾಸದ ನೀಡಲಾಗುವುದು ಈ ಎರಡು ಕಾರ್ಯಕ್ರಮಗಳಿಂದ ಜಮೆ ಆಗುವ ಹಣದಲ್ಲಿ ಹೊರಗಿನಿಂದ ಬರುವ ಕಲಾವಿದರಿಗೆ ಪ್ರೋತ್ಸಾಹ ಧನ, 100 ಜನ ತರಬೇತಿ ಪಡೆಯಲಿರುವ ಅರ್ಹ

ಅಭ್ಯರ್ಥಿಗಳಿಗೆ ಉಚಿತ ತರಬೇತಿಗಾಗಿ ಹಣ ಖರ್ಚು ಮಾಡಲಾಗುತ್ತದೆ. ಒಟ್ಟಾರೆ 2 ಕೋಟಿ ಅಂದಾಜು ಕಾರ್ಯಕ್ರಮ ಹಾಗೂ ತರಬೇತಿಯಲ್ಲಿ ಖರ್ಚಾಗಲಿದೆ ಎಂದು ದಂಡೆ ವಿವರಿಸಿದರು.

ಕಾರ್ಯಕ್ರಮ ಆಯೋಜನಾ ಸಮಿತಿ ಅಧ್ಯಕ್ಷ ಎಂ.ಎ ಜಬ್ಬಾರ್, ಕಾರ್ಯಾಧ್ಯಕ್ಷ ಬಿ.ವಿಜಗದೀಶ್ವರ, ಉಪಾಧ್ಯಕ್ಷ ಓಂಪ್ರಕಾಶ ರೊಟ್ಟೆ, ಕಾರ್ಯದರ್ಶಿ ಪದ್ಮಾನಂದ ಗಾಯಕವಾಡ, ಸಂಗೀತ ಸಂಯೋಜಕ ಗುರುದೇವ, ಸಮಾಜಿಕ ಚಿಂತಕ ವೀರಭದ್ರಪ್ಪ ಉಪ್ಪಿನ್, ಅಂಬಾದಾಸ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಗುರು ಪೂರ್ಣಿಮೆಗೆ ಗುರುವಿಗೊಂದು ನುಡಿ ನಮನ

ನಾನುಆರಂಭವಮಾಡುವೆನಯ್ಯಾ, ಗುರುಪೂಜೆಗೆಂದು,
ನಾನುಬೆವಹಾರವಮಾಡುವೆನಯ್ಯಾ, ಲಿಂಗಾರ್ಚನೆಗೆಂದು,
ನಾನುಪರಸೇವೆಯಮಾಡುವೆನಯ್ಯಾ, ಜಂಗಮದಾಸೋಹಕ್ಕೆಂದು.
ನಾನಾವಾವ ಕರ್ಮಂಗಳ ಮಾಡಿದಡೆಯು
ಆ ಕರ್ಮಫಲಭೋಗವ ನೀ ಕೊಡುವೆ ಎಂಬುದ ನಾನು ಬಲ್ಲೆನು.
ನೀ ಕೊಟ್ಟದ್ರವ್ಯವ ನಿಮಗಲ್ಲದೆ ಮತ್ತೊಂದಕ್ಕೆ ಮಾಡೆನು,
ನಿಮ್ಮ ಸೊಮ್ಮಿಂಗೆ ಸಲಿಸುವೆನು.
ನಿಮ್ಮಾಣೆಕೂಡಲಸಂಗಮದೇವಾ.

ಗುರು ಪೂರ್ಣಿಮಾ ದಿವಸದಂದು ಚಾತುರ್ಮಾಸ್ಯ ವ್ರತವನ್ನು ಮಹಾಗುರು ವ್ಯಾಸರ ಪೂಜೆಯಿಂದ ಪ್ರಾರಂಭಿಸುತ್ತಾರೆ. ನಾಲ್ಕು ತಿಂಗಳು ನಡೆದು ಕಾರ್ತಿಕ ಪೂರ್ಣಿಮೆಯಂದು ವ್ರತ ಮುಕ್ತಾಯವಾಗುತ್ತದೆ. ಈ ಚಾತುರ್ಮಾಸ್ಯ ವ್ರತವನ್ನು ಶ್ರದ್ಧಾ ಭಕ್ತಿಗಳಿಂದ ಆಚರಿಸುವವರಿಗೆ ಸಮೃದ್ಧ ಆಹಾರ, ಸೌಂದರ್ಯ, ಸದ್ಬುದ್ಧಿ, ಸತ್‌ಸಂತಾನ ದೊರೆಯುವುದೆಂಬ ನಂಬಿಕೆಯಿದೆ. ಈ ದಿವಸವೇ ವೇದವ್ಯಾಸರು ಬ್ರಹ್ಮಸೂತ್ರ ಬರೆಯಲು ಪ್ರಾರಂಭಿಸಿದ್ದು, ಏಕಲವ್ಯ ಗುರು ದ್ರೋಣಾಚಾರ್ಯರಿಗೆ ಗುರು ಕಾಣಿಕೆಯಾಗಿ ತನ್ನ ಬಲಗೈ ಹೆಬ್ಬೆರಳನ್ನು ಕತ್ತರಿಸಿಕೊಟ್ಟಿದ್ದು ಗುರು ಪೂರ್ಣಿಮಾ ದಿವಸ.

ಗುರುಪೂರ್ಣಿಮೆ (ವ್ಯಾಸಪೂಜೆ) :--ಮಾಯೆಯ ಭವಸಾಗರದಿಂದ ಶಿಷ್ಯ ಮತ್ತು ಭಕ್ತನನ್ನು ಹೊರತರುವ, ಅವನಿಂದ ಆವಶ್ಯಕವಿರುವ ಸಾಧನೆಯನ್ನು ಮಾಡಿಸಿಕೊಳ್ಳುವ ಮತ್ತು ಕಠಿಣ ಸಮಯದಲ್ಲಿ ಅವನಿಗೆ ಅತ್ಯಂತ ಹತ್ತಿರದಿಂದ ಹಾಗೂ ನಿರಪೇಕ್ಷ ಪ್ರೇಮದಿಂದ ಆಧಾರವನ್ನು ನೀಡಿ ಸಂಕಟಮುಕ್ತ ಮಾಡುವವ ಗುರು. ಇಂತಹ ಪರಮಪೂಜನೀಯ ಗುರುಗಳ ಬಗ್ಗೆ ಕೃತಜ್ಞತೆ ವ್ಯಕ್ತ ಮಾಡುವ ದಿನವೆಂದರೆ ಗುರುಪೂರ್ಣಿಮೆ.

ತಿಥಿ ಹಾಗೂ ಉದ್ದೇಶ :-- ಗುರುಪೂರ್ಣಿಮೆ ಮಹೋತ್ಸವವನ್ನು ಎಲ್ಲೆಡೆ ಆಷಾಢ ಹುಣ್ಣಿಮೆಯಂದು ಆಚರಿಸಲಾಗುತ್ತದೆ. ತಮಿಳುನಾಡಿನಲ್ಲಿ ವ್ಯಾಸಪೂಜೆಯನ್ನು ಜ್ಯೇಷ್ಠ ಪೂರ್ಣಿಮೆಯಂದು ಮಾಡುತ್ತಾರೆ. ಗುರು ಎಂದರೆ ಈಶ್ವರನ ಸಗುಣ ರೂಪ. ವರ್ಷಾದ್ಯಂತ ಪ್ರತಿಯೊಬ್ಬ ಗುರುಗಳು ತಮ್ಮ ಭಕ್ತರಿಗೆ ಅಧ್ಯಾತ್ಮದ ಬೋಧಾಮೃತವನ್ನು ನೀಡುತ್ತಿರುತ್ತಾರೆ. ಆ ಗುರುಗಳ ಬಗ್ಗೆ ಕೃತಜ್ಞತೆಯನ್ನು ವ್ಯಕ್ತಪಡಿಸುವುದೇ ಗುರುಪೂರ್ಣಿಮೆ ಆಚರಿಸುವುದರ ಹಿಂದಿನ ಉದ್ದೇಶವಾಗಿದೆ.

ಮಹತ್ವ:--ಗುರುಪೂರ್ಣಿಮೆಯಂದು ಗುರುತತ್ತ್ವವು (ಈಶ್ವರೀ ತತ್ತ್ವವು) ಇತರ ದಿನಗಳ ತುಲನೆಯಲ್ಲಿ ಒಂದು ಸಾವಿರ ಪಟ್ಟು ಹೆಚ್ಚು ಕಾರ್ಯನಿರತವಾಗಿರುತ್ತದೆ. ಆದ್ದರಿಂದ ಗುರುಪೂರ್ಣಿಮೆಯ ನಿಮಿತ್ತ ಮೊದಲಿನಿಂದಲೂ ಮನಃಪೂರ್ವಕ ಮಾಡಿದ ಸೇವೆ ಮತ್ತು ತ್ಯಾಗಗಳ ಲಾಭವು ಇತರ ದಿನಗಳ ತುಲನೆಯಲ್ಲಿ ವ್ಯಕ್ತಿಗೆ ಒಂದು ಸಾವಿರ ಪಟ್ಟು ಹೆಚ್ಚಾಗುತ್ತದೆ. ಆದ್ದರಿಂದ ಗುರುಪೂರ್ಣಿಮೆಯು ಈಶ್ವರ ಕೃಪೆಯ ಒಂದು ಅಮೂಲ್ಯ ಪರ್ವಕಾಲವೇ ಆಗಿದೆ.

ಗುರವೋ ಬಹವಃ ಸಂತಿ ಶಿಷ್ಯವಿತ್ತಾಪಹಾರಕಾಃ ।
ದುರ್ಲಭಃ ಸ ಗುರುರ್ಲೋಕೇ ಶಿಷ್ಯಚಿತ್ತಾಪಹಾರಕಃ ॥

ಗುರು–ಶಿಷ್ಯ ಪರಂಪರೆಯು ಹಿಂದೂಗಳ ಲಕ್ಷಾವಧಿ ವರ್ಷಗಳ ಚೈತನ್ಯಮಯ ಸಂಸ್ಕೃತಿಯಾಗಿದೆ. ಆದರೆ ಕಾಲದ ಪ್ರವಾಹದಲ್ಲಿ ರಜ, ತಮಪ್ರಧಾನ ಸಂಸ್ಕೃತಿಯ ಪ್ರಭಾವದಿಂದಾಗಿ ಮಹಾನ ಗುರು–ಶಿಷ್ಯ ಪರಂಪರೆಯನ್ನು ನಿರ್ಲಕ್ಷಿಸಲಾಗುತ್ತಿದೆ. ಗುರುಪೂರ್ಣಿಮೆಯ ನಿಮಿತ್ತದಿಂದ ಗುರುಪೂಜೆಯಾಗುತ್ತದೆ, ಹಾಗೆಯೇ ಗುರು–ಶಿಷ್ಯ ಪರಂಪರೆಯ ಶ್ರೇಷ್ಠತೆಯನ್ನು ಸಮಾಜಕ್ಕೆ ಹೇಳಲು ಸಾಧ್ಯವಾಗುತ್ತದೆ. ಸ್ವಲ್ಪದರಲ್ಲಿ ಹೇಳುವುದಾದರೆ ಗುರು–ಶಿಷ್ಯ ಪರಂಪರೆಯನ್ನು ಉಳಿಸಿಕೊಳ್ಳುವ ಸದವಕಾಶ ಲಭಿಸುತ್ತದೆ.

ಉತ್ಸವವನ್ನು ಆಚರಿಸುವ ಪದ್ಧತಿ

ಗುರುಗಳ ಬಗ್ಗೆ ಕೃತಜ್ಞತೆಯನ್ನು ವ್ಯಕ್ತಪಡಿಸಲು ಎಲ್ಲ ಗುರುಗಳ ಶಿಷ್ಯರು ಈ ದಿನದಂದು ಗುರುಗಳ ಪಾದಪೂಜೆಯನ್ನು ಮಾಡಿ ಅವರಿಗೆ ಗುರುದಕ್ಷಿಣೆಯನ್ನು ಅರ್ಪಿಸುತ್ತಾರೆ. ಈ ದಿನ ವ್ಯಾಸಪೂಜೆಯನ್ನು ಮಾಡುವ ಪದ್ಧತಿಯೂ ಇದೆ. ಗುರುಪರಂಪರೆಯಲ್ಲಿ ವ್ಯಾಸರನ್ನು ಸರ್ವಶ್ರೇಷ್ಠ ಗುರು ಎಂದು ಪರಿಗಣಿಸಲಾಗಿದೆ. ಎಲ್ಲ ವೇದಗಳು ಉಗಮವು ವ್ಯಾಸರಿಂದಲೇ ಆಗುತ್ತದೆ ಎನ್ನುವುದು ಭಾರತೀಯರ ನಂಬಿಕೆ. ಕುಂಭಕೋಣಮ್ ಮತ್ತು ಶೃಂಗೇರಿ ಇವು ದಕ್ಷಿಣ ಭಾರತದಲ್ಲಿನ ಶಂಕರಾಚಾರ್ಯರ ಪ್ರಸಿದ್ಧ ಪೀಠಗಳಾಗಿವೆ. ಇಲ್ಲಿ ವ್ಯಾಸಪೂಜಾ ಮಹೋತ್ಸವವು ನಡೆಯುತ್ತದೆ. ವ್ಯಾಸಮಹರ್ಷಿಗಳು ಮತ್ತೊಮ್ಮೆ ಶಂಕರಾಚಾರ್ಯರ ರೂಪದಲ್ಲಿ ಅವತರಿಸಿದರು ಎನ್ನುವುದು ಭಕ್ತರ ಶ್ರದ್ಧೆ. ಆದುದರಿಂದ ಈ ದಿನ ಸಂನ್ಯಾಸಿಗಳು ವ್ಯಾಸಪೂಜೆ ಎಂದು ಶಂಕರಾಚಾರ್ಯರ ಪೂಜೆಯನ್ನು ಮಾಡುತ್ತಾರೆ.

ಭಕ್ತಿಯೆಂಬ ಪೃಥ್ವಿಯ ಮೇಲೆ, ಗುರುವೆಂಬ ಬೀಜವಂಕುರಿಸಿ,



ಲಿಂಗವೆಂಬ ಎಲೆ ಜತ್ತು.
ಲಿಂಗವೆಂಬ ಎಲೆಯ ಮೇಲೆ ವಿಚಾರವೆಂಬ ಹೂವಾಣಜತ್ತು,
ಆಚಾರವೆಂಬ ಕಾಯಾ ಜತ್ತು.
ನಿಷ್ಪತ್ತಿಯೆಂಬ ಹಣ್ಣು ತೊಟ್ಟು ಬಿಟ್ಟು ಕಳಚಿ ಬೀಳುವಲ್ಲಿ
ಕೂಡಲಸಂಗಮದೇವ ತನಗೆ ಬೇಕೆಂದು ಎತ್ತಿಕೊಂಡ.

ಗುರುಪೂಜೆಯ ವಿಧಿ :-- ಸ್ನಾನಾದಿ ನಿತ್ಯಕರ್ಮಗಳನ್ನು ಮುಗಿಸಿ "ಗುರುಪರಂಪರಾ ಸಿದ್ಧರ್ಥಂ ವ್ಯಾಸಪೂಜಾಂ ಕರಿಷ್ಯೇ।" ಎಂದು ಸಂಕಲ್ಪ ಮಾಡುತ್ತಾರೆ. ಒಂದು ಶುಭ್ರವಸ್ತ್ರವನ್ನು ಹಾಸಿ ಅದರ ಮೇಲೆ ಪೂರ್ವದಿಂದ ಪಶ್ಚಿಮದ ಕಡೆಗೆ ಮತ್ತು ಉತ್ತರದಿಂದ ದಕ್ಷಿಣದ ಕಡೆಗೆ ಗಂಧದಿಂದ ಹನ್ನೆರಡು ರೇಖೆಗಳನ್ನು ಎಳೆಯುತ್ತಾರೆ. ಇದೇ ವ್ಯಾಸಪೀಠ. ಅನಂತರ ಬ್ರಹ್ಮ, ಪರಾತ್ಪರಶಕ್ತಿ, ವ್ಯಾಸ, ಶುಕದೇವ, ಗೌಡಪಾದ, ಗೋವಿಂದಸ್ವಾಮಿ ಮತ್ತು ಶಂಕರಾಚಾರ್ಯರನ್ನು ಈ ವ್ಯಾಸಪೀಠದ ಮೇಲೆ ಆವಾಹನೆ ಮಾಡಿ ಅವರಿಗೆ ಷೋಡಶೋಪಚಾರ ಪೂಜೆಯನ್ನು ಮಾಡುತ್ತಾರೆ. ಈ ದಿನ, ದೀಕ್ಷಾಗುರು ಹಾಗೂ ತಂದೆ–ತಾಯಿಯರ ಪೂಜೆಯನ್ನೂ ಮಾಡುವ ಪದ್ಧತಿಯಿದೆ.

ವಾಸ್ತವವಾಗಿ, ಹಿಂದೂಮತದ ಕೆಲವು ಪ್ರಕಾರಗಳಲ್ಲಿ ಭಕ್ತರು ಗುರು ಮತ್ತು ದೇವರ ಜೊತೆ ತೋರಿಸಲ್ಪಟ್ಟರೆ, ಮೊದಲಿಗೆ ಭಕ್ತನು ಗುರುವಿಗೆ ಗೌರವವನ್ನು ತೋರಿಸುತ್ತಾನೆ ಏಕೆಂದರೆ ಗುರುವು ಅವನನ್ನು ದೇವರೆಡೆಗೆ ಕರೆದೊಯ್ಯುವ ಒಂದು ಸಾಧನವಾಗಿದ್ದಾನೆ. ಗುರು ಎಂಬ ವಿಷಯವು ಅತಿ ಹಳೆಯದಾದ ಉಪನಿಷತ್ತುಗಳ ಕಾಲದಿಂದಲೂ ಇತ್ತು ಎಂಬುದಾಗಿ ಕಂಡು ಹಿಡಿಯಲಾಗಿದೆ. ಅಲ್ಲಿ ಭೂಮಿಯ ಮೇಲಿನ ದೈವಿಕತೆಯೆ ಗುರು. ಆದುದರಿಂದ ಕೆಲವು ಸಂಪ್ರದಾಯಗಳು "ಗುರು, ದೇವರು ಮತ್ತು ಸ್ವಯಂ" (ಸ್ವಯಂ ಅಂ–ದರೆ ಆತ್ಮ, ವ್ಯಕ್ತಿಯಲ್ಲ) ಒಂದೇ ಎಂಬುದಾಗಿ ಹೇಳುತ್ತವೆ.

ಗುರು ಕರುಣಿಸಲು ಸಂಸಾರ ವಿಷಯ ಕೆಟ್ಟಿತ್ತು.
ಮಾಯಾ ಪ್ರಪಂಚು ಬಿಟ್ಟಿತ್ತು.
ಮುಂದಣ ಹುಟ್ಟರತು ಹೋಯಿತ್ತು.
ನೆಟ್ಟಗೆ ಗುರುಪಾದವ ಮುಟ್ಟಿ ಭವಗೆಟ್ಟೆನು ಕಾಣಾ!
ರಾಮನಾಥ.

ಅರಿವಿನ ಅಭಿವೃದ್ಧಿಯ ಒಂದು ಮೂಲತತ್ವವಾಗಿ ಇದು ಕಾಲ್ಪನಿಕತೆಯಿಂದ ನಿಜಸ್ಥಿತಿಯ ನಿರ್ಮಾಣಕ್ಕೆ, ಅಜ್ಞಾನದ ಅಂಧಕಾರದಿಂದ ಜ್ಞಾನದ ಬೆಳಕಿನೆಡೆಗೆ ಕರೆದೊಯ್ಯುತ್ತದೆ. ಇದರ ಮೂಲರೂಪದಲ್ಲಿ ಈ 'ಗುರು' ಪರಂಪರೆಯ ತತ್ವವು ಭೂಮಿಯಲ್ಲಿಯ ಒಂದು ದೈವಿಕ ಮೂರ್ತರೂಪ. 'ಗುರು' ಭೂಮಿಯ ಮೇಲಿರುವ ಅತಿಭೌತಿಕ ಹಾಗೂ ಉನ್ನತ ಶಕ್ತಿಯ ಕುರಿತಾದ ಅತ್ಯುನ್ನತ ಜ್ಞಾನವನ್ನು ಹೊಂದಿರುವ ಒಬ್ಬ ವ್ಯಕ್ತಿ. ಗುರು :-- ಸಾಮಾನ್ಯವಾಗಿ ಗುರು ಎಂದರೆ ಒಂದು ನಿರ್ದಿಷ್ಟ ವಿಭಾಗದಲ್ಲಿ ಹೆಚ್ಚಿನ ಜ್ಞಾನ, ಬುದ್ಧಿವಂತಿಕೆ ಮತ್ತು ನಿಪುಣತೆಯನ್ನು ಹೊಂದಿರುವ, ಮತ್ತು ಇತರರಿಗೆ ನಿರ್ದೇಶನವನ್ನು ನೀಡಲು ಈ ಬುದ್ಧಿವಂತಿಕೆಗಳನ್ನು ಬಳಸುವ ವ್ಯಕ್ತಿ ಎಂದರ್ಥವಾಗುತ್ತದೆ. ಸಂಸ್ಕೃತದಲ್ಲಿ 'ಗು' ಅಂದರೆ ಅಂಧಕಾರ ಮತ್ತು 'ರು' ಅಂದರೆ ಬೆಳಕು. "ಗುರು" ಎಂಬ ಪದವನ್ನು ಹಿಂದುತ್ವದಲ್ಲಿ ದೈವಸ್ವರೂಪಿ ವ್ಯಕ್ತಿತ್ವದ ಬೃಹಸ್ಪತಿಗೆ ಹೇಳಲಾಗುತ್ತದೆ.

ವೈದಿಕ ಜ್ಯೋತಿಷ್ಯ ಶಾಸ್ತ್ರದಲ್ಲಿ, ಗುರು ಅಥವಾ ಬೃಹಸ್ಪತಿಯು ಕಲಿಕೆಯ ಮೇಲೆ ಪ್ರಭಾವ ಬೀರುತ್ತಾರೆ ಎಂದು ನಂಬಲಾಗಿದೆ. ಆದಾಗ್ಯೂ, ಹಿಂದಿಯಂತಹ ಹಲವಾರು ಭಾರತೀಯ ಭಾಷೆಗಳಲ್ಲಿ, ಪಾಶ್ಚಾತ್ಯರ ಖ್ರಿಣಢಿಜಚಿಥಿ ಬೃಹಸ್ಪತಿವಾರ ಅಥವಾ ಗುರುವಾರ (ವಾರ ಅಂದರೆ ಸಪ್ತಾಹದ ಒಂದು ದಿನ) ಎಂದು ಕರೆಯಲ್ಪಡುತ್ತದೆ. ಇತ್ತೀಚಿನ ದಿನಗಳಲ್ಲಿ ಭಾರತದಲ್ಲಿ, "ಗುರು" ಎಂಬ ಶಬ್ದವು ವ್ಯಾಪಕವಾಗಿ "ಶಿಕ್ಷಕ" ಎಂಬ ಸಾಮಾನ್ಯ ಅರ್ಥದ ಜೊತೆ ಬಳಸಲ್ಪಡುತ್ತದೆ.

ಪಾಶ್ಚಾತ್ಯರು 'ಗುರು' ಎಂಬ ಶಬ್ದದ ಅರ್ಥವು ಅನುಯಾಯಿಗಳನ್ನು ಹೊಂದುವ ಸಾಮರ್ಥ್ಯ ಹೊಂದಿರುವ ಯಾವುದೇ ವ್ಯಕ್ತಿಗೂ ಕೂಡಾ ಬಳಸಬಹುದಾಗಿದೆ. ಅವರು ತತ್ವಶಾಸ್ತ್ರದ ಅಥವಾ ಯಾವುದಾದರೂ ಧಾರ್ಮಿಕ ಪಂಥಕ್ಕೆ ಸೇರಬೇಕೆಂದೇನಿಲ್ಲ. ಇನ್ನೂ ಹೆಚ್ಚಾಗಿ ಪಾಶ್ಚಾತ್ಯರು, ಒಬ್ಬ ವ್ಯಕ್ತಿಯು ಪ್ರಾಪಂಚಿಕವಾದ ವಿಷಯಕ್ಕೆ ಸಂಬಂಧಿಸಿದಂತೆ ಉತ್ತಮ ಜ್ಞಾನ, ನೈಪುಣ್ಯತೆಯನ್ನು ಹೊಂದಿದ್ದರೂ ಕೂಡ 'ಗುರು' ಎಂಬ ಶಬ್ದವನ್ನು ಬಳಸುತ್ತಾರೆ. ಉದಾಹರಣೆಗೆ 'ವ್ಯವಹಾರ' ಪ್ರಪಂಚಕ್ಕೆ ಕುರಿತಾದ ಉತ್ತಮ ಜ್ಞಾನ ಹೊಂದಿರುವ ವ್ಯಕ್ತಿಯನ್ನು 'ಗುರು' ಎಂದು ಕರೆಯಲಾಗುತ್ತದೆ.

ಆಚಾರಗುರು, ಸಮಯಗುರು, ಜ್ಞಾನಗುರು.
ಆಚಾರಗುರು ಬ್ರಹ್ಮಕಲ್ಪವ ತೊಡೆಯಬೇಕು.
ಸಮಯಗುರು ವಿಷ್ಣುವಿನ ಸ್ಥಿತಿಯ ಹರಿಯಬೇಕು.
ಜ್ಞಾನಗುರು ಉತ್ಪತ್ಯಸ್ಥಿತಿಲಯ ಮೂರನೂ ಕಳೆಯಬೇಕು.
ಇಂತೀ ತ್ರಿವಿಧಗುರು ಏಕವಾದಲ್ಲಿ,
ಸದ್ಗುರುಮದ್ಗುರುಮಹಾಗುರವೆಂಬೆ,
ನಿಃಕಳಂಕ ಮಲ್ಲಿಕಾರ್ಜುನಾ.

ಗುರುವಿನ ಪಾತ್ರ:--ಗುರುವಿನ ಪಾತ್ರವು ವೇದಾಂತ, ಯೋಗ, ತಂತ್ರ ಮತ್ತು ಭಕ್ತಿಗಳಂತಹ ಹಿಂದೂ ಸಂಪ್ರದಾಯದ ಶಬ್ದಗಳ ಮೂಲ ಅರ್ಥದಲ್ಲಿ ಮುಂದುವರೆಯುತ್ತ ಹೋಗುತ್ತದೆ. ವಾಸ್ತವವಾಗಿ, ಭೂಮಿಯ ಮೇಲೆ ಒಬ್ಬ ಗುರುವು ಒಬ್ಬ ವ್ಯಕ್ತಿಯ ಆಧ್ಯಾತ್ಮಿಕ ನಿರ್ದೇಶಕ. ಗುರುವು ತನ್ನ ಶಿಷ್ಯರಲ್ಲಿ ಸುಪ್ತ ಮನಸ್ಸಿನಲ್ಲಿ ಆಧ್ಯಾತ್ಮಿಕ ಜ್ಞಾನಗಳನ್ನು ಜಾಗೃತಗೊಳಿಸುತ್ತಾನೆ. ಈ ಕ್ರಿಯೆಗೆ ಶಕ್ತಿಪಥ ಎಂದು ಕರೆಯುತ್ತಾರೆ.

ಮಡಕೆಯ ಮಾಡುವಡೆ ಮಣ್ಣೆ ಮೊದಲು,
ತೊಡಿಗೆಯ ಮಾಡುವಡೆ ಹೊನ್ನೆ ಮೊದಲು,
ಶಿವಪಥವನರಿವಡೆ ಗುರುಪಥವೆ ಮೊದಲು,
ಕೂಡಲಸಂಗಮದೇವರನರಿವಡೆ
ಶರಣರ ಸಂಗವೆ ಮೊದಲು.

ಹಿಂದೂಮತದಲ್ಲಿ, ಗುರುವು ಸಾಧುವಿನ ಗುಣಗಳನ್ನು ಹೊಂದಿರುವ ಗೌರವಾನ್ವಿತ ವ್ಯಕ್ತಿ, ಅವನ ಅಥವಾ ಅವಳ ಅನುಯಾಯಿಗಳ ಮನಸ್ಸನ್ನು ಬೆಳಗಿಸುವ, ಒಬ್ಬ ವ್ಯಕ್ತಿಯು ಯಾರಿಂದ ಮೊದಲಿನ ಮಂತ್ರವನ್ನು ತೆಗೆದುಕೊಳ್ಳುತ್ತಾನೋ ಅಂತಹ ಶಿಕ್ಷಕ, ಮತ್ತು ವಿಧಿವತ್ತಾದ ನಡವಳಿಕೆ ಮತ್ತು ಧಾರ್ಮಿಕ ಅನುಷ್ಠಾನಗಳಲ್ಲಿ ನಿರ್ದೇಶನವನ್ನು ನೀಡುವ ಒಬ್ಬ ವ್ಯಕ್ತಿ ಎಂಬುದಾಗಿ ಪರಿಗಣಿಸಲಾಗಿದೆ.

ಗುರು ಗೋವಿಂದ ದೋಹು ಖಡೆ, ಕಾಕೆ ಲಾಂಗೂ ಪಾಯ।
ಬಲಿಹಾರಿ ಗುರು ಅಪನೇ ಗೋವಿಂದ ದಿಯೋ ಬತಾಯೇ॥

ಒಬ್ಬ ಗುರುವು ದೀಕ್ಷೆಯ ವಿಧಿಯನ್ನೂ ನೀಡುತ್ತಾನೆ, ದೀಕ್ಷೆ ಅಂದರೆ ಒಬ್ಬ ಗುರುವಿನ ಕೃಪೆಯಿಂದ ಅವನ ಅನುಯಾಯಿಯ ಆಧ್ಯಾತ್ಮಿಕ ಜಾಗೃತಿ ಎಂಬುದಾಗಿದೆ. ದೀಕ್ಷೆಯು ಒಬ್ಬ ಗುರುವಿನ ದೈವಿಕ ಶಕ್ತಿಗಳನ್ನು ಅವನ ಅನುಯಾಯಿಗಳ ಮೇಲೆ ಅನುಗ್ರಹಿಸುವ ಒಂದು ಪದ್ಧತಿ ಎಂಬುದಾಗಿ ಪರಿಗಣಿಸಲಾಗಿದೆ, ಆ ದೀಕ್ಷೆಯ ಮೂಲಕ ಅನುಯಾಯಿಯು ದೈವಿಕತೆಯ ಮಾರ್ಗದಲ್ಲಿ ನಿರಂತರವಾಗಿ ಪ್ರಗತಿಯನ್ನು ಹೊಂದುತ್ತಾನೆ.

ನರಜನ್ಮವ ತೊಡೆದು ಹರಜನ್ಮವ ಮಾಡಿದ ಗುರುವೆ ನಮೋ.
ಭವಬಂಧನವ ಬಿಡಿಸಿ ಪರಮಸುಖವ ತೋರಿದ ಗುರುವೆ ನಮೋ.
ಭವಿಯೆಂಬುದ ತೊಡೆದು ಭಕ್ತೆ ಎಂದೆನಿಸಿದ ಗುರುವೆ ನಮೋ.
ಚೆನ್ನಮಲ್ಲಿಕಾರ್ಜುನನ ತಂದೆನ್ನ ಕೈವಶಕ್ಕೆ ಕೊಟ್ಟ ಗುರುವೆ, ನಮೋ ನಮೋ.

ಸರ್ವ ಗುರುವರ್ಯರಿಗೂ, ಗುರು ಪರಂಪರೆಗೂ ಗುರು ಪೂರ್ಣಿಮೆಯ ನಮನಗಳು ಹಾಗೂ ತಮಗೂ ಸಹ ಗುರು ಪೂರ್ಣಿಮೆಯ ಹಾರ್ದಿಕ ಶುಭಾಶಯಗಳು.

**ಷ.ಬ್ರ.ಡಾ.ಅಭಿನವ ರಾಮಲಿಂಗ ಶ್ರೀ**
**9341137882.**



ಹಾರಕೂಡ ಶ್ರೀಮಠಕ್ಕೆ ಆಗಮಿಸಿದ ಧನರಾಜ ತಾಳಂಪಳ್ಳಿ ಅವರನ್ನು ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ನಿವೃತ್ತ ನ್ಯಾಯಾಧೀಶರಾದ ಸುಭಾಷಚಂದ್ರ ನಾಗರಾಳೆ ಮುಖಂಡರಾದ ಅರ್ಜುನ ಕನಕ, ಮನೋಹರ ಮೈಸೆ, ರಾಜಕುಮಾರ ಘಾಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.(ಮಲ್ಲಮ್ಮ ನುಡಿ ಚಿತ್ರ)

# ಬಸವಣ್ಣ ಜಗತ್ತಿನ ಅತ್ಯಂತ ಶ್ರೇಷ್ಠ ಗುರು : ರುದ್ರಮಣಿ ಮಠಪತಿ.




(ವರದಿ.ಡಿ.ಕೆ.ಪ್ರಹ್ಲಾದಕುಮಾರ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಜು 9 ಕಾಯಕ–ದಾಸೋಹದ ಪರಿಕಲ್ಪನೆ ನೀಡಿ, ಸಮಾಜದಲ್ಲಿ ಸಮಾನತೆ, ಸ್ವಾವಲಂಬನೆ, ಸಹಬಾಳ್ವೆಗೆ ಮಾರ್ಗ ತೋರಿದ ಬಸವಣ್ಣನವರು ಜಗತ್ತಿನ ಅತ್ಯಂತ ಶ್ರೇಷ್ಠ ಗುರುವಾಗಿದ್ದಾರೆ ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಡಾ. ರುದ್ರಮಣಿ ಮಠಪತಿ ಹೇಳಿದರು.

ಇಲ್ಲಿನ ಅನುಭವ ಮಂಟಪ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಲಿಂಗೈಕ್ಯ ಗಂಗಮ್ಮ ಲಕಶೆಟ್ಟಿ ಸ್ಮರಣಾರ್ಥ ದತ್ತಿ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕಾಯಕ ಮತ್ತು ದಾಸೋಹ ವಿಶ್ವದ ಎಲ್ಲಿಯೂ ಇಲ್ಲದ ಶ್ರೇಷ್ಠ ಆಚರಣೆ ಬಸವಾದಿ ಶರಣರು ಬಳುವಳಿಯಾಗಿ ನೀಡಿದ್ದಾರೆ ಎಂದರು

ಬಸವೇಶ್ವರ ಪದವಿ ಕಾಲೇಜು ಉಪನ್ಯಾಸಕ ಡಾ. ಭೀಮಾಶಂಕರ ಬಿರಾದಾರ ಅವರು ಶರಣ–ರ ದಾಸೋಹದ ಪರಿಕಲ್ಪನೆ ಕುರಿತು ಮಾತನಾಡಿ, ಸ್ಥಗಿತ ಮತ್ತು ಸಾಂಸ್ಥಿಕ ರಚನೆಗಳನ್ನು ನಿರಚನಗೊಳಿಸಿದ ವಚನಕಾರರು ಹೊಸ ಸಾಮಾಜವನ್ನು ರೂಪಿಸುವ ಹಾಗೂ ಅದಕ್ಕೆ ಅಗತ್ಯವಾದ ಶುದ್ಧತೆಯಿಂದ ಕೂಡಿದ ಕಾಯಕ ಸಿದ್ಧಾಂತ ಅಸ್ತಿತ್ವಕ್ಕೆ ತಂದರು ಎಂದು ಹೇಳಿದರು.

ತಾನ್ನದು, ತಾನು ಎಂಬ ಅಹಮ್ಮಿಕೆ ಇಲ್ಲದ, ಯಾವುದೇ ಹಂಗು ಇಲ್ಲದ ಧಾನ್ಯ, ಅನ್ನಕ್ಕೆ ದಾಸೋಹವೆಂಬ ತಾತ್ವಿಕ ಚೌಕಟ್ಟನ್ನು ವಚನಕಾರರು ರೂಪಿಸಿದರು. ಶರಣರ ಒಟ್ಟು ಚಿಂತನೆಗಳು ವ್ಯಕ್ತಿ, ಸಮಾಜ ಮತ್ತು ಸಂಸ್ಕೃತಿ ಕೇಂದ್ರಿತವಾಗಿವೆ ಎಂದರು.

ಅನುಭವ ಮಂಟಪ ಎಂಬ ವೈಚಾರಿಕ, ಬೌದ್ಧಿಕ ಲೋಕ ಎಷ್ಟೊಂದು ಸತ್ವಯುತವಾದ , ತಾತ್ವಿಕವಾದ , ತಾರ್ಕಿಕ ಮತ್ತು ವೈಜ್ಞಾನಿಕವಾದ ವಿವೇಚನೆ ನೀಡುವ ಮೂಲಕ ಕನ್ನಡದ ವಿವೇಕವನ್ನು ವಿಸ್ತರಿಸಿ, ಕನ್ನಡ ಪ್ರಜ್ಞೆಯನ್ನು ಬೆಳೆಸಿದೆ. ಈ ನೆಲದ ಅಸ್ಮಿತೆ ರೂಪಿಸಿದ ಅನುಭವ ಮಂಟಪ ಎಲ್ಲ ಸಮುದಾಯದವರ ಒಳಗೊಳ್ಳುವಿಕೆ ಮೂಲಕ ಬಹುತ್ವ ಮತ್ತು ವೈವಿಧ್ಯತೆಗೆ ಆದ್ಯತೆ ನೀಡಿತ್ತು. ಈ ಕಾರಣದಿಂದ ಅನುಭವ ಮಂಟಪ ಎಂದಿಗೂ ಪ್ರಸ್ತುತ ಎಂದರು.

ಸಾನಿಧ್ಯ ವಹಿಸಿದ್ದ ಅನುಭವ ಮಂಟಪ ಟ್ರಸ್ಟ್ ಸಂಚಾಲಕ ಪೂಜ್ಯ ಶಿವಾನಂದ ದೇವರು ಆಶೀರ್ವಚನ ನೀಡಿ, ಶರಣರ ಕಾಲದಲ್ಲಿ ಕಲ್ಯಾಣದಲ್ಲಿ ಲಕ್ಷ ಲಕ್ಷ ಜನರು ಪ್ರಸಾದ ಸ್ವೀಕರಿಸುವ ದಾಸೋಹ ವ್ಯವಸ್ಥೆ ಇರುವುದು ಶರಣರ ವಚನಗಳಿಂದ ತಿಳಿದು ಬರುತ್ತದೆ. ಆಧುನಿಕ ಅನುಭವ ಮಂಟಪ ರುವಾರಿ ಪೂಜ್ಯ ಚೆನ್ನಬಸವ ಪಟ್ಟದೇವರು, ನಾಡೋಜ ಬಸವಲಿಂಗ ಪಟ್ಟದೇವರು, ಗುರುಬಸವ ಪಟ್ಟದೇವರು ಬಸವಾದಿ ಶರಣರ ದಾಸೋಹ ಸಿದ್ಧಾಂತ ಮುಂದುವರೆಸಿಕೊಂಡು ಬರುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ

ದತ್ತಿ ದಾಸೋಹಿ ಚಂದ್ರಕಲಾ ಲಕಶೆಟ್ಟಿ, ಶಿವಶರಣಪ್ಪ ಲಕಶೆಟ್ಟಿ, ಅಶೋಕರೆಡ್ಡಿ ಗದಲೇಗಾವ, ಶ್ರೀನಿವಾಸ ಉಮಾಪುರೆ, ಪವನ ಪಾಟೀಲ, ವೀರೇಶ ಸ್ವಾಮಿ, ನಾಗರಾಜ ನಾಸೆ, ಗೋವಿಂದ ಜಮಾದಾರ, ಎಂಡಿ ಜಬಿ, ಅಶೋಕ ಕುಮಾರ್, ಶ್ರೀಶೈಲ ಬಿರಾದಾರ, ಗಂಗಾಧರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ದತ್ತಿ ದಾಸೋಹಿ ಡಾ. ಮಲ್ಲಿಕಾರ್ಜುನ ಲಕಶೆಟ್ಟಿ ಹಾಗೂ ಕಸಾಪ ನೂತನ ಅಧ್ಯಕ್ಷರಾದ ರುದ್ರಮಣಿ ಮಠಪತಿ ಅವರನ್ನು ಸನ್ಮಾನಿಸಲಾಯಿತು.

ಡಾ ಬಸವರಾಜ ಖಂಡಾಳೆ ನಿರೂಪಿಸಿದರು. ಗಂಗಾಧರ ಸಾಲಿಮಠ ಸ್ವಾಗತಿಸಿದರು.

# ಸುಡುಗಾಡು ಸಿದ್ದರು ತಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಿ :ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ – ಸುಡುಗಾಡು ಸಿದ್ಧರು ಅಲೆಮಾರೆ ಜನಾಂಗದವರಾಗಿದ್ದು, ಶಿಕ್ಷಣ ಹಾಗೂ ಇತರೆ ಸೌಕರ್ಯಗಳಿಂದ ವಂಚಿತರಾಗಿದ್ದಾರೆ ಎಂದು ಮಾಜಿ ಸಚಿವ ರಾಜಶೇಖರ ಬಿ. ಪಾಟೀಲ ತಾಲೂಕಿನ ಹುಡಗಿ ಗ್ರಾಮದ ಖಾಸಗಿ ಕಲ್ಯಾಣ ಮಂಟಪದಲ್ಲಿ ಅಲೆಮಾರಿ ಸುಡಗಾಡ ಸಿದ್ದರ ಸಮಾಜದ ವತಿಯಿಂದ ಬುಧವಾರ ಆಯೋಜಿಸಿದ್ದ ಬೃಹತ್ ಸಮಾವೇಶ ಉದ್ಘಾಟಿಸಿ ಮಾತನಾಡಿದರು. ರಾಜ್ಯ ಸರ್ಕಾರ ಅಲೆಮಾರಿ ಜನಾಂಗದವರ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆಗೊಳಿಸಿದೆ ಇದರ ಸದುಪಯೋಗವನ್ನು ಪಸಡೆದುಕೊಳ್ಳಬಕೆಂದು ಕರ ನೀಡಿದರು.

ಈ ಸಮಾಜದ ಮಕ್ಕಳು ಕೂಡಾ ತಮ್ಮ ತಂದೆ ತಾಯಿಯರ ನಿರೀಕ್ಷೆಗೆ ಅನುಗುಣವಾಗಿ ಸರಿಯಾದ ರೀತಿಯಲ್ಲಿ ಅಧ್ಯಾಯ ಮಾಡುವ ಮೂಲಕ ತಮ್ಮ ಭವಿಷ್ಯ ರೂಪಿಸಿಕೊಂಡು ಉತ್ತಮ ನಾಗರಿಕರಾಗಬೇಕು ಎಂದು ಸಲಹೆ ನೀಡಿದರು.

ಅಲೆಮಾರಿ ಸುಡಗಾಡ ಸಿದ್ದರ ಸಮಾಜದ ಜಿಲ್ಲಾಧ್ಯಕ್ಷ ಹಣಮಂತ ಕಡಮಂಚಿ ಮಾತನಾಡಿ, ಅಲೆಮಾರಿ ಸಮಾಜದ ಒಳಿತಿಗಾಗಿ ಮಾಜಿ ಸಚಿವ ದಿ. ಬಸವರಾಜ ಪಾಟೀಲ್ ಸೇರಿ ಪಾಟೀಲ್ ಪರಿವಾರದ ಸದಸ್ಯರು ಬಹಳಷ್ಟು ಸಹಕಾರ ನೀಡಿದ್ದಾರೆ. ಅದರಂತೆ ಈಗಲೂ ಕೂಡಾ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಹೆಚ್ಚಿನ ಒತ್ತು ನೀಡುವ ಮೂಲಕ ನಮ್ಮ ಸಮಾಜಕ್ಕೆ ಸರಕಾರದ ಎಲ್ಲ ಸೌಲಭ್ಯಗಳನ್ನು ಒದಗಿಸಿಕೊಡಬೇಕು ಎಂದು ಮನವಿ ಮಾಡಿದರು.

ಅಲೆಮಾರಿ ಸಮಾಜದ ಯುವ ಮುಖಂಡ ಕೃಷ್ಣಪ್ಪ ಮಾತನಾಡಿ, ಅಲೆಮಾರಿ ಸಮಾಜದ ಬೆಳವಣಿಗೆಗಾಗಿ ಹಾಗೂ ಸರಕಾರದ ವಿವಿಧ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ನಮಗೆ ಜಾತಿ ಪ್ರಮಾಣ ಪತ್ರ ಅವಶ್ಯಕತೆ ಇದ್ದು, ಜಾತಿ ಪ್ರಮಾಣ ಪತ್ರಕ್ಕಾಗಿ ಸುಮಾರು ವರ್ಷಗಳಿಂದ ತಹಸೀಲ್ ಕಚೇರಿಗೆ ಅಲೆದಾಡುತ್ತಿದ್ದರು ಕೂಡಾ ಅಲೆಮಾರಿ ಜನಾಂಗಕ್ಕೆ ಜಾತಿ ಪ್ರಮಾಣ ಪತ್ರ ನೀಡಲು ಅಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರು ಸರಕಾರದ ಮೇಲೆ ಹೆಚ್ಚಿನ ಒತ್ತಡ ಹಾಕುವ ಮೂಲಕ ಅಲೆಮಾರಿ ಜನಾಂಗಕ್ಕೆ ನ್ಯಾಯ ಒದಗಿಸಿಕೊಡಬೇಕು ಎಂದರು.

ಈ ಸಂದರ್ಭದಲ್ಲಿ ಹುಡಗಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ವಿರೂಪಾಕ್ಷ ಶಿವಾಚಾರ್ಯರು, ಗ್ರಾಪಂ. ಉಪಾಧ್ಯಕ್ಷ ಎಂ.ಡಿ. ಸಿದಿಕಶಾ, ಶಿವಾನಂದ ಕಟ್ಟಿ ಕಂಟೆಪ್ಪ ದಾನ, ಸುರೇಶ ಘಾಂಗ್ರೆ, ನೀಲಕಂಠ ಶಟ್ಟಿ, ಪ್ರದೀಪ ಪಸಾರ್ಗಿ, ಶಾಂತಕುಮಾರ ಅರಳಿ, ಅಂತೋಷ ಅತಿವಾಳ, ಸುಧಾಕರ ಸಂಗಮ, ಶಿವಕುಮಾರ ಸಾಗರ, ನರಸಿಂಹಲು ರಾಜೇಶ್ವರ, ಲಕ್ಷ್ಮಣ ಹಣಮಂತ, ಕೃಷ್ಣರಾಮಯ್ಯ, ಕೃಷ್ಣ ಕುಡಂಬಲ ಸೇರಿ ಅನೇಕರಿದ್ದರು.

# ಜು. 14ರಂದು ಕನ್ನಡ ಶಾಲೆಗಳು ಉಳಿಸಿ ಕರ್ನಾಟಕ ಉಳಿಸಿ ಹೋರಾಟ ಸತ್ಯಾಗ್ರಹ : ಜಲಾದೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 09 : ಈ ತಿಂಗಳ 14ರಂದು ರಾಜ್ಯಾದ್ಯಂತ ಕನ್ನಡ ಶಾಲೆಗಳು ಉಳಿಸಿ ಕರ್ನಾಟಕ ಉಳಿಸಿ ಎಂಬ ಸಂಕಲ್ಪದೊಂದಿಗೆ 8 ಬೇಡಿಕೆಗಳು ಮುಂದಿಟ್ಟುಕೊಂಡು ಹೋರಾಟ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಕಲ್ಯಾಣ ಕರ್ನಾಟಕ ಅನುದಾನ ರಹಿತ ಶಾಸಗಿ ಶಾಲಾ ಅಡಳಿತ ಮಂಡಳಿ ಸಂಘದ ಗೌರವಾಧ್ಯಕ್ಷರು ಹಾಗೂ ಕನ್ನಡ ಸಂರಕ್ಷಣಾ ಸಮಿತಿ ಸಂಚಾಲಕ ರೇವಣಸಿದ್ದಪ್ಪ ಜಲಾದೆ ಹೇಳಿದರು.

ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ರಾಜ್ಯ ಸರ್ಕಾರ ಕನ್ನಡ ಶಾಲೆಗಳನ್ನು ಬಂದ್ ಮಾಡಿ, 5 ಲಕ್ಷ ಕನ್ನಡ ಮಾಸ್ತರ್‌ಗಳಿಗೆ ಸಂಚಕಾರ ತರಲು ಹೊರಟಿದೆ. ಪ್ರತಿ ವರ್ಷ ನವಿಕರಣ ಹೆಸರಲ್ಲಿ ಖಾಸಗಿ ಶಾಲೆಗಳಿಗೆ ಶೋಷಣೆ ಮಾಡಲಾಗುತ್ತಿದೆ. ರಾಜ್ಯದ ಶೇಕಡಾ 70 ಪ್ರತಿಶತ ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲ. ಆದರೂ ಆ ಶಾಲೆಗಳಲ್ಲಿ ಆಂಗ್ಲ ಮಾದ್ಯಮ ಶಾಲೆಗಳಾಗಿ ಪರಿವರ್ತನೆ ಮಾಡಲು ಸರ್ಕಾರ ಹೊರಟಿದೆ. ಬರೀ ಸರ್ಕಾರಿ ಶಾಲೆ ಹೆಚ್ಚಸಿದರೆ ಸಾಲದು, ಮೌಲ್ಯುತ ಶಿಕ್ಷಣ ನೀಡುವ ವ್ಯವಸ್ಥೆ ಆಗಬೇಕು. ರಾಜ್ಯ ರಾಜ್ಯಧಾನಿ ಬೆಂಗಳೂರಲ್ಲಿ ಕೇವಲ 1 ಮಾತ್ರ ಕನ್ನಡ ಶಾಲೆ ಉಳಿದಿರುವುದು ದೊಡ್ಡ ದುರಂತ. ಪಾಲಕರಾದವರು ಬೇವಿನ ಬೀಜ ಬಿತ್ತಿ, ಮಾವಿನ ಹಣ್ಣು ನಿರಿಕ್ಷಿಸುವಂತಾಗಿದೆ ಈಗಿನ ಪರಿಸ್ಥಿತಿ ಎಂದು ಕಳವಳ ವ್ಯಕ್ತಪಡಿಸಿದರು.

ಬೀದರ್ ಜಿಲ್ಲೆಯಲ್ಲಿ ಈಗಾಗಲೇ 150 ಸರ್ಕಾರಿ ಕನ್ನಡ ಶಾಲೆಗಳು ಮುಚ್ಚಿವೆ. 100 ಕನ್ನಡ ಶಾಲೆಗಳು ಆಂಗ್ಲ ಮಾಧ್ಯಮ ಶಾಲೆಗಳಾಗಿ ಪರಿವರ್ತನೆಯಾಗಿವೆ. ಒಂದು ಸರ್ಕಾರಿ ಶಾಲೆಯಲ್ಲಿ ಸಹಾಯಕರಿಲ್ಲ. ಅಲ್ಲಿ ಮುಖ್ಯ ಗುರುವಿಗೆ ಲೆಕ್ಕ ಬರೆಯುವ ಕೆಲಸ ಮಾತ್ರ ಸೀಮಿತವಾಗಿದೆ. ಹೀಗಿರುವಾಗ ಗುಣಮಟ್ಟದ ಶಿಕ್ಷಣ ನಿರಿಕ್ಷಿಸಲು ಹೇಗೆ ಸಾಧ್ಯ? ಎಂದು ಪ್ರಶ್ನೆ ಮಾಡಿದರು.




14ರಂದು ರಾಜ್ಯಾದ್ಯಂತ ಹೋರಾಟಕ್ಕೆ ಕರೆಕೊಟ್ಟಿರುವುದರ ಜೊತೆಗೆ ಕಲ್ಯಾಣ ಕರ್ನಾಟಕ ಭಾಗದ 7 ಜಿಲ್ಲೆಗಳ 52 ತಾಲೂಕುಗಳಲ್ಲಿ ನಮ್ಮ ಸಂಘದ ಆಯಾ ತಾಲೂಕು ಅಧ್ಯಕ್ಷರ ನೇತೃತ್ವದಲ್ಲಿ, ತಹಸಿಲ ಕಚೇರಿ ಎದುರು. ಜಿಲ್ಲಾ ಮಟ್ಟದಲ್ಲಿ ಆಯಾ ಜಿಲ್ಲಾಧ್ಯಕ್ಷರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ, ಕೈಗೆ ಕಪ್ಪು ಪಟ್ಟಿ ಧರಿಸಿ ಅಂದು ಬೆಳಿಗ್ಗೆ 11 ಗಂಟೆಯಿಂದ ಸಾಯಂಕಾಲ 4 ಗಂಟೆ ವರೆಗೆ ಸತತ 5 ತಾಸು ಹೋರಾಟ ಹಮ್ಮಿಕೊಳ್ಳಲಾಗಿದೆ. ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ವಿವಿಧ ಕನ್ನಡ[ರ ಸಂಘಟನೆಗಳು ಕೈ ಜೋಡಿಸಿರುವುದು ಸ್ವಾಗತಾರ್ಹ ಕ್ರಮ. ಈ ಹೋರಾಟ ರೂಪ ರೇಷ ಸಿದ್ದಪಡಿಸಲು ಕಳೆದ 15 ದಿವಸಗಳ ಹಿಂದೆ ಜಿಲ್ಲೆಯ 15 ಜನ ಖಾಸಗಿ ಶಾಲೆಗಳ ಅಡಳಿತ ಮಂಡಳಿ ಸದಸ್ಯರು ಶಿಕ್ಷಣ ತಜ್ಞರು ಬೆಂಗಳೂರಲ್ಲಿ ಉಳಿದು ಕನ್ನಡಪರ ಸಂಘಟನೆಗಳ ಮುಖ್ಯಸ್ಥರಾದ ವಾಟಾಳ ನಾಗರಾಜ, ನಾರಾಯಣಗೌಡ, ಕೆ.ಕುಮಾರ ಹಾಗೂ ಇತರರೊಂದಿಗೆ ಚರ್ಚಿಸಿ ಕನ್ನಡ ಶಾಲೆಗಳ ಉಳಿವಿಗಾಗಿ ಟೊಂಕ ಕಟ್ಟಿ ನಿಂತಿರುವುದಾಗಿ ಹೇಳಿದರು.

4–07–2025 ರಂದು ಮುಂಜಾನೆ 11 ಗಂಟೆಯಿಂದ ಸಂಜೆ 4 ಗಂಟೆಯವರೆಗೆ,

1995.ರ ನಂತರ ಪ್ರಾರಂಭದ ಅನುದಾನ ರಹಿತ ಖಾಸಗಿ ಶಾಲಾ ಕಾಲೇಜುಗಳಿಗೆ ಅನುದಾನ ನೀಡಬೇಕು, ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುಮತಿ ನವೀಕರಣ ಪ್ರಕ್ರಿಯೆ ಸರಳಗೊಳಿಸಬೇಕು, ಬಡ ಮಕ್ಕಳ ದಾರಿ ದೀಪವಾದ ಆರ್.ಟಿ.ಇ ಯೋಜನೆ ಖಾಸಗಿ ಶಾಲೆಗಳಿಗೆ ಮರು ಜಾರಿ ಮಾಡಬೇಕು, ಅನುದಾನಿತ ಶಾಲಾ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಬೇಕು, ರಾಜ್ಯದ್ಯಂತ ಜಾರಿ ಇರುವ ಕೋಚಿಂಗ್ ಸೆಂಟರ್ ಗಳನ್ನು ಬಂದು ಮಾಡಬೇಕು, 371( ಜೆ ) ಕಾನೂನಡಿ ಸಿಗಬೇಕಾದ ಎಲ್ಲ ಸೌಲಭ್ಯಗಳನ್ನು ಖಾಸಗಿ ಶಾಲೆಗಳಿಗೂ ವಿಸ್ತರಿಸಬೇಕು, ಕನ್ನಡ ಶಾಲೆಗಳನ್ನು ಉಳಿಸಿ, ಕನ್ನಡವನ್ನು ಉಳಿಸಬೇಕು, ಕರ್ನಾಟಕ ಪಬ್ಲಿಕ್ ಶಾಲೆ ಹೆಸರಿನ ಮೇಲೆ ಕನ್ನಡ ಮಾಧ್ಯಮ ಶಾಲೆಗಳನ್ನು ಆಂಗ್ಲ ಮಾಧ್ಯಮವಾಗಿ ರೂಪಾಂತರಗೊಳಿಸುತ್ತಿರುವ ಪ್ರಕ್ರಿಯೆ ನಿಲ್ಲಿಸಬೇಕು ಎಂಬಿತ್ಯಾದಿ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಅಂದು ಜುಲೈ 14ರಂದು ಹೋರಾಟ ಸತ್ಯಾಗ್ರಹ ಹಮ್ಮಿಕೊಂಡಿದ್ದು, ಅಂದು ಈ ರಾಜ್ಯದ ಎಲ್ಲ ಕನ್ನಡಾಭಿಮಾನಿಗಳು ಈ ನಿಸ್ವಾರ್ಥ ಹೋರಾಟಕ್ಕೆ ಕೈ ಜೋಡಿಸುವಂತೆ ಜಲಾದೆ ಕರೆ ಕೊಟ್ಟರು. ಕಲ್ಯಾಣ ಕರ್ನಾಟಕ ಅನುದಾನ ರಹಿತ ಶಾಸಗಿ ಶಾಲಾ ಅಡಳಿತ ಮಂಡಳಿ ಸಂಘದ ಜಿಲ್ಲಾಧ್ಯಕ್ಷ ರಾಜೇಂದ್ರ ಮಣಗೀರೇ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗುರುನಾಥ ರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಮಾಣಿಕಪ್ಪ ಗೋರನಾಳೆ, ಬೀದರ್ ತಾಲೂಕಾಧ್ಯಕ್ಷ ಸಂದೀಪ ಶಟಕಾರ, ಬೀದರ್ ದಕ್ಷಿಣ ವಿಭಾಗದ ಅಧ್ಯಕ್ಷ ಸಯ್ಯದ್ ಅಹಮ್ಮದ್ ಮುದ್ದೆ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಶಿವಶಂಕರ ಟೋಕರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಇಂದು ಬ್ರಹ್ಮಾಕುಮಾರಿ ಪಾವನ ಧಾಮದಲ್ಲಿ ಪತ್ರಿಕಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ:ಜು.9: ಗುರುವಾರ ಬೆಳಿಗ್ಗೆ 10 ಗಂಟೆಗೆ ಬೀದರ್ ನಗರದ ಜನವಾಡ ರಸ್ತೆಯಲ್ಲಿರುವ ಜೆ.ಪಿ ನಗರದಲ್ಲಿನ (ಗುರುನಾಥ ಕೊಳ್ಳೂರು ಮನೆ ಎದುರು) ಬ್ರಹ್ಮಾಕುಮಾರಿ ಕೇಂದ್ರ ಪಾವನಧಾಮ ಅವರಣದಲ್ಲಿ ಪ್ರತಿ ವರ್ಷದಂತೆ ಈ ವರ್ಷ ಸಹ ಬ್ರಹ್ಮಾಕುಮಾರಿ ಮಿಡಿಯಾ ವಿಂಗ್ ಸಹಯೋಗದಲ್ಲಿ ಪತ್ರಿಕಾ ದಿನಾಚರಣೆ ಹಮ್ಮಿಕೊಳ್ಳಲಾಗಿದೆ.



ಈ ನಿಮಿತ್ಯ ಕಾರ್ಯಕ್ರಮಕ್ಕೆ ಆಗಮಿಸುವ ಹಿರಿಯರು, ಕಿರಿಯರು ಎನ್ನದೆ ಎಲ್ಲ ಪತ್ರಕರ್ತರಿಗೆ ಗೌರವಪೂರ್ವಕವಾಗಿ ಸನ್ಮಾನಿಸಲಾಗುತ್ತದೆ.

ಆದ ಕಾರಣ ಜಿಲ್ಲೆಯ ಎಲ್ಲ ಪತ್ರಕರ್ತ ಬಾಂಧವರು ಅರ್ಥಪೂರ್ಣ ಜೊತೆಗೆ ಅಧ್ಯಾತ್ಮಿಕ ದೃಷ್ಟಿಕೋನವುಳ್ಳ ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಸನ್ಮಾನ ಸ್ವೀಕರಿಸಿ, ಬ್ರಹ್ಮಾ ಭೋಜನ ಮಾಡಿಕೊಂಡು ನಿರ್ಗಮಿಸಬೇಕೆಂದು ಬ್ರಹ್ಮಾಕುಮಾರಿ ಕೇಂದ್ರ ಪಾವನಧಾಮದ ಸಂಚಾಲಕರಾದ ಬಿ.ಕೆ ಪ್ರತಿಮಾ ಬಹೆನ್‌ಜಿ ತಿಳಿಸಿದ್ದಾರೆ.

# ಭಗವಂತ ಖೂಬಾ ಬಗ್ಗೆ ಮಾತನಾಡುವ ನೈತಿಕತೆ ಕಾಂಗ್ರೇಸ್ ಜಿಲ್ಲಾಧ್ಯಕ್ಷರಿಗಿಲ್ಲಾ :ಸೋಮನಾಥ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು.09 : ಕಾಂಗ್ರೇಸ್ ಪಕ್ಷದ ಜಿಲ್ಲಾಧ್ಯಕ್ಷರು, ಬಿ.ಡಿ.ಎ ಅಧ್ಯಕ್ಷರು ಆಗಿ ಎರಡೆರಡು ಹುದ್ದೆಗಳನ್ನು ಪಡೆದು ಕಾಂಗ್ರೇಸ್ ಕಾರ್ಯಕರ್ತರಿಗೆ ಅನ್ಯಾಯ ಮಾಡಿದ್ದಾರೆ ಎಂದು ಅವರದೆ ಪಕ್ಷದ ವಿಧಾನಪರಿಷ್ಯತ ಸದಸ್ಯರು ಮಾಧ್ಯಮಗಳಲ್ಲಿ ಬಹಿರಂಗವಾಗಿ ಹೇಳಿದ್ದು ಗಮನಿಸಿದರೆ ಅವರಿಗೆ ತಮ್ಮ ಪಕ್ಷದಲ್ಲಿಯೇ ಯಾವುದೇ ಕಿಮ್ಮತ್ತಿಲ್ಲಾ ಎನ್ನುವುದು ತಿಳಿಯುತ್ತದೆ. ಸ್ವತಃ ಕಾಂಗ್ರೇಸ್ ಶಾಸಕರೆ ಇವರು ಜಿಲ್ಲಾ ಉಸ್ತುವಾರಿ ಸಚಿವರ ಕೈಗೊಂಬೆಯಾಗಿದ್ದಾರೆ ಎಂದು ಹೇಳಿದ್ದು ಅವರಿಗೆ ಖುಷಿ ಪಡಿಸಿಲು ಈ ರೀತಿ ಹೇಳಿಕೆ ನೀಡಿದ್ದಾರೆ ಅನಿಸುತ್ತಿದೆ.

ಅಕ್ರಮ ಭೂ ಕಬಳಿಕೆದಾರರ ವಿರುದ್ದ ಕ್ರಮ ಕೈಗೊಂಡಿದ್ದರೆ ಬಿಜೆಪಿ ಸ್ವಾಗತಿಸುತ್ತದೆ, ಆದರೆ ಅಧಿಕಾರ ದುರುಪಯೊಗ ಪಡಿಸಿಕೊಂಡು ಭಾಲ್ಕಿಯ ನಮ್ಮ ದಲಿತ ಕಾರ್ಯಕರ್ತ ಸಂಜು ಶಿಂಧೆ ಸೇರಿದಂತೆ ಹಲವರ ವಿರುದ್ದ ರಾಜಕೀಯ ಪ್ರೇರಿತಿ ಪ್ರಕರಣಗಳನ್ನು ದಾಖಲಿಸಿ ಯಾವುದೆ ಪ್ರಕರಣದಲ್ಲಿ ಶಿಕ್ಷೆ ಆಗದಿದ್ದರು ಅವರ ಹೆಸರನ್ನು ರೌಡಿಶೀಟರ ಪಟ್ಟಿಗೆ ಸೇರಿಸಿದಲ್ಲದೆ ಚಿತ್ರದುರ್ಗ ಜಿಲ್ಲೆಯ ಚಳ್ಳಕೇರೆಗೆ ಗಡಿಪಾರು ಮಾಡಲು ಜಿಲ್ಲಾಧಿಕಾರಿಗಳ ಮುಖಾಂತರ



ನೋಟಿಸ್ ಕೊಡಿಸಿರುವುದು ಎಷ್ಟು ಸಮಂಜಸ ಎನ್ನುವುದುಕ್ಕೆ ಕಾಂಗ್ರೇಸ್ ಜಿಲ್ಲಾಧ್ಯಕ್ಷರೇ ಉತ್ತರಸಿಬೇಕು. ಜಿಲ್ಲೆಯಲ್ಲಿ ಕಾನುನು ಸುವ್ಯವಸ್ಥೆ ಸಂಪೂರ್ಣ ಹದೆಗೆಟ್ಟಿದ್ದು, ದಿನ ಬೇಳಗಾದರೆ ಕೊಲೆ, ದರೋಡೆ ಪ್ರಕರಣಗಳು, ಜಿಲ್ಲೆಯಲ್ಲಿ ತಲೆಯೆತ್ತಿರುವ ಕ್ಲಬ್‌ಗಳು, ಮರಳು ಮಾಫೀಯಾ, ಅಕ್ಕಕಳ್ಳಸಾಗಾಣೆಗಳ ಬಗ್ಗೆ ಉಸ್ತುವಾರಿ ಸಚಿವರ ಗಮನ ಸೆಳೆಯಬೇಕಿದ್ದ ಅಧ್ಯಕ್ಷರು, ಜಿಲ್ಲೆಗೆ ತಮ್ಮ ಅವಧಿಯಲ್ಲಿ ಸೋಲಾರ ಪಾರ್ಕ, 12 ಹೈವೆಗಳು, ಹತ್ತಾರು ಟ್ರೇನ್‌ಗಳು, ಪಾಸ್ ಪೋರ್ಟ ಆಫೀಸ್, ಸಿಪೇಟ್ ಕಾಲೇಜು ರೈಲ್ವೆ ಸ್ಟೇಷನ್ ಉನ್ನತ್ತಿಕರಣ ಸೇರಿದಂತೆ ಅನೇಕ ಅಭಿವೃದ್ದಿ ಕಾರ್ಯಗಳನ್ನು ಮಾಡಿದಂಥ ಭಗವಂತ ಖೂಬಾ ಅವರ ನೈತಿಕತೆ ಪ್ರಶ್ನಿಸುತ್ತಿರುವುದು ಖಂಡನೀಯ. ಅಧ್ಯಕ್ಷರಾಗಿ ನಿಮಗೆ ನಿಜವಾದ ನೈತಿಕತೆ ಇದ್ದರೆ ನಿಮಗೆ ಪ್ರಶ್ನೆ ಕೇಳಿದ ನಿಮ್ಮ ಪಕ್ಷದ ವಿಧಾನಪರಿಷ್ಯತ ಸದಸ್ಯರ ಕುಟುಂಬದಲ್ಲಿ ಹಾಗು ನಿಮ್ಮ ಜಿಲ್ಲಾ ಉಸ್ತುವಾರಿ ಸಚಿವರ ಕುಟಂಬದಲ್ಲಿ ಎಷ್ಟೆಷ್ಟು ಅಧಿಕಾರಗಳಿವೆ ಎಂದು ಕೇಳಿ ಅಲ್ಲಿ ಕಾಂಗ್ರೇಸ್ ಕಾಯರ್ಕರ್ತರಿಗೆ ಅನ್ಯಾವಾಗುತ್ತಿಲ್ಲವೆ ಎಂದು ಪ್ರಶ್ನಿಸಿ. ಮುಂದಿನ ಚುನಾವಣೆಗಳಲ್ಲಿ ಬಿಜೆಪಿ ಹಿನ್ನಡೆ ಖಚಿತ ಎನ್ನುವ ಕಾಂಗ್ರೇಸ್ ಅಧ್ಯಕ್ಷರು, ದೇಶದ ಬಹುತೇಕ ರಾಜ್ಯಗಳಲ್ಲಿ ಕಾಂಗ್ರೇಸ್ ನಿರ್ನಾಮ ಆಗಿರುವುದು ಗಮನಿಸಿಲ್ಲಾ ಅನಿಸುತ್ತದೆ ಹಾಗು ಮುಂಬರುವ ದಿನಗಳಲ್ಲಿ ಕರ್ನಾಟಕ ಹಾಗೂ ಬೀದರ ಜನತೆ ಇವರ ದುರಾಡಳಿತ ಹಾಗು ಭ್ರಷ್ಟಾಚಾರದಿಂದ ಬೇಸತ್ತು ಕಾಂಗ್ರೇಸ್ ಮುಕ್ತ ಕರ್ನಾಟಕ ಮಾಡಲು ನಿರ್ಧರಿಸಿದ್ದಾರೆ.

# ಮಾಜೀದ್ ಬಿಲಾಲ್‌ಗೆ ಕರ್ನಾಟಕ ಭೂಷಣ ಪ್ರಶಸ್ತಿ




ಬೀದರ. ಜು. 09 : ಇಲ್ಲಿಯ ಹ್ಯೂಮ್ಯಾನಿಟಿ ಫಸ್ಟ್ ಫೌಂಡೇಷನ್ ಅಧ್ಯಕ್ಷ ಮೊಹಮ್ಮದ್ ಮಾಜೀದ ಬಿಲಾಲ್ ಅವರಿಗೆ ಸಮಾಜ ಸೇವೆಗಾಗಿ ಕರ್ನಾಟಕ ಮೀಡಿಯಾ ಕ್ಲಬ್ ವತಿಯಿಂದ ಕೊಡಲಾಗುವ ರಾಜ್ಯಮಟ್ಟದ ಕರ್ನಾಟಕ ಭೂಷಣ ಪ್ರಶಸ್ತಿ ಲಭಿಸಿದೆ.

ಬೆಂಗಳೂರಿನಲ್ಲಿ ಮಂಗಳವಾರ ನಡೆದ ಸಮಾರಂಭದಲ್ಲಿ ವಿಶ್ರಾಂತ ಲೋಕಾಯುಕ್ತ ಸಂತೋಷ್ ಹೆಗ್ಡೆ ಪ್ರಶಸ್ತಿ ಪ್ರದಾನ ಮಾಡಿದರು.

ಡಾ. ಬಸವ ರಮಾನಂದ ಸ್ವಾಮೀಜಿ, ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ,

'ಮುಖ್ಯಮಂತ್ರಿ' ಚಂದ್ರು ಮತ್ತಿತರರು ಇದ್ದರು.

## ಭಾಲ್ಕಿ ಶ್ರೀಮಠದಲ್ಲಿ ಗುರುವಂದನಾ ಕಾರ್ಯಕ್ರಮ ಇಂದು





ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಜು.9: ಇಲ್ಲಿಯ ಹಿರೇಮಠ ಸಂಸ್ಥಾನದ ಆವರಣದಲ್ಲಿ ಗುರುಪೂರ್ಣಿಮೆ ನಿಮಿತ್ತ ಗುರುವಾರ ಬೆಳಿಗ್ಗೆ 11 ಗಂಟೆಗೆ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು, ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಗುರುವಂದನಾ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲೆಯ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪೂಜ್ಯರ ದರುಶನ ಪಡೆಯುವಂತೆ ಕೋರಲಾಗಿದೆ.

5.30ಕ್ಕೆ ಶಿವಾನುಭವ ಗೋಷ್ಠಿ

ಶ್ರೀಮಠದಲ್ಲಿ ಸಾಯಂಕಾಲ 5.30 ಗಂಟೆಗೆ 489ನೆಯ ಶಿವಾನುಭವ ಗೋಷ್ಠಿ ಮತ್ತು ಗುರುವಂದನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಶಂಭುಲಿಂಗ ಕಾಮಣ್ಣ ಅವರು ಅನುಭಾವ ನೀಡಲಿದ್ದಾರೆ. ಇದೇ ವೇಳೆ ಶಿಕ್ಷಕ ಹುದ್ದೆಯಿಂದ ನಿವೃತ್ತಿ ಹೊಂದಿದ ಶರಣಪ್ಪ ಬಿರಾದಾರ್ ಅವರನ್ನು ಸನ್ಮಾನಿಸಲಾಗುತ್ತಿದೆ. ಗುಂಡಪ್ಪ ಸಂಗಮಕರ್, ರಮೇಶ ಕುರುಬ ಖೇಳಗಿ, ಬಸವರಾಜ ಹಡಪದ, ನೀಲಾಂಬಿಕಾ ಪ್ರಕಾಶ ಹಡಪದ, ಸಂತೋಷ ಹಡಪದ ಸೇರಿದಂತೆ ಮುಂತಾದವರು ಭಾಗವಹಿಸಲಿದ್ದಾರೆ. ಅಮೃತ ಗಣೇಶ ತಂಡದವರಿಂದ ವಚನ ಸಂಗೀತ, ಅಕ್ಕನ ಬಳಗದ ಶರಣೆಯರಿಂದ ವಚನ ಭಜನೆ ನಡೆಯಲಿದೆ. ಸಗುಂಧಬಾಯಿ ಗೋವಿಂದರಾವ ಹಡಪದ ಕಾರ್ಯಕ್ರಮದ ಭಕ್ತಿ ದಾಸೋಹ ವಹಿಸಿ ಕೊಂಡಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಕಿಸಾನ್ ಜಾಗೃತಿ ಸಂಘದಿಂದ ರಾಜ್ಯ ಮಟ್ಟದ ಪ್ರಶಸ್ತಿ ಪುರಸ್ಕೃತ ಹುಟ್ಟೂರು ಖತಗಾಂವ್‌ನಲ್ಲಿ ಸಿದ್ರಾಮಯ್ಯ ಸ್ವಾಮಿಗೆ ಸನ್ಮಾನ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜು. 09 : ಕೃಷಿಕ ಸಮಾಜದ ಜಿಲ್ಲಾ ಅಧ್ಯಕ್ಷ, ಹಿರಿಯ ಪತ್ರಕರ್ತ ಸಿದ್ರಾಮಯ್ಯ ಸ್ವಾಮಿ ಅವರು ಅಖಿಲ ಕರ್ನಾಟಕ ರಾಜ್ಯ ಕಿಸಾನ್ ಜಾಗೃತಿ ಸಂಘದ ರಾಜ್ಯ ಮಟ್ಟದ ಪ್ರಶಸ್ತಿ ಪಡೆದಿರುವ ಹಿನ್ನೆಲೆಯಲ್ಲಿ ಸ್ವಗ್ರಾಮ, ಕಮಲನಗರ ತಾಲೂಕಿನ ಖತಗಾಂವ್‌ದಲ್ಲಿ ಸನ್ಮಾನಿಸಿ ಅಭಿನಂದಿಸಲಾಯಿತು.



ನಿವೃತ್ತ ಶಿಕ್ಷಕ ಮಡಿವಾಳಪ್ಪ ಮಾತನಾಡಿ, ರಾಜ್ಯ ಮಟ್ಟದ ಪ್ರಶಸ್ತಿ ಪಡೆದಿರುವ ಸಿದ್ರಾಮಯ್ಯ ಸ್ವಾಮಿ ಅವರು ಹುಟ್ಟೂರಿಗೆ ಕೀರ್ತಿ ತಂದಿದ್ದಾರೆ. ಕೃಷಿ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅವರ ಸೇವೆ ಸ್ಮರಣೀಯವಾಗಿದೆ ಎಂದು ಶ್ಲಾಘಿಸಿದರು. ಸಿದ್ರಾಮಯ್ಯ ಸ್ವಾಮಿ ತಮ್ಮ ವಿದ್ಯಾರ್ಥಿ ಆಗಿರುವುದು ಹೆಮ್ಮೆಯ ಸಂಗತಿ. ತಾವು ಕಲಿಸಿದ್ದು ಸಾರ್ಥಕವಾಗಿದೆ. ಸಿದ್ರಾಮಯ್ಯ ಸ್ವಾಮಿ ಅವರು ರಾಜ್ಯ ಮಟ್ಟದ ಪ್ರಶಸ್ತಿ ಪಡೆದಿರುವುದು ಸಂತಸವುಂಟು ಮಾಡಿದೆ ಎಂದು ಹೇಳಿದರು.

ಮಾಜಿ ಗ್ರಾಮ ಪಂಚಾಯತಿ ಸದಸ್ಯರಾದ ಮಹೇಶ ಪಾಟೀಲ್, ಬಸವರಾಜ ಧರಣೆ, ಸುಭಾಷ ಬೆಲ್ಲೆ, ವಿಜಯಕುಮಾರ ಮಂತಾಳೆ, ಬಸವರಾಜ ಮಂತಾಳೆ, ಶಿವರಾಜ ಧರಣೆ, ಕಾಶಿನಾಥ ಸ್ವಾಮಿ, ನಾಗನಾಥ ಬಿರಾದಾರ್, ಸೋಮನಾಥ ಬಿರಾದಾರ್ ಮತ್ತಿತರ ಗಣ್ಯರು, ಊರಿನ ಹಿರಿಯರು, ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು. ಸಿದ್ರಾಮಯ್ಯ ಸ್ವಾಮಿ ಅವರು ಕೃಷಿ ಕ್ಷೇತ್ರದಲ್ಲಿನ ಸಮಸ್ಯೆಗಳ ಪರಿಹಾರಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಕೃಷಿಕರ ಬಗ್ಗೆ ಅವರಲ್ಲಿನ ಪ್ರಾಮಾಣಿಕ ಕಾಳಜಿಯು ಅನುಕರಣೀಯವಾಗಿದೆ ಎಂದು ಸಮಾರಂಭದಲ್ಲಿ ಮಾತನಾಡಿದ ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಗಣ್ಯರಾದ ಧನರಾಜ ವೈಜಪ್ಪ ನಿಲಂಗೆ ಅವರೂ ಸಿದ್ರಾಮಯ್ಯ ಸ್ವಾಮಿ ಅವರು ಸೇವೆಯನ್ನು ಕೊಂಡಾಡಿದರು. ಸಿದ್ರಾಮಯ್ಯ ಸ್ವಾಮಿ ಅವರು ಊರಿನ ಕೀರ್ತಿ ಹೆಚ್ಚಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಅವರನ್ನು ಸನ್ಮಾನಿಸಿ, ಗೌರವಿಸಲಾಗಿದೆ ಎಂದು ಹೇಳಿದರು.

ಸಮಾರಂಭದಲ್ಲಿ ಸಿದ್ರಾಮಯ್ಯ ಅವರಿಗೆ ಪೇಟ ತೊಡಿಸಿ, ಶಾಲು ಹೊದಿಸಿ ಸನ್ಮಾನಿಸಲಾಯಿತು. ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ದುಬೈನಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಕಲಬುರಗಿ ಕಾರ್ಮಿಕನ ಕುಟುಂಬಕ್ಕೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಧನ ಸಹಾಯ

ಬೆಂಗಳೂರು,ಜು09: ಕಲಬುರಗಿಯ ನಿವಾಸಿಯಾದ ಶ್ರೀಮಂತ ಬಿನ್ ಶೀವರಾಜ್ ರವರು ಉದ್ಯೋಗಕ್ಕಾಗಿ ದುಬೈಗೆ ತೆರಳಿದ್ದರು. ಅಲ್ಲಿನ ಈಇ ಉಡಿಜಜಟಿಜಜಚಿಃಙಟಜ–ಟಿರ ಅಂಟಿಣಡಿಚಿಟಿಣ–ಟಿರ ಐಐಅ ಯಲ್ಲಿ ಕಟ್ಟಡ ಕಾರ್ಮಿಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾಗ ಕಳೆದ ಡೆಸೆಂಬರ್ ಮಾಹೆಯಲ್ಲಿ ಅಪಘಾತವಾಗಿ ಸುಮಾರು 7 ತಿಂಗಳಿನಿಂದ ಕೋಮಾದಲ್ಲಿರುತ್ತಾರೆ ಮತ್ತು ವೈದ್ಯಕೀಯ ವೆಚ್ಚ ಸುಮಾರು 1 ಕೋಟಿ ರೂಪಾಯಿಗೂ ಹೆಚ್ಚಾಗಿರುತ್ತದೆ.

ಈ ವಿಷಯವನ್ನು ತಿಳಿದ 'ಕರ್ನಾಟಕ ಸಂಘ ದುಬೈ' ನವರು ಅನಿವಾಸಿ ಭಾರತೀಯ ಸಮಿತಿಗೆ ಸೂಕ್ತ ಕ್ರಮ ಕೈಗೊಳ್ಳಲು ಕೋರಿದ್ದು, ಇದಕ್ಕೆ ಸ್ಪಂದಿಸಿದ ಅನಿವಾಸಿ ಭಾರತೀಯ ಸಮಿತಿ ಉಪಾಧ್ಯಕ್ಷರು ಕೂಡಲೆ ಮಾನ್ಯ ಮುಖ್ಯಮಂತ್ರಿಯವರಿಗೆ ಪತ್ರ ಬರೆದು ರೋಗಿಯು ಓಂಟಿ Traumatic Intracerebral Haemorrhage, Intraventicular (ICD Code: 16t-5) ಧನ ಸಹಾಯ ಮಾಡಬೇಕಾಗಿ ಮನವಿ ಸಲ್ಲಿಸಿದ್ದರು.

ಏಕಕಾಲದಲ್ಲಿ 'ಕರ್ನಾಟಕ ಸಂಘ ದುಬೈ' ರವರು ವಿಮೆ ಹಾಗೂ ಕೋರಿಕೆಯ ಮೇರೆಗೆ ವೈದ್ಯಕೀಯ ಶುಲ್ಕವನ್ನು ಕಡಿಮೆ ಮಾಡಿಸಿ ರೋಗಿಯನ್ನು ಭಾರತಕ್ಕೆ ಕಳುಹಿಸಲು ಸುಮಾರು 7,00,000/– ರೂಪಾಯಿಗಳನ್ನು ಸಂಘದ ವತಿಯಿಂದ ಸಂಗ್ರಹಿಸಿ ರೋಗಿಯನ್ನು ಭಾರತ–ಕ್ಕೆ ಕರೆತರುವ ವ್ಯವಸ್ಥೆ ಮಾಡಿರುತ್ತಾರೆ. ಅಲ್ಲದೆ, ಉಪಾಧ್ಯಕ್ಷರ ಕೋರಿ–ಕೆಯ ಮೇರೆಗೆ ಮಾನ್ಯ ಮುಖ್ಯಮಂತ್ರಿಗಳು ಸದರಿಯವರ ವೈದ್ಯಕೀಯ ಚಿಕಿತ್ಸೆಯನ್ನು ವಿಶೇಷ ಪ್ರಕರಣವೆಂದು ಪರಿಗಣಿಸಿ 3,00,000/– ರೂಪಾಯಿಗಳನ್ನು ಮಂಜೂರು ಮಾಡಿರುತ್ತಾರೆ.

ಚಿಕಿತ್ಸೆ ಪಡೆಯುತ್ತಿರುವ ಶ್ರೀಮಂತ ಅವರು ಇದೇ ಜುಲೈ 4 ರಂದು ಭಾರತಕ್ಕೆ ಹಿಂದಿರುಗಿ ಕಲಬುರಗಿಯ ಜಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅನಿವಾಸಿ ಭಾರತೀಯ ಸಮಿತಿಯ ಉಪಾಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಸೀದಿ ಕಟ್ಟಡ ನಿರ್ಮಾಣ ತಡೆಯಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9–ನಗರದ ದಡ್ಡೇನವರ ಆಸ್ಪತ್ರೆಯ ಬಳಿಯಿರುವ ಲೇಔಟನಲ್ಲಿ ಅಕ್ರಮವಾಗಿ ಕಟ್ಟಲಾಗುತ್ತಿರುವ ಮಸೀದಿ ನಿರ್ಮಾಣ ಕಾರ್ಯವನ್ನು ತಡೆಯಬೇಕೆಂದು ಹಿಂದೂಪರ ಸಂಘಟನೆ ಹಾಗೂ ಅಲ್ಲಿನ ನಿವಾಸಿಗಳು ನಗರಸಭೆ ಮುಂದೆ ಪ್ರತಿಭಟನೆ ನಡೆಸಿ ಮನವಿ ಮಾಡಿಕೊಂಡರು.

ನಗರಸಭೆಯ ಪರವಾಣಿಗೆ ಇಲ್ಲದೇ ಅಕ್ರಮವಾಗಿ ಈ ಕಟ್ಟಡ ಕಟ್ಟಲಾಗುತ್ತಿದೆ. ಅಲ್ಲಿನ ನಿವಾಸಿಗಳು ಅನೇಕ ಬಾರಿ ಮನವಿ ಮಾಡಿಕೊಂಡರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ದೂರಿದ ಪ್ರತಿಭಟನಾಕಾರರು, ಈ ವಿಷಯ ನಗರಸಭೆ ಸಾಮಾನ್ಯ ಸಭೆಯಲ್ಲಿ ಚರ್ಚಿತವಾಗಿದ್ದರೂ ಕಟ್ಟಡ ನಿರ್ಮಾಣಕ್ಕೆ ಅನುಮತಿ ಸಿಕ್ಕಿಲ್ಲ ಎಂದರು.

ಆ ಏರಿಯಾದಲ್ಲಿ ಶಾಲಾ–ಕಾಲೇಜು, ಆಸ್ಪತ್ರೆ, ಜನವಸತಿ ಇರುವುದರಿಂದ ಮಸೀದಿಯಲ್ಲಿ ಬಳಸಲಾಗುವ ಧ್ವನಿವರ್ಧಕದಿಂದ ರೋಗಿಗಳು, ವಿದ್ಯಾರ್ಥಿಗಳು ಮತ್ತು ಹಿರಿಯ ನಾಗರಿಕರಿಗೆ ತೊಂದ–ರೆಯಾಗುತ್ತದೆ. ಆ ಕಾರಣದಿಂದ ಇದನ್ನು ತಡೆಯುವಂತೆ ಒತ್ತಾಯಿಸಿ ಪೌರಾಯುಕ್ತರಿಗೆ ಮನವಿ ಅರ್ಪಿಸಿದರು.

15 ದಿನದೊಳಗೆ ಅಕ್ರಮ ಕಟ್ಟಡ ಕಾಮಗಾರಿ ನಿಲ್ಲಿಸಿ ತೆರವುಗೊಳಿಸದಿದ್ದರೆ ನಗರಸಭೆ ಅಧ್ಯಕ್ಷರು ಮತ್ತು ಪೌರಾಯುಕ್ತರ ನಿವಾಸಕ್ಕೆ ಮುತ್ತಿಗೆ ಹಾಕುವುದಾಗಿ ಹಿಂದೂ ಸಂಘಟನೆಯ ಕುಮಾರಸ್ವಾಮಿ ಹಿರೇಮಠ ಹೇಳಿದರು.

ನಾಗರಾಜ ಅಂಬಿಗೇರ, ಈರಣ್ಣ ಲಾಯದಗುಂದಿ, ಚಂದ್ರು ರಾಮೋಡಗಿ, ಮುತ್ತಣ್ಣ ಕುರುಬರ, ಶಂಕರ ಕದಂ, ಸುರೇಶ ಮಜ್ಜಗಿ, ನಗರಸಭೆ ಸದಸ್ಯರಾದ ಶಶಿಕಲಾ ಮಜ್ಜಗಿ, ಸ್ಮಿತಾ ಪವಾರ ಸೇರಿದಂತೆ ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ತಿಪ್ಪನಟಗಿ ಗ್ರಾಮದಲ್ಲಿ ವಾಂತಿ ಭೇದಿ ಪ್ರಕರಣ ಕಂಡುಬಂದಿರುವ ಹಿನ್ನೆಲೆ ಸ್ಪಷ್ಟೀಕರಣಕ್ಕೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜುಲೈ 09–ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ ನಗನೂರ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ ಬರುವ ತಿಪ್ಪನಟಗಿ ಗ್ರಾಮದಲ್ಲಿ ವಾಂತಿ ಭೇದಿ ಪ್ರಕರಣ ಕಂಡುಬಂದಿರುವ ಹಿನ್ನೆಲೆ ಸ್ಪಷ್ಟೀಕರಣ ನೀಡಲಾಗಿದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಮಹೇಶ ಬಿರಾದರ ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಸುರಪುರ ತಾಲೂಕಿನ, ನಗನೂರ ಪ್ರಾಥಮಿಕ ಆರೋಗ್ಯ ಕೇಂದ್ರ ವ್ಯಾಪ್ತಿಯಲ್ಲಿ ಬರುವ ತಿಪ್ಪನಟಗಿ ಗ್ರಾಮದಲ್ಲಿ 2025ರ ಜುಲೈ 7 ರಂದು ವಾಂತಿ ಭೇದಿ ಪ್ರಕರಣಗಳು ಕಂಡುಬಂದಿರುವ ಕಾರಣ 3 ಜನರು ಮರಣ ಹೊಂದಿರುತ್ತಾರೆ. ಎಂದು ಸುದ್ದಿ ಹರಡಿರುವ ಹಿನ್ನೆಲೆ ಈ ಗ್ರಾಮಕ್ಕೆ ಭೇಟಿ ಕೊಟ್ಟು ಪರಿಶೀಲಿಸಿದಾಗ, ಈ 3 ಪ್ರಕರಣಗಳು ವಾಂತಿ ಭೇದಿ ಇಂದ ಮರಣ ಹೊಂದಿರುವುದಿಲ್ಲ ಧೀರ್ಘಾವದಿಯಿಂದ ಬೇರೆ ಬೇರೆ ಗಂಭೀರಕಾಯಿಲೆಗಳಿಂದ ಬಳಲುತಿದ್ದು, ಮರಣ ಹೊಂದಿರುತ್ತಾರೆ ಎಂದು ವೈದ್ಯಕೀಯ ವರದಿಗಳಿಂದ ತಿಳಿದು ಬಂದಿರುತ್ತದೆ.

ರಾಮಣ್ಣಭೀಮರಾಯ ಪೂಜಾರಿ 64 ವರ್ಷ ಪುರುಷ ಮರಣದ ಕಾರಣ ಉಟುಲಭಛಿಣಲಟಚಿ ಖಆಊ ಘುಟಜ ಖಿಥಿಠಿಜ ಅಓಖ ಘುಠ ಉಡಿಚಿಜಜ–4 (ಃಡಿಚಿಟ ಖಿಣಟಲಣಾಡಿ) ಇದೆ. ಈ ಮರಣ ಹೊಂದಿರುವ ಕುಟುಂಬದ ಉಳಿದ ಸದಸ್ಯರಿಗೆ ಹಾಗೂ ಮನೆಯ ಸುತ್ತಾಮುತ್ತಾ ಜನರಿಗೂ ಯಾವುದೇ ವಾಂತಿ ಬೇಧಿ ಪ್ರಕರಣ ಕಂಡುಬಂದಿರುವುದಿಲ್ಲ.

ಶ್ರೀಮತಿ ದೇವಕ್ಕೆಮ್ಮ ಗಂಡ ಭೀಮರಾಯ ಹೊಟ್ಟೆಗೋಳ 60 ವರ್ಷ ಮಹಿಳೆ ಮರಣದ ಕಾರಣ Septic Shock With Multiorgan Dysfunction Syndrome (MODS) Secondary To Uncontrilled Diabetis Mellitụ ಇದೆ. ಈ ಮರಣ ಹೊಂದಿರುವ ಕುಟುಂಬದ ಉಳಿದ ಸದಸ್ಯರಿಗೆ ಹಾಗೂ ಮನೆಯ ಸುತ್ತಾಮುತ್ತಾ ಜನರಿಗೂ ಯಾವುದೇ ವಾಂತಿ ಬೇಧಿ ಪ್ರಕರಣ ಕಂಡುಬಂದಿರುವುದಿಲ್ಲ.

ಶ್ರೀಮತಿ ವೆಂಕಮ್ಮ ಗಂಡ ದೇವಿಂದ್ರಪ್ಪ ಚಿಡಬಿ 70 ವರ್ಷ ಪುರುಷು ಮರಣದ ಕಾರಣ ಖಿಜಟಿಚಿಟ ಈailure Advised Dialysis Dama Against Dialysis (Kindney Failure) ಇದೆ. ಈ ಮರಣ ಹೊಂದಿರುವ ಕುಟುಂಬದ ಉಳಿದ ಸದಸ್ಯರಿಗೆ ಹಾಗೂ ಮನೆಯ ಸುತ್ತಾಮುತ್ತಾ ಜನರಿಗೂ ಯಾವುದೇ ವಾಂತಿ ಭೇದಿ ಪ್ರಕರಣ ಕಂಡುಬಂದಿರುವುದಿಲ್ಲ.

ಈ ಗ್ರಾಮದಲ್ಲಿ ಎಲ್ಲಾ ಕಡೆಯಿಂದ ಒಟ್ಟು 9 ನೀರಿನ ಮಾದರಿಗಳನ್ನು ಸಂಗ್ರಹಿಸಲಾಗಿರುತ್ತದೆ, ಸುರಪುರ ತಾಲೂಕಿ ಆರ್.ಡಬ್ಲ್ಯೂಎಸ್ ಪ್ರಯೋಗಾಲಯದಲ್ಲಿ ಪರೀಕ್ಷೆ ಮಾಡಲಾಗಿದ್ದು, ಈ ನೀರು ಕುಡಿಯಲು ಯೋಗ್ಯವಿದೆ ಎಂದು ವರದಿ ಬಂದಿರುತ್ತದೆ. ಗ್ರಾಮದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಅಂಗನವಾಡಿ ಕೇಂದ್ರದಲ್ಲಿ ಕ್ಯಾಂಪ್ ಮಾಡಲಾಗಿದ್ದು, ವೈದ್ಯಾಧಿಕಾರಿಗಳು ಹಾಗೂ ಸಿಬ್ಬಂದಿಗಳನ್ನು ಒಳಗೊಂಡ ತಂಡದ ಜೊತೆಗೆ ಅಂಬುಲೇನ್ಸ್ ಸಹಿತ ನಿಯೋಜನೆ ಮಾಡಲಾಗಿದೆ. ಸಾರ್ವಜನಿಕರಿಗೆ ದಿನದ 24 ಗಂಟೆಯ ಆರೋಗ್ಯ ಸೇವೆ ನೀಡಲಾಗುತ್ತಿದೆ.

2025ರ ಜುಲೈ 7 ರಂದು 32 ಜನರಿಗೆ ಹಾಗೂ 2025ರ ಜುಲೈ 8 ರಂದು 14 ಜನರಿಗೆ ಓ.ಪಿ.ಡಿ ಬೇಸ್ ಆರೋಗ್ಯ ತಪಾಸಣೆ ಮಾಡಿ, ಚಿಕಿತ್ಸೆ ನೀಡಲಾಗಿರುತ್ತದೆ. ಈ ಓ.ಪಿ.ಡಿಯಲ್ಲಿ 4 ಸಂಶಯಾಸ್ಪದ ಪ್ರಕರಣಗಳು ಕಂಡುಬಂದಿರುವ ಕಾರಣ ಸರ್ಕಾರಿ ಸಾರ್ವಜನಿಕರ ಆಸ್ಪತ್ರೆ ಸುರಪುರಕ್ಕೆ ಹೆಚ್ಚಿನ ಚಿಕಿತ್ಸೆಗಾಗಿ ಕಳುಹಿಸಲಾಗಿದ್ದು, ಈ 4 ಜನ 2025ರ ಜುಲೈ 8 ರಂದು ಚಿಕಿತ್ಸೆ ಪಡೆದು, ಆರೋಗ್ಯವಂತರಾಗಿ ಬಿಡುಗಡೆ ಹೊಂದಿರುತ್ತಾರೆ, ಮತ್ತು ಎಲ್ಲಾ ಓ.ಪಿ.ಡಿ ಪ್ರಕರಣಗಳು ಸಾಧಾರಣ ಪ್ರಕರಣಗಳಾಗಿದ್ದು, ಎಲ್ಲಾರು ಗುಣಮುಖರಾಗಿರುತ್ತಾರೆ.

ಈ ಗ್ರಾಮದಲ್ಲಿ ಆರೋಗ್ಯ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು, ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು, ಶಾಲೆ ಹಾಗೂ ಮನೆ ಮನೆಗೆ ಭೇಟಿ ನೀಡಿ ಕುಡಿಯುವ ನೀರಿಗೆ ಹ್ಯಾಲೋಜಿನ್ ಮಾತ್ರೆಗಳನ್ನು ವಿತರಿಸಿದ್ದು, ಕುಡಿಯುವ ನೀರನ್ನು ಕಾಯಿಸಿ, ಆರಿಸಿ ಸೋಸಿ, ಕುಡಿಯುವಂತೆ, ಹಾಗೂ ತಾಜಾ ಆಹಾರ ಸೇವಿಸುವಂತೆ, ಮನೆಯ ಒಳಗಡೆ ಮತ್ತು ಹೊರಗಡೆ ಸ್ವಚ್ಛತೆಯನ್ನು ಕಾಪಡಿಕೊಳ್ಳುವಂತೆ, ಆರೋಗ್ಯ ಶಿಕ್ಷಣ ನೀಡುತ್ತಾ ಸಾರ್ವಜನಿಕರಿಗೆ ಆರೋಗ್ಯದ ಅರಿವು ಮೂಡಿಸಲಾಗುತ್ತಿದೆ, ಮತ್ತು ಮನೆ ಮನೆಗೆ ಓ.ಆರ್.ಎಸ್ ಪ್ಯಾಕೇಟ್‌ಗಳನ್ನು ನೀಡಲು ಪ್ರಾಥಮಿಕ ಆರೋಗ್ಯ ಕೇಂದ್ರ ವೈದ್ಯಾಧಿಕಾರಿಗಳ ತಂಡಕ್ಕೆ ಸೂಚಿಸಲಾಗಿರುತ್ತದೆ. ಸದ್ಯಕ್ಕೆ ಈ ಗ್ರಾಮದಲ್ಲಿ ವಾಂತಿ ಬೇದಿ ಪ್ರಕರಣಗಳು ನಿಯಂತ್ರಣದಲ್ಲಿರುತ್ತದೆ. ಈ ಗ್ರಾಮದಲ್ಲಿ ಕುಡಿಯುವ ನೀರು ಯೋಗ್ಯವಾಗಿದ್ದು, ಕುಡಿಯುವ ನೀರಿನಿಂದ ವಾಂತಿ ಭೇದಿ ಪ್ರಕರಣಗಳು ಸಂಭವಿಸಿರುವುದಿಲ್ಲ. ಸಾರ್ವಜನಿಕರು ಆತಂಕ ಪಡುವ ಅವಶ್ಯಕತೆ ಇರುವುದಿಲ್ಲ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




ಹಗರಿಬೊಮ್ಮನಹಳ್ಳಿ. ಜು.09 ತಾಲೂಕಿನ ವರದಾಪುರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಮಂಗಳವಾರ ಎಸ್‌ಎಲ್‌ಆರ್ ಮೆಟಾಲಿಕ್ಸ್ ಲಿ. ಸಿಎಸ್‌ಆರ್ ಯೋಜನೆಯಡಿ ಹಿಂದೂ ಸೇವಾ ಪ್ರತಿಷ್ಠಾನ ಸಂಸ್ಥೆಯ ಸಹಯೋಗದೊಂದಿಗೆ ವಿಶ್ವ ಪರಿಸರ ದಿನಾಚರಣೆ ಆಚರಿಸಲಾಯಿತು

# ಗುರುಮಠಕಲ್ ಪದವಿ ಕಾಲೇಜು ವಿದ್ಯಾರ್ಥಿಗಳ ಸಮಸ್ಯೆಗೆ ಸ್ಪಂದಿಸಿದ ಶಾಸಕ ಶರಣಗೌಡ ಕಂದಕೂರ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಭಯ ಪಡುವುದು ಬೇಡ, ಯಾವುದೇ ಪುಂಡ ಪೋಕರಿಗಳಿಂದ ಕಾಲೇಜು ಸಮಯದಲ್ಲಿ ನನ್ನ ಮತಕ್ಷೇತ್ರದಲ್ಲಿ ತೊಂದರೆಯಾಗುವುದಿಲ್ಲ, ಭಯ ಬಿಟ್ಟು ನೀವು ಓದುವುದಕ್ಕೆ ಗಮನ ನೀಡಿ ಎಂದು ಶಾಸಕ ಶರಣಗೌಡ ಕಂದಕೂರ ಗುರುಮಠಕಲ್ ಪದವಿ ಕಾಲೇಜು ವಿದ್ಯಾರ್ಥಿನಿಯರಿಗೆ ಭರವಸೆ ನೀಡಿದರು.

ಗುರುಮಠಕಲ್ ಪಟ್ಟಣದ ಪದವಿ ಕಾಲೇಜಿಗೆ ಭೇಟಿ ನೀಡಿದ ಶಾಸಕ ಶರಣಗೌಡ ಕಂದಕೂರ ಕಾಲೇಜು ಸಭಾಂಗಣದಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಂದ ಬಂದ ಸಮಸ್ಯೆಗಳ ಪಟ್ಟಿಯಿಂದ ಈ ಭರವಸೆಗಳ ಮಾತುಗಳನ್ನಾಡಿ, ನಾನು ನಿಮ್ಮ ಮನೆಯ ಅಣ್ಣನಂತೆ ನಿಮ್ಮನ್ನು ರಕ್ಷಿಸುತ್ತೇನೆ, ನೀವು ಓದುವ ಸಂದರ್ಭದಲ್ಲಿ ನಿಮಗೆ ಯಾರಿಂದಲಾದರೂ ಒಂದು ಸಣ್ಣ ಕಿರಿಕಿರಿಯುಂಟಾದರೆ ನನ್ನ ಗಮನಕ್ಕೆ ತನ್ನಿ ನಾನು ಆ ಸ್ಥಳದಿಂದ ನಿಮ್ಮನ್ನು ರಕ್ಷಿಸುವ ಕೆಲಸ ಮಾಡುತ್ತೇನೆ, ಪುಂಡ ಪೋಕರಿಗಳಿಗೆ ಎಡೆಮುರಿಕಟ್ಟಲು ಪೊಲೀಸ್ ಇಲಾಖೆಗೆ ಸಂಪೂರ್ಣ ಸಹಕಾರ ನೀಡಿ ನಿಮ್ಮ ರಕ್ಷಣೆಗೆ ಪ್ರತಿದಿನಗೂ ಗಮನಿಸುತ್ತೇವೆ ಎಂದು ಭರವಸೆ ನೀಡಿದರು.

ಕಾಲೇಜು ಆವರಣದಲ್ಲಿ ಪುಂಡ ಪೋಕರಿಗಳು, ಆಗಮಿಸಿವದು, ಗುಟ್ಕಾ ಸಿಗರೇಟ್ ಸೇದಿ ಎಲ್ಲೆಂದರಲ್ಲಿ ಬಿಸಾಡುವುದು, ವಿದ್ಯಾರ್ಥಿಗಳಿಗೆ ಸೂಕ್ತ ಬಸ್ ಸೌಲಭ್ಯ, ಕುಡಿಯುವ ನೀರು, ಗುಣಮಟ್ಟದ ರಸ್ತೆ, ಕ್ರಿಕೆಟ್ ಮೈದಾನ ಬಳಿ ಇರುವುದರಿಂದ ಅಪರಿಚಿತ ವ್ಯಕ್ತಿಗಳು ಕಾಲೇಜು ಮೈದಾನಕ್ಕೆ ಆಗಮಿಸುವುದು ಸೇರಿದಂತೆ ಹಲವು ಸಮಸ್ಯೆಗಳ ಪರಿಹಾರಕ್ಕೆ ಕ್ರಮಕೈಗೋಳ್ಳಬೇಕು ಎಂದು ಗುರುಮಠಕಲ್ ಪಟ್ಟಣದ ಪದವಿ ಕಾಲೇಜು ವಿದ್ಯಾರ್ಥಿ,

### ವಿದ್ಯಾರ್ಥಿಗಳೇ ಭಯ ಬೇಡಿ, ನಿಮಗೆ ನಾ ರಕ್ಷಾ ಕವಚವಾಗಿ ನಿಲ್ತಿನಿ

ವಿದ್ಯಾರ್ಥಿನಿಯರು ಶಾಸಕ ಶರ–ಣಗೌಡ ಕಂದಕೂರ ಅವರ ಬಳಿ ಅಳಲು ತೋಡಿಕೊಂಡರು.

ಸಭಾಂಗಣದಿಂದಲೇ ತಕ್ಷಣ ಸ್ಪಂದಿಸಿದ ಶಾಸಕ ಶರಣಗೌಡ ಕಂದಕೂರ ಯಾದಗಿರಿ ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳಿಗೆ ಪೋನಾಯಿಸಿ ಕಾಲೇಜು ವಿದ್ಯಾರ್ಥಿಗಳು ನೀಡಿದ ದೂರನ್ನು ಗಮನಕ್ಕೆ ತಂದು ಕೂಡಲೇ ಕ್ರಮಕೈಗೊಳ್ಳಬೇಕೆಂದು ಸೂಚಿಸಿದರು.

ಬಸ್ ಸೌಲಭ್ಯ ಕಲ್ಪಿಸಿ : ಗುರುಮಠಕಲ್ ತಾಲೂಕಿನ ಮಲ್ಲಾಪೂರ, ಬೂರಪಲ್ಲಿ, ವಡವಟ್ ಸೇರಿದಂತೆ ಹಲವು ಗ್ರಾಮಗಳಿಂದ ಗುರುಮಠಕಲ್ ಪಟ್ಟಣಕ್ಕೆ ಬಸ್ ಸೌಲಭ್ಯ ಕಲ್ಪಿಸಬೇಕು, ಅದೇ ರೀತಿಯಾಗಿ ಕಾಲೇಜು ಸಮಯಕ್ಕೆ ಸರಿಯಾಗಿ ಬಸ್ ತಲುಪುವ, ಹಾಗೂ ಕಾಲೇಜು ಬಿಡುವ ವೇಳೆಯಿಂದ ಗ್ರಾಮಗಳಿಗೆ ತಲುಪುವ ಬಸ್ ಸೌಲಭ್ಯ ಒದಗಿಸಿದರೆ ಉತ್ತಮವಾಗುತ್ತದೆ ಎಂದು ವಿದ್ಯಾರ್ಥಿಗಳು ಕೇಳಿಕೊಂಡ ತಕ್ಷಣ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ವಿಷಯ ತಿಳಿಸಿದ ಶಾಸಕ ಶರಣಗೌಡ ಕಂದಕೂರ ಈ ಗ್ರಾಮಗಳಿಗೆ ಬಸ್ ವ್ಯವಸ್ಥೆ ಕಲ್ಪಿಸುವುದರೊಂದಿಗೆ ವಿದ್ಯಾರ್ಥಿ ನಿಲಯ ಬಳಿ ಕೋರಿಕೆ ಬಸ್ ನಿಲುಗಡೆಗೆ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು.

ಉಪನ್ಯಾಸಕರನ್ನು ನೇಮಿಸಿ : ಗುರುಮಠಕಲ್ ಪದವಿ ಕಾಲೇಜಿನಲ್ಲಿ ಹಲವು ಉಪನ್ಯಾಸಕ ಹುದ್ದೆಗಳು ಖಾಲಿ ಇರುವುದಿರಿಂದ ವಿದ್ಯಾರ್ಥಿಗಳಿಗೆ ಪಾಠ ಪ್ರವಚನಕ್ಕೆ ತುಂಬಾ ತೊಂದರೆಯಾಗುತ್ತಿದ್ದು, ಉಪನ್ಯಾಸಕರ ನೇಮಕ ಮಾಡಲು ಕ್ರಮಕೈಗೊಳ್ಳುವಂತೆ ವಿದ್ಯಾರ್ಥಿಗಳು ಮನವಿ ಮಾಡಿದಾಗ ಶಾಸಕ ಕಂದಕೂರ ಸರ್ಕಾರದ ಗಮನಕ್ಕೆ ತಂದು ಕ್ರಮಕೈಗೊಳ್ಳುವುದಾಗಿ ತಿಳಿಸಿದರು.

ಹಾಸ್ಟೇಲ್ ಅವ್ಯವಸ್ಥೆಯ ಅನಾವರಣ : ಹೈದರಾಬಾದ್ ರಸ್ತೆ ಬಳಿ ಇರುವ ಹಾಸ್ಟೇಲ್‌ನಲ್ಲಿ ಅವ್ಯವಸ್ಥೆಯ ಅನಾವರಣವಿದೆ, ಕಳೆದ 1 ವರ್ಷದಿಂದ ವಿದ್ಯಾರ್ಥಿಗಳಿಗೆ ಬಿಸಿ ನೀರು ಸಿಗುತ್ತಿಲ್ಲ, ಚಳಿಗಾಲ, ಮಳೆಗಾಲದ ಸಮಯದಲ್ಲಿ ಬೆಳಗ್ಗೆ ವಿದ್ಯಾರ್ಥಿಗಳು ತುಂಬಾ ತೊಂದರೆ ಅನುಭವಿಸುತ್ತಿದ್ದು, ಹಾಸ್ಟೇಲ್ ವಾರ್ಡ್ನ ಮತ್ತು ಮೇಲಾಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮಕೈಗೊಳ್ಳುತ್ತಿಲ್ಲವೆಂದು ವಿದ್ಯಾರ್ಥಿಗಳು ಶಾಸಕರ ಎದುರು ಹಾಸ್ಟೇಲ್ ಸಮಸ್ಯೆಗಳನ್ನು ಬಿಚ್ಚಿಟ್ಟರು. ಕೂಡಲೇ ಸ್ಪಂದಿಸಿದ ಶಾಸಕ ಶರಣಗೌಡ ಕಂದಕೂರ ವಸತಿ ನಿಲಯ ವಾರ್ಡ್ನಗಳಿಗೆ ಶೀಘ್ರವಾಗಿ ಕ್ರಮಕೈಗೊಳ್ಳಬೇಕು ಎಂದು ತಾಕೀತು ಮಾಡಿದರು. ಅದರ ಜೊತೆಗೆ ಹಾಸ್ಟೆಲ್‌ನಲ್ಲಿ ಸ್ವಚ್ಛತೆ ಕಾಪಾಡುವುದರೊಂದಿಗೆ ಸರಿಯಾದ ಸಮಯಕ್ಕೆ ಉತ್ತಮ ಗುಣಮಟ್ಟದ ಆಹಾರ ಒದಗಿಸಬೇಕು ಎಂದು ಸೂಚಿಸಿದರು.

ವಿದ್ಯಾರ್ಥಿಗಳೇ ನಿಮಗೆ ಸೌಲಭ್ಯ ಕೊಡಬೇಕಾಗಿರುವುದು ನಮ್ಮ ಜವಾಬ್ದಾರಿ ನೀವು ಉನ್ನತ ಸ್ಥಾನಕ್ಕೆ ಹೋಗಬೇಕಾಗಿರುವುದರಿಂದ ನಿಮ್ಮ ಕನಸು ಈಡೇರಿಸಲು ಕಾಲೇಜು ಒಂದು ವೇದಿಕೆ ಇದನ್ನು ಸರಿಯಾಗಿ ಬಳಸಿಕೊಂಡು ಉತ್ತಮ ವಿದ್ಯಾರ್ಜನೆ ಮಾಡಬೇಕು ಎಂದು ಕಂದಕೂರ ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ಈ ಸಂದರ್ಭದಲ್ಲಿ ಪ್ರಥಮ ದರ್ಜೆ ಕಾಲೇಜು ಪ್ರಾಂಶುಪಾಲರಾದ ಪುರಶೋತ್ತಮ ಜೋಶಿ, ಕಾಲೇಜು ಆಡಳಿತ ಮಂಡಳಿ ಸದಸ್ಯರು ಹಾಗೂ ಸಿಬ್ಬಂದಿ ವರ್ಗ ಇದ್ದರು.

### ವಿದ್ಯಾರ್ಥಿಗಳಿಗೆ ನೆರಳಾಗಿ ನಿಲ್ಲುವೆ

ನನ್ನ ಮತಕ್ಷೇತ್ರದಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತೇನೆ, ಹಿಂದುಳಿದ ಹಣೆಪಟ್ಟಿಯಿಂದ ದೂರ ಸರಿಸಲು ಶಿಕ್ಷಣವೊಂದೆ ಪರಿಹಾರವಾಗಿದ್ದು, ವಿದ್ಯಾರ್ಥಿಗಳು ವಿದ್ಯಾರ್ಜನೆಯ ಸಂದರ್ಭಲ್ಲಿ ಯಾವುದೇ ತೊಂದರೆಗೆ ಒಳಗಾಗ ಬಾರದು ನಿಮಗೆ ನೆರಳಾಗಿ ನಾನು ನಿಲ್ಲುವೆ, ನೀವು ಕೇವಲ ಓದುವುದೊಂದೆ ಕೆಲಸ ಮಾಡಿ, ಉನ್ನತ ವ್ಯಾಸಂಗ ಮಾಡಿ ನಿಮ್ಮ ಕುಟುಂಬಕ್ಕೆ ನೀವು ನೆರಳಗಾಗಿ ನಿಲ್ಲಬೇಕು, ಅಲ್ಲಿಯವರಗೆ ನಾನು ಅವಿರತವಾಗಿ ನಿಮ್ಮ ಜೊತೆ ನಿಲ್ಲುವೆ.

–ಶರಣಗೌಡ ಕಂದಕೂರ ಶಾಸಕರು, ಗುರುಮಠಕಲ್ ಮತಕ್ಷೇತ್ರ

### ಮಳೆ ಬಂದ್ರೆ ಕಾಲೇಜು ಸೂರುತ್ತೇ

ಮಳೆ ಬಂದರೆ ಕಾಲೇಜಿನ ಕೆಲವು ಕೋಣಗಳು ಸೂರುತ್ತವೆ. ಇದರಿಂದ ತುಂಬಾ ತೊಂದರೆಯಾಗುತ್ತದೆ, ಅದರ ಜೊತೆಗೆ ವಿದ್ಯಾರ್ಥಿ ವಸತಿ ನಿಲಯಗಳಲ್ಲಿ ಶುದ್ಧ ಕುಡಿವ ನೀರಿನ ಸಮಸ್ಯೆ ಇದೆ, ಕಾಲೇಜಿಗೆ ಮೂಲಸೌಕರ್ಯ ಒದಗಿಸಬೇಕು

: ಕಾಲೇಜು ವಿದ್ಯಾರ್ಥಿಗಳು

## ಬುಕರ್ ಪ್ರಶಸ್ತಿ ಪುರಸ್ಕೃತ ಬಾನುಮುಷ್ತಾಕ್‌ರ ಎದೆಯ ಹಣತೆ. ತೇಜಸ್ವಿ ಅವರ ಮಾಯಾಮೃಗ ನಾಟಕ ಪ್ರದರ್ಶನ ಹಾಸನದಲ್ಲಿ ಜುಲೈ 11ಕ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಅಂತಾರರಾಷ್ಟ್ರೀಯ ಬುಕರ್ ಪ್ರಶಸ್ತಿ ಪುರಸ್ಕೃತರಾದ ಬಾನುಮುಷ್ತಾಕ್ ಅವರ ಎದೆಯ ಹಣತೆ ಕಥೆಯನ್ನು ಆಧರಿಸಿದ ನಾಟಕ ಮತ್ತು ಸಾಹಿತಿ ಕೆ.ಪಿ.ಪೂರ್ಣಚಂದ್ರ ತೇಜಸ್ವಿ ಅವರ ಮಾಯಾಮೃಗ ನಾಟಕ ಪ್ರದರ್ಶನವನ್ನು ಜುಲೈ 11ರಂದು ಶುಕ್ರವಾರ ಹಾಸನಾಂಬ ಕಲಾ ಕ್ಷೇತ್ರದಲ್ಲಿ ಹಾಸನದ ರಂಗಸಿರಿ ಕಲಾ ತಂಡ ಆಯೋಜಿಸಿದೆ.

ನೀನಾಸಮ್ ರಂಗಶಿಕ್ಷಣ ಕೇಂದ್ರದ ಪ್ರಾಂಶುಪಾಲ ಡಾ.ಎಂ. ಗಣೇಶ್ ಹೆಗ್ಗೋಡು ನಿರ್ದೇಶನ ಮಾಡಿರುವ ಈ ನಾಟಕವನ್ನು ಹೆಗ್ಗೋಡಿನ ಸತ್ಯಶೋಧನ ರಂಗಸಮುದಾಯದ ನೇತೃತ್ವದಲ್ಲಿ ಜನಮನದಾಟ ರಂಗ ತಂಡ ಅಭಿನಯಿಸಲಿದೆ.

ಇದೇ ಸಂದರ್ಭದಲ್ಲಿ ಬುಕರ್ ಪ್ರಶಸ್ತಿ ಪುರಸ್ಕೃತರಾದ ಬಾನುಮುಷ್ತಾಕ್ ಅವರನ್ನು ಜಿಲ್ಲಾಧಿಕಾರಿ ಲತಾಕುಮಾರಿ ಅವರು ಅಭಿನಂದಿಸಲಿದ್ದಾರೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಮತ್ತು ರಂಗಸಿರಿ ಗೌರವಾಧ್ಯಕ್ಷ ಶಿವಾನಂದ ತಗಡೂರು ಅವರು ಅಧ್ಯಕ್ಷತೆ ವಹಿಸುವ ಈ ಕಾರ್ಯಕ್ರಮವನ್ನು ಶಾಸಕ ಎಚ್.ಪಿ.ಸ್ವರೂಪ್ ಉದ್ಘಾಟಿಸಲಿದ್ದಾರೆ.

ಜಿಪಂಸಿಇಒಡಾ.ಬಿ.ಆರ್.ಪೂರ್ಣಿಮಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮದ್ ಸುಜೀತ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಜಿಲ್ಲಾ ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ರವಿ ನಾಕಲಗೂಡು, ರಂಗಸಿರಿ ಅಧ್ಯಕ್ಷ ಕೆ.ರಂಗಸ್ವಾಮಿ, ಕಾರ್ಯದರ್ಶಿ ಪಿ.ಶಾಡ್ರಾಕ್, ಖಜಾಂಚಿ ಡಿ.ಎಸ್.ಲೋಕೇಶ್ ಮತ್ತಿತರರು ಭಾಗವಹಿಸುವರು.

## ಕರ್ನಾಟಕ ರೈತ ಪ್ರಧಾನಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆ: ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ಸಲಹೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ತೋಟಗಾರಿಕೆ ಇಲಾಖೆ ವತಿಯಿಂದ 2025–26 ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ( ವಿಮಾ ) ಯೋಜನೆಯಡಿ ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕಿನ ರೈತರು ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಬೇಕು ಎಂದು ಜಿಪಂ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಅನುಷ್ಠಾನಗೊಳಿಸಲು ಬಳ್ಳಾರಿ, ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕುಗಳ ಹೋಬಳಿ ಹಾಗೂ ಗ್ರಾಮ ಪಂಚಾಯತ್ ಮಟ್ಟಕ್ಕೆ ಕೆಂಪು ಮೆಣಸಿನಕಾಯಿ (ನೀರಾವರಿ) ಬೆಳೆಯನ್ನು ಅಧಿಸೂಚಿಸಲಾಗಿದೆ.

ಪರಿಷ್ಕೃತ ಯೋಜನೆಯ ಮಾರ್ಗಸೂಚಿಯನ್ವಯ ಬ್ಯಾಂಕಿನಲ್ಲಿ ಬೆಳೆ ಸಾಲ ಮಂಜೂರಾದ ಎಲ್ಲಾ ರೈತರನ್ನು ಕಡ್ಡಾಯವಾಗಿ ಈ ಯೋಜನೆಯಡಿ ಒಳಪಡಿಸಲಾಗುವುದು. ನಂತರ ಬೆಳೆ ಸಾಲ ಪಡೆದ ರೈತರು ಈ ಯೋಜನೆಯಲ್ಲಿ ಭಾಗವಹಿಸಲು ಇಚ್ಛೆ ಪಡದೇ ಇದ್ದಲ್ಲಿ ಈ ಕುರಿತು ಬ್ಯಾಂಕಿನ ವ್ಯವಸ್ಥಾಪಕರಿಗೆ ಬೆಳೆ ನೋಂದಣಿ ಅಂತಿಮ ದಿನಕ್ಕಿಂತ 7 ದಿನಗಳು ಮುಂಚಿತವಾಗಿ ಲಿಖಿತವಾಗಿ ಮುಚ್ಚಳಿಕೆ ಪತ್ರ ನೀಡಿದಲ್ಲಿ ಅಂತಹ ರೈತರನ್ನು ಬೆಳೆ ವಿಮೆ ನೋಂದಣಿ ಯೋಜನೆಯಿಂದ ಕೈಬಿಡಲಾಗುವುದು.

ಬೆಳೆ:ಕೆಂಪು ಮೆಣಸಿನಕಾಯಿ (ನೀರಾವರಿ), ವಿಮಾ ಮೊತ್ತ ರೂ.43,505(ಪ್ರತಿ ಎಕರೆಗೆ), ರೈತರ ವಿಮಾ ಕಂತು(ಪ್ರತಿ ಎಕರೆಗೆ) ರೂ.2,175 ಪಾವತಿಸಬೇಕು. ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಲು ಜುಲೈ 31 ಕೊನೆಯ ದಿನ.

ಪ್ರಸುತ್ತ ಸಾಲಿನ ಮುಂಗಾರು ಹಂಗಾಮಿನಲ್ಲಿ ಸ್ಥಳ ನಿರ್ದಿಷ್ಟ, ಪ್ರಕೃತಿ ವಿಕೋಪಗಳಾದ ಆಲಿಕಲ್ಲು ಮಳೆ, ಭೂಕುಸಿತ ಮತ್ತು ಬೆಳೆ ಮುಳುಗಡೆ ಸಂದರ್ಭದಲ್ಲಿ ಬೆಳೆ ನಷ್ಟ ಉಂಟಾದರೆ ವೈಯಕ್ತಿಕ ನಷ್ಟದ ನಿರ್ಧಾರಣೆಗಾಗಿ ಕುರುಗೋಡು ಮತ್ತು ಕಂಪ್ಲಿ ತಾಲ್ಲೂಕುಗಳನ್ನು ಅಧಿಸೂಚಿಸಲಾಗಿದೆ.

ಶೇ.75 ಕ್ಕಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆ ವಿಫಲಗೊಂಡರೆ ವಿಮಾ ಗರಿಷ್ಟ ಶೇ.25 ರಷ್ಟು ಪರಿಹಾರವನ್ನು ವಿಮಾ ಸಂಸ್ಥೆಯು ವಿಮೆ ಮಾಡಿಸಿದ ಎಲ್ಲಾ ರೈತರಿಗೆ ಇತ್ಯರ್ಥಪಡಿಸಿ ಮುಂದಿನ ಅವಧಿಗೆ ಅವರ ಬೆಳೆ ವಿಮೆ ರದ್ದುಪಡಿಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ದೂ.08392–278177 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂವಿಧಾನ ಸಂರಕ್ಷಣಾ ಸಮಿತಿ ಅಸ್ಥಿತ್ವಕ್ಕೆ ಪಧಾಧಿಕಾರಿಗಳ ನೇಮಕ!!



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಸಮಾಜದಲ್ಲಿ ಅಹಿಂದ ವರ್ಗ ಶೈಕ್ಷಣಿಕ, ಸಮಾಜಿಕ, ಆರ್ಥಿಕ, ರಾಜಕೀಯವಾಗಿ ಅತ್ಯಂತ ಹಿಂದುಳಿದಿದ್ದು, ಸಂವಿಧಾನದ ಅಶೋತ್ತರಗಳ ಕುರಿತು ಜನಮಾನಸದಲ್ಲಿ ಜಾಗ್ರತಿ ಮೂಡಿಸಲು. ಆ,9ರಂದು ಶಹಾಪುರದಲ್ಲಿ ಸಂವಿಧಾನ ಜನಜಾಗ್ರತಿ ಸಮಾವೇಶ ಹಮ್ಮಿಕೊಂಡಿದ್ದು, ಈ ಕುರಿತು ಸಂವಿಧಾನ ಸಂರಕ್ಷಣಾ ಸಮಿತಿ ಅಸ್ಥಿತ್ವಕ್ಕೆ ತರಲಾಯಿತು, ನಗರದ ಕಸಾಪ ಭವನದಲ್ಲಿ ನಡೆದ ಅಹಿಂದ ವರ್ಗಗಳ ಸಭೆಯಲ್ಲಿ ಈ ನಿರ್ಧಾರ ಕೈಗೊಂಡು ನೂತನ ಪಧಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು, ಜಿಲ್ಲಾಮಟ್ಟದ ಈ ಸಂವಿಧಾನ ಜನಜಾಗ್ರತಿ ಸಮಾವೇಶ ಸಭೆಯ ಅದ್ಯಕ್ಷತೆಯನ್ನು ಅಹಿಂದ ನಾಯಕರಾದ ಶರಣಪ್ಪ ಸಲಾದಪುರವರು ವಹಿಸಿದ್ದರು, ಅಹಿಂದ ಮುಖಂಡ ನೀಲಕಂಠ ಬಡಿಗೇರವರು ಪ್ರಾಸ್ತಾವಿಕವಾಗಿ ಮಾತನಾಡಿ ಸಂವಿಧಾನದ ಜನಜಾಗ್ರತಿ ಕಾರ್ಯಕ್ರಮದ ರೂಪರೇಶಗಳ ಕುರಿತು ಮಾತನಾಡಿದರು, ಈ ಸಂಧರ್ಭದಲ್ಲಿ ಸಂವಿಧಾನ ಸಂರಕ್ಷಣಾ ಸಮಿತಿ ನೂತನ ಪಧಾಧಿಕಾರಿಗಳನ್ನು ನೇಮಕ ಮಾಡಲಾಯಿತು, ಸಮಿತಿ ಗೌರವಾಧ್ಯಕ್ಷರಾಗಿ ಶರಣಪ್ಪ ಸಲಾದಪುರ, ಅಧ್ಯಕ್ಷರಾಗಿ ನೀಲಕಂಠ ಬಡಿಗೇರ, ಕಾರ್ಯಾಧ್ಯಕ್ಷರಾಗಿ ಶಾಂತಪ್ಪ ಕಟ್ಟಿಮನಿ, ಕೋಶಾಧ್ಯಕ್ಷರಾಗಿ ಸೈಯದ್ ಖಾದ್ರಿ ಉಪಾಧ್ಯಕ್ಷರಾಗಿ ಅಹಿಂದ ಮುಖಂಡರಾದ ಅಯ್ಯಣ್ಣ ಕನ್ಯಾಕೋಳೂರ, ರುದ್ರಪ್ಪಹುಲಿಮನಿ, ಬಾಷುಮೀಯ ವಡಗೇರಾ, ಅಮರೇಶ ವಿಭೂತಿಹಳ್ಳಿ, ಬಸವರಾಜ ತಳವಾರ ಮತ್ತು ಕಾರ್ಯದರ್ಶಿಗಳಾಗಿ ಮರೆಪ್ಪ ಪ್ಯಾಟಿ, ಪ್ರಚಾರ ಸಮಿತಿ ಅಧ್ಯಕ್ಷರಾಗಿ ಚಂದ್ರು ಚಕ್ರವರ್ತಿ, ರವನ್ನು ಸಭೆ ಸರ್ವಾನುಮತದಿಂದ ನೇಮಕ ಮಾಡಿದರು, ಈ ಸಭೆಯಲ್ಲಿ ಬಾಬುರಾವ್ ಬೂತಾಳೆ, ಮಲ್ಲಪ್ಪ ಬಿರನೂರ, ಮಾನಪ್ಪ ಗಡ್ಡದ್ ಬಸವರಾಜ ಗುಡಿಮನಿ, ಬಸವರಾಜ ಬಳಬಟ್ಟಿ, ನಿಂಗಪ್ಪ ದೊಡ್ಮನಿ, ಯಂಕಪ್ಪ ಪೂಜಾರಿ, ದವಲಪ್ಪ ಸಜ್ಜನ, ಚಂದ್ರಶೇಖರ ಬೇವಿನಳ್ಳಿ, ಮೋಹನರಾಜಗೌಡ ಕನ್ಯಾಕೊಳೂರ, ಬಲಭೀಮ ಬೇವಿನಳ್ಳಿ, ಬಸವರಾಜ ಚಿಪ್ಪಾರ್, ಭೀಮರಾಯಜುನ್ನಾ,, ಮಲ್ಲಿಕಾರ್ಜುನ ಅಂಗಡಿ, ನಿಂಗರಾಜ ಕೊಳ್ಳೂರ, ಈರಣ್ಣ ಶಖಾಪುರ, ಶಿವು ಪೋತೆ. ಪ್ರಭು ದಿಗ್ಗಿ, ಚಂದ್ರಶೇಖರ ಹತ್ತಿಗುಡೂರ, ಮಾನಪ್ಪ ಜೇಗ್ರಿ, ಲಕ್ಷ್ಮಣ ಹಳಿಸಗರ, ಸಂತೋಷ ಹೋಸಮನಿ, ಶೇಖಪ್ಪ ಕತ್ತಿ, ಭೀಮರಾಯ ಬಡಿಗೇರ, ನಿಂಗಪ್ಪ ದೊರನಳ್ಳಿ, ಲಕ್ಷ್ಮಣ ದೋರನಳ್ಳಿ, ಹೊನ್ನಪ್ಪ ಮಾನ್ಪಡೆ. ಅಮಜಾದ್ ಹುಸೇನಿ, ವಿಸ್ವಬೀರನೂ, ಶಂಕರ ಶೇಟ್ಟಿಕೇರಾ, ಪಂಡಿತ ಮಡ್ನಾಳ, ಸೇರಿದಂತೆ ವಿವಿಧ ಸಮಾಜದ ಮುಖಂಡರು ಸಂಘ ಸಂಸ್ಥೆಗಳ ಪಧಾಧಿಕಾರಿಗಳು ಭಾಗವಹಿಸಿದ್ದರು

# ಮದ್ಯ ಮಾರಾಟ ನಿಷೇಧ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ರಾಯಚೂರು, ಬಳ್ಳಾರಿ, ಕೊಪ್ಪಳ ಮತ್ತು ವಿಜಯನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿಯಮಿತ, ಬಳ್ಳಾರಿ ಇದರ ಕಾರ್ಯವ್ಯಾಪ್ತಿಯ ಆಡಳಿತ ಮಂಡಳಿ ನಿರ್ದೇಶಕರ ಸಾಮಾನ್ಯ ಚುನಾವಣೆ ಹಿನ್ನೆಲೆಯಲ್ಲಿ ಬಳ್ಳಾರಿಯ ಒಕ್ಕೂಟದ ಆಡಳಿತ ಕಚೇ–ರಿಯ 02 ಕಿ.ಮೀ ವ್ಯಾಪ್ತಿಯಲ್ಲಿ ಜುಲೈ 09 ರಂದು ಸಂಜೆ 06 ಗಂಟೆಯಿಂದ ಜುಲೈ 11 ರ ಬೆಳಿಗ್ಗೆ 06 ಗಂಟೆಯವರೆಗೆ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಕರ್ನಾಟಕ ಅಬಕಾರಿ ಕಾಯ್ದೆ 1965 ರ ಕಲಂ 21 ರನ್ವಯ ಮದ್ಯ ಮಾರಾಟ, ಸಾಗಣಿಕೆ ಮಾಡದಂತೆ ಹಾಗೂ ಮದ್ಯ ಅಂಗಡಿ,ಬಾರ್–ರೆಸ್ಟೋರೆಂಟ್‌ಗಳನ್ನು ತೆರೆಯದಂತೆ ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾದಂಡಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ಈ ಆದೇಶವು ಡಿಸ್ಟಲರೀಸ್ ರಾಜ್ಯದ ವಿವಿಧ ಕೆ.ಎಸ್.ಬಿ.ಸಿ.ಎಲ್ ಡಿಪೊಗಳಿಗೆ ದಾಸ್ತಾನು ವಿಲೇವಾರಿ ಮಾಡಲು ಅನ್ವಯಿಸುವುದಿಲ್ಲ ಎಂದು ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ಜು.12 ರಂದು ರಾಷ್ಟ್ರೀಯ ಲೋಕ್ ಅದಾಲತ್

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ನಿರ್ದೇಶನದಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ವತಿಯಿಂದ ಜುಲೈ 12 ರಂದು ನಗರದ ತಾಳೂರು ರಸ್ತೆಯ ಹೊಸ ಜಿಲ್ಲಾ ನ್ಯಾಯಾಲಯ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ನಡೆಸಲಾಗುವುದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಕೆ.ಜಿ.ಶಾಂತಿ ಅವರು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ವ್ಯಾಜ್ಯಪೂರ್ವ, ರಾಜಿಯಾಗಬಹುದಾದ ಅಪರಾಧಿಕ ಪ್ರಕರಣಗಳು, ಚೆಕ್ ಪ್ರಕರಣಗಳು, ಬ್ಯಾಂಕ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪರಿಹಾರ ನ್ಯಾಯಾಧೀಕರಣದ ಪ್ರಕರಣಗಳು, ವೈವಾಹಿಕ ಹಾಗೂ ಕೌಟುಂಬಿಕ ಪ್ರಕರಣಗಳು, ಸಿವಿಲ್ ಪ್ರಕರಣಗಳು ಹಾಗೂ ಇತರೆ ರಾಜಿಯಾಗಬಹುದಾದ ಪ್ರಕರಣಗಳನ್ನು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ಜುಲೈ 12 ರಂದು ನಡೆಯುವ ರಾಷ್ಟ್ರೀಯ ಲೋಕ್ ಅದಾಲತ್ ಮೂಲಕ ಶೀಘ್ರವೇ ಇತ್ಯರ್ಥಗೊಳಿಸಿ ಪರಿಹಾರ ಪಡೆದುಕೊಳ್ಳಲು ಸುವರ್ಣ ಅವಕಾಶವಾಗಿದೆ. ಸಾರ್ವಜನಿಕರು ಹಾಗೂ ಕಕ್ಷಿದಾರರು ಇದರ ಪ್ರಯೋಜನ ಪಡೆದು–ಕೊಂಡು ತಮ್ಮ ವಿವಾದಗಳನ್ನು ಅಂತ್ಯಗೊಳಿಸಬಹುದು ಎಂದು ಅವರು ತಿಳಿಸಿದ್ದಾರೆ.

ರಾಷ್ಟ್ರೀಯ ಲೋಕ್ ಅದಾಲತ್ ಅಂಗವಾಗಿ ಪ್ರತಿದಿನ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯ ಒಟ್ಟು 31 ನ್ಯಾಯಾಲಯಗಳಲ್ಲಿ ಪೂರ್ವಭಾವಿ ಬೈಠಕ್‌ಗಳು ನಡೆಯುತ್ತಲಿವೆ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿ ಅಥವಾ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ತಾಲ್ಲೂಕು ಕಾನೂನು ಸೇವಾ ಸಮಿತಿಗಳಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯಮಟ್ಟದ ಈಜು ಬ್ಯಾಕ್ ಸ್ಟ್ರೋಕ್‌ನಲ್ಲಿ ಬಳ್ಳಾ–ರಿಯ ಎಸ್.ಜಿ.ಪ್ರಜ್ವಲ್ ಗೆ ಮೂರನೇ ಸ್ಥಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ಮೈಸೂರಿನಲ್ಲಿ ಇತ್ತೀಚೆಗೆ ನಡೆದ ರಾಜ್ಯ ಮಟ್ಟದ ಈಜು ಬ್ಯಾಕ್ ಸ್ಟ್ರೋಕ್‌ನಲ್ಲಿ ನಗರದ ಬಾಲಭಾರತಿ ಶಾಲೆಯ ವಿದ್ಯಾರ್ಥಿ ಎಸ್.ಜಿ. ಪ್ರಜ್ವಲ್ ಅವರು 3ನೇ ಸ್ಥಾನ ಪಡೆದಿದ್ದಾರೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಈಜು ಕೊಳದಲ್ಲಿ ತರಬೇತಿ ಪಡೆಯುತ್ತಿದ್ದ ಎಸ್.ಜಿ.ಪ್ರಜ್ವಲ್, ತರಬೇತುದಾರ ರ‍್ರಿಸ್ವಾಮಿ ಅವರ ನಿರ್ದೇಶನ ಹೊಂದಿದ್ದರು.

ಈ ಸಾಧನೆಗೆ ಜಿಲ್ಲಾಡಳಿತ ಅಭಿನಂದಿಸಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

## ಸೌತ್ ಇಂಡಿಯಾ ಇನ್ವಿಟೇಷನ್ ಟೂರ್ನ್ಮೆಂಟ್; ಬಳ್ಳಾರಿಯ ಫುಟ್‌ಬಾಲ್ ತಂಡ ಪ್ರಥಮ ಸ್ಥಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ತುಮಕೂರಿನಲ್ಲಿ ಕಳೆದ ಬುಧವಾರ (ಜು.02 ರಂದು) ರಂದು ನಡೆದ ಸೌತ್ ಇಂಡಿಂ–ಯಾ ಇನ್ವಿಟೇಷನ್ ಟೂರ್ನ್ಮೆಂಟ್ ಪಂದ್ಯಾವಳಿಯಲ್ಲಿ ಬಳ್ಳಾರಿಯ ಫುಟ್‌ಬಾಲ್ ತಂಡ ಪ್ರಥಮ ಸ್ಥಾನ ಗಳಿಸಿದೆ.

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕ್ರೀಡಾ ವಸತಿ ನಿಲಯದಲ್ಲಿ ತಂಡ ಫುಟ್‌ಬಾಲ್ ಕ್ರೀಡಾಪಟುಗಳು ಫುಟ್‌ಬಾಲ್ ತರಬೇತುದಾರ ಮಹ್ಮದ್ ಮಸೂದ್ ಅವರ ಮಾರ್ಗದರ್ಶನದಲ್ಲಿ ತರಬೇತಿ ಪಡೆದುಕೊಳ್ಳುತ್ತಿದ್ದರು.

ಈ ಸಾಧನೆಗೆ ಜಿಲ್ಲಾಡಳಿತ ಅಭಿನಂದಿಸಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಅವರು ತಿಳಿಸಿದ್ದಾರೆ.

# ವ್ಯಕ್ತಿ ನಾಪತ್ತೆ: ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ನಗರದ ದೇವಿನಗರ ಬಡಾವಣೆಯ ಶಿವಲಿಂಗನಗರದ ಜಂಡಾಕ–ಟ್ಟೆ ಹತ್ತಿರ ವಾರ್ಡ್ ನಂ.33 ರ ನಿವಾಸಿಯಾದ ಭಾಷಾ ಎನ್ನುವ 56 ವರ್ಷದ ವ್ಯಕ್ತಿ ಜು.05 ರಂದು ಕಾಣೆಯಾಗಿದ್ದು, ಈ ಕುರಿತು ಕೌಲ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ವ್ಯಕ್ತಿಯ ಪತೆ–ಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ: ಅಂದಾಜು 5 ಅಡಿ ಎತ್ತರ, ಕೋಲುಮುಖ, ಎಣ್ಣೆಗೆಂಪು ಮೈಬಣ್ಣ, ತೆಳುವಾದ ಮೈಕಟ್ಟು ಹೊಂದಿದ್ದು, ಎಡಕಾಲಿಗೆ ಅಪರೇಶನ್ ಮಾಡಿಸಿದ ಗುರುತು ಇರುತ್ತದೆ. ಕಾಣೆಯಾದ ಸಂದರ್ಭದಲ್ಲಿ ಸಿಮೆಂಟ್ ಬಣ್ಣದ ಅಂಗಿ, ಕಡು ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ.

ಮೇಲ್ಕಂಡ ಚಹರೆ ಗುರುತುಗಳುಳ್ಳ ವ್ಯಕ್ತಿಯ ಬಗ್ಗೆ ಮಾಹಿತಿ ಸಿಕ್ಕಲ್ಲಿ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392–240731, 244145, ಪಿಐ ಮೊ.9480803047, ಪಿಎಸ್‌ಐ ಮೊ.94808203085 ಮತ್ತು ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ.08392–258100 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಲಬುರ್ಗಿ ರಂಗಾಯಣ: ತಂತ್ರಜ್ಞರು ಹಾಗೂ ಕಲಾವಿದರ ನೇಮಕಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ಕಲುಬುರ್ಗಿ ರಂಗಾಯಣದಿಂದ ಒಂದು ವರ್ಷದ ಅವಧಿಗೆ ರಂಗಾಯಣವು ಸಿದ್ಧಪಡಿಸುವ ನಾಟಕಗಳಿಗೆ ಹಾಗೂ ರಂಗಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು 03 ಜನ ತಂತ್ರಜ್ಞರು ಮತ್ತು 12 ಕಲಾವಿದರ ನೇಮಕಕ್ಕೆ ಅರ್ಜಿ ಆಹ್ವಾನಿಲಾಗಿದೆ.

**ತಂತ್ರಜ್ಞರ ನೇಮಕದ ನಿಬಂಧನೆಗಳು:**

ಕಲಬುರ್ಗಿ ರಂಗಾಯಣಕ್ಕೆ ಮೂರು ಜನ ತಂತ್ರಜ್ಞರನ್ನು ಗೌರವ ಸಂಭಾವನೆ ಆಧಾರದಲ್ಲಿ ನೇಮಿಸಿಕೊಳ್ಳಲಾಗುವುದು. ಸಂಗೀತ, ಧ್ವನಿ–ಬೆಳಕು, ರಂಗಸಜ್ಜಿಕೆ, ಪರಿಕರ ವಿಭಾಗದಲ್ಲಿ ಕನಿಷ್ಠ 10 ವರ್ಷಗಳ ರಂಗಾನುಭವ ಹೊಂದಿರಬೇಕು. ಕನ್ನಡ ಭಾಷೆ ಓದು, ಬರೆಯುವ ಮತ್ತು ಮಾತನಾಡುವ ಸಾಮರ್ಥ್ಯ ಹೊಂದಿರಬೇಕು.

ರಂಗಾನುಭವ ಮತ್ತು ಶೈಕ್ಷಣಿಕ ಅರ್ಹತೆಗಳು ಇದ್ದಲ್ಲಿ ಅಂತಹ ತಂತ್ರಜ್ಞರಿಗೆ ಮೊದಲ ಆದ್ಯತೆ ನೀಡಲಾಗುವುದು. ಈ ನೇಮಕವು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, ಪ್ರಸ್ತುತ ನೇಮಕವಾಗುವ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಇರುತ್ತದೆ.

ತಂತ್ರಜ್ಞರ ಸಂಚಿತ ಮಾಸಿಕ ಗೌರವ ಸಂಭಾವನೆ ರೂ.25,000 ನೀಡಲಾಗುವುದು. ಇತರೆ ಯಾವುದೆ ಭತ್ಯೆ ನೀಡುವುದಿಲ್ಲ. ತಂತ್ರಜ್ಞರು ನಿರೀಕ್ಷಿತ ಮಟ್ಟದಲ್ಲಿ ಕೆಲಸ ನಿರ್ವಹಿಸದೇ ಇದ್ದಲ್ಲಿ ಅವರ ನೇಮಕವನ್ನು ಯಾವುದೇ ಸಂದರ್ಭದಲ್ಲಿ ರದ್ದುಗೊಳಿಸುವ ಅಧಿಕಾರ ರಂಗಾಯಣ ಹಾಗೂ ರಂಗಸಮಾಜಕ್ಕೆ ಇರುತ್ತದೆ.

ತಂತ್ರಜ್ಞರ ನೇಮಕದ ಸಂದರ್ಭದಲ್ಲಿ ರೋಸ್ಟರ್ ನಿಯಮಗಳು ಕಡ್ಡಾಯವಾಗಿರುವುದಿಲ್ಲ. ತಂತ್ರಜ್ಞರಿಗೆ ವಯಸ್ಸಿನ ವಯೋಮಿತಿ ಇರುವುದಿಲ್ಲ. ತಂತ್ರಜ್ಞರು ನೇಮಕವಾದ ನಂತರ ಅಗತ್ಯವಿದ್ದಲ್ಲಿ ಪಾತ್ರನಿರ್ವಹಣೆ, ಹಾಗೂ ಇನ್ನಿತರೆ ರಂಗಚಟುವಟಿಕೆಗಳನ್ನು ನಿರ್ವಹಸುವುದು ಮತ್ತು ಕಲಾವಿದರು ತಂತ್ರಜ್ಞ ಕ್ಷೇತ್ರದಲ್ಲಿ ಪರಿಣಿತಿ ಹೊಂದಿದಲ್ಲಿ ಸಂದರ್ಭಾನುಸಾರವಾಗಿ ನಿರ್ವಹಿಸಬೇಕು.

**ಕಲಾವಿದರ ನೇಮಕದ ನಿಬಂಧನೆಗಳು:**

ಕಲಬುರ್ಗಿ ರಂಗಾಯಣವು 12 ಜನ ಕಲಾವಿದರನ್ನು ಗೌರವ ಸಂಭಾವನೆ ಆಧಾರದಲ್ಲಿ ನೇಮಕ ಮಾಡಿಕೊಳ್ಳಲಾಗುವುದು. ಕಲಾವಿದರ ನೇಮಕದಲ್ಲಿ 04 ಜನ ಮಹಿಳೆಯರು ಮತ್ತು 04 ಜನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಕಲಾವಿದರಿಗೆ ಮೀಸಲಿಡಲಾಗಿದೆ. ಈ ನೇಮಕಗಳಲ್ಲಿ ಕನಿಷ್ಠ ಶೇ.50 ಹುದ್ದೆಗಳನ್ನು ಪ್ರಾದೇಶಿಕವಲಯದ ಕಲಾವಿದರಿಗೆ ಮೀಸಲಿಡಲಾಗಿದೆ.

ರಂಗಪರಿಣತಿಯೇ ಪ್ರಥಮ ಅರ್ಹತೆ ಹಾಗೂ ರಂಗಶಿಕ್ಷಣದ ಅರ್ಹತೆಗಳು ಅಪೇಕ್ಷಣೀಯ ಹೊರತು ಕಡ್ಡಾಯವಲ್ಲ. ರಂಗಪ್ರಯೋಗಗಳಲ್ಲಿ ಭಾಗವಹಿಸಿದವರಿಗೆ ಆದ್ಯತೆ ನೀಡಲಾಗುವುದು. ನೇಮಕಗೊಂಡ ಕಲಾವಿದರು ರೆಪರ್ಟರಿಯ ಭಾಗವಾಗಿದ್ದು, ರಂಗಶಿಕ್ಷಣದ ಎಲ್ಲಾ ವಿಭಾಗಗಳಲ್ಲಿ ತರಬೇತಿ ಪಡೆಯುವುದರ ಜೊತೆಗೆ ಅಭಿನಯನ ಜವಾಬ್ದಾರಿಯನ್ನು ನಿಭಾಯಿಸಬೇಕು.

ಪಾರಂಪರಿಕ ಕಲೆಯ ಕುಟುಂಬಗಳಿಂದ ಬಂದ ಕಲಾವಿದರಿಗೆ ಆದ್ಯತೆ ನೀಡಲಾವುದು. ಆಯ್ಕೆಯಾದ ಕಲಾವಿದರಿಗೆ ಮಾಸಿಕ ಸಂಭಾವನೆ ತಿಂಗಳಿಗೆ ರೂ.18,000 ನೀಡಲಾಗುವುದು. ಇತರೆ ಯಾವುದೇ ಭತ್ಯೆಗಳನ್ನು ನೀಡುವುದಿಲ್ಲ. ಊಟ, ವಸತಿ ವ್ಯವಸ್ಥೆಯನ್ನು ಕಲಾವಿದರೇ ನೋಡಿಕೊಳ್ಳಬೇಕು. ಈ ನೇಮಕವು ಸಂಪೂರ್ಣವಾಗಿ ತಾತ್ಕಾಲಿಕವಾಗಿದ್ದು, ಪ್ರಸ್ತುತ ನೇಮಕವಾಗುವ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಇರುತ್ತದೆ.

ಕಲಾವಿದರ ಆಯ್ಕೆಯನ್ನು ಪಾರದರ್ಶಕವಾಗಿ ರಂಗಸಮಾಜವು ಆಯಾ ರಂಗಾಯಣಗಳ ನಿರ್ದೇಶಕರ ಅಧ್ಯಕ್ಷತೆಯಲ್ಲಿ ರಚಿಸುವ ಉಪ ಸಮಿತಿಯು ಆಯ್ಕೆ ಮಾಡುತ್ತದೆ. ತರಬೇತಿಯ ಅವಧಿಯಲ್ಲಿ ಯಾವುದೇ ಕಲಾವಿದರ ನಡವಳಿಕೆ ಅನಪೇಕ್ಷಿತವೆಂದು ಕಂಡು ಬಂದಲ್ಲಿ, ಅಂತಹ ಕಲಾವಿದರನ್ನು ತಕ್ಷಣದಲ್ಲಿ ತೆಗೆದು ಹಾಕುವ ಅಧಿಕಾರ ಕಲಬುರ್ಗಿ ರಂಗಾಯಣ ಹಾಗೂ ರಂಗಸಮಾಜಕ್ಕೆ ಇರುತ್ತದೆ.

ಕಲಾವಿದರು ಮತ್ತು ತಂತ್ರಜ್ಞರ ಆಯ್ಕೆಯು ರಂಗಾಯಣದ ಚಟುವಟಿಕೆಗಳ ಅಗತ್ಯದ ಹಿನ್ನಲೆಯಲ್ಲಿ ಗೌರವ ಸಂಭಾವನೆ ಆಧಾರದಲ್ಲಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ. ಇವು ಸರ್ಕಾರದ ಖಾಯಂ ಹುದ್ದೆಗಳಾಗಿರುವುದಿಲ್ಲ. ಆಯ್ಕೆಯಾದ ಕಲಾವಿದರು, ತಂತ್ರಜ್ಞರು ರಂಗಸಮಾಜವು ವಿಧಿಸುವ ಷರತ್ತುಗಳಿಗೆ ಬದ್ಧರಾಗಿರಬೇಕು.

ಅರ್ಹತೆಯುಳ್ಳ 20 ರಿಂದ 32 ವರ್ಷದೊಳಗಿನ ವಯೋಮಿತಿಯುಳ್ಳ ಆಸಕ್ತ ಕಲಾವಿದರನ್ನು ರಂಗಾಯಣದ ನಿಯಮಾನುಸಾರ ತಾತ್ಕಾಲಿಕವಾಗಿ ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ಮೇಲ್ಕಂಡ ತಂತ್ರಜ್ಞರು ಹಾಗೂ ಕಲಾವಿದರು ಆಯಾ ರಂಗಾಯಣದ ನಿರ್ದೇಶಕರ ಹಾಗೂ ಆಡಳಿತಾಧಿಕಾರಿಯವರ ಆಡಳಿತ ನಿಯಂತ್ರಣಕ್ಕೆ ಒಳಪಟ್ಟಿರುತ್ತಾರೆ. ಈ ಮೇಲ್ಕಂಡ ಷರತ್ತುಗಳಲ್ಲದೇ ಇತರೆ ತೀರ್ಮಾನ ತೆಗೆದುಕೊಳ್ಳುವ ಅಧಿಕಾರ ಆಯ್ಕೆ ಸಮಿತಿಗೆ ಇರುತ್ತದೆ. ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ.

**ಸಂದರ್ಶನದ ವೇಳೆ ಹಾಜರುಪಡಿಸಬೇಕಾದ ದಾಖಲೆ:**

ಆಧಾರ್ ಕಾರ್ಡ್, ಜನ್ಮದಿನಾಂಕ ದೃಢೀಕರಣ ಪತ್ರ, ಎಸ್.ಎಸ್.ಡಿ ಅಥವಾ ಡಿಪ್ಲೋಮಾ ಪ್ರಮಾಣ ಪತ್ರ, ರಂಗಶಿಕ್ಷಣ ಕೇಂದ್ರದ ಅನುಭವ ಪ್ರಮಾಣ ಪತ್ರ, ರಂಗಭೂಮಿ ಅನುಭವ ಕುರಿತ ಸ್ವವಿವರ ಪತ್ರ ಸೇರಿದಂತೆ ಅಗತ್ಯ ದಾಖಲೆಗಳನ್ನು ಹಾಜರುಪಡಿಸಬೇಕು.

ಅರ್ಜಿ ನಮೂನೆಯನ್ನು ರಂಗಾಯಣದ ವೆಬ್‌ಸೈಟ್ www.rangayanaka-laburagi.karnataka.gov.in ನಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದು.

ಆಸಕ್ತ ಕಲಾವಿದರು ನಿಗದಿತ ಅರ್ಜಿ ನಮೂನೆ ಭರ್ತಿ ಮಾಡಿ ಜುಲೈ 28 ಸಂಜೆ 5.30 ಗಂಟೆಯ ಒಳಗೆ ಕಲಬುರ್ಗಿಯ ಶಹಾಬಾದ ವರ್ತುಲ ರಸ್ತೆಯ ಡಾ.ಸಿದ್ದಯ್ಯ ಪುರಾಣಿಕ ಸುವರ್ಣ ಸಾಂಸ್ಕೃತಿಕ ಸಮುಚ್ಛಯದ ರಂಗಾಯಣ ಆವರಣದ ಆಡಳಿತಾಧಿಕಾರಿಗಳ ಕಚೇರಿ ಅಥವಾ ಇ–ಮೇಲ್ ವಿಳಾಸ: rangayanaka-laburgi@gmail.com ಗೆ ಅರ್ಜಿ ಸಲ್ಲಿಸಬಹುದು. ಸಂದರ್ಶನದ ದಿನವನ್ನು ನಂತರದಲ್ಲಿ ತಿಳಿಸಲಾಗುವುದು ಎಂದು ಕಲಬುರ್ಗಿ ರಂಗಾಯಣದ ಆಡಳಿತಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ: ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2025–26 ನೇ ಸಾಲಿಗೆ ಪದ್ಮಶ್ರೇಣಿ ಪ್ರಶಸ್ತಿಗಳಿಗೆ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

ಕಲೆ, ಸಾಹಿತ್ಯ, ಶಿಕ್ಷಣ, ಕ್ರೀಡೆ, ವೈದ್ಯಕೀಯ ಸಮಾಜ ಸೇವೆ, ವಿಜ್ಞಾನ ಮತ್ತು ಇಂಜಿನೀಯರಿಂಗ್, ಸಾರ್ವಜನಿಕ ವ್ಯವಹಾರಗಳು, ನಾಗರೀಕ ಸೇವೆ ವ್ಯಾಪಾರ ಮತ್ತು ಕೈಗಾರಿಕೆ ಇತ್ಯಾದಿ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದೆ. ನಿಗದಿತ ನಮೂನೆಯಲ್ಲಿ ಅರ್ಜಿ ಭರ್ತಿ ಮಾಡಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಅಗತ್ಯ ದಾಖಲೆಗಳೊಂದಿಗೆ ಕಚೇರಿಗೆ ಹಾಗೂ ಸಾಪ್ಟ್ ಪ್ರತಿಯನ್ನು ಇ–ಮೇಲ್ ವಿಳಾಸ ಣಾಠಿಟಿಟಬುಬಿಚಿಟಟಚಿಡಿ@ ಇಚಿಡಿಟಚಿಣಚಿಞಚಿ.ರಿಠಿತ.ಟಿ ನಲ್ಲಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶ ವಾಲ್ಮೀಕಿ ಭವನದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಂಗಮಶೆಟ್ಟಿ ರಂಗಪ್ರಶಸ್ತಿಗೆ ಗೀತಾ ಮೋಂಟಡ್ಕ, ದಯಾನಂದ ಬೀಳಗಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.9 : ಕಳೆದ 12 ವರ್ಷಗಳಿಂದ ಇಲ್ಲಿನ ರಂಗ ಸಂಗಮ ಕಲಾವೇದಿಕೆಯು ಕೊಡಮಾಡುತ್ತಾ ಬಂದಿರುವ ಎಸ್.ಬಿ.ಜಂಗಮಶೆಟ್ಟಿ ರಂಗ ಪ್ರಶಸ್ತಿಗೆ ವೃತ್ತಿ ರಂಗಭೂಮಿಯ ದಯಾನಂದ ಬೀಳಗಿ ಮತ್ತು ಸುಭದ್ರಾದೇವಿ ಜಂಗಮಶೆಟ್ಟಿ ರಂಗಪ್ರಶಸ್ತಿಗೆ ಹವ್ಯಾಸಿ ರಂಗಭೂಮಿಯ ನಟಿ ಗೀತಾ ಮೋಂಟಡ್ಕ ಆಯ್ಕೆಯಾಗಿದ್ದಾರೆ.

ಪ್ರಶಸ್ತಿ ಆಯ್ಕೆಗಾಗಿ ಕರ್ನಾಟಕ ನಾಟಕ ಅಕಾಡೆಮಿಯ ಮಾಜಿ ಅಧ್ಯಕ್ಷ ಎಲ್.ಬಿ.ಶೇಖ್ ಮಾಸ್ತರ್ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಸದಸ್ಯರಾದ ಹಿರಿಯ ರಂಗಕರ್ಮಿ ಎಚ್. ಎಸ್.ಬಸವಪ್ರಭು, ರಂಗಕರ್ಮಿ ಶಾಂತಾಕುಲಕರ್ಣಿ, ಸಾಹಿತಿ ಬಿ.ಎಚ್.ನಿರಗುಡಿ ರಂಗಕರ್ಮಿ ನಾರಾಯಣ ಕುಲಕರ್ಣಿ, ರಂಗ ನಿರ್ದೇಶಕ ವಿಶ್ವರಾಜ ಪಾಟೀಲ್ ರಂಗಾಯಣ ನಿರ್ದೇಶಕಿ ಡಾ.ಸುಜಾತ ಜಂಗಮಶೆಟ್ಟಿ ಹಾಗೂ ರಂಗ ಸಂಗಮ ಕಲಾವೇದಿಕೆಯ ಅಧ್ಯಕ್ಷೆ ಶ್ರೀಮತಿ ಶಿವಗೀತಾ ಬಸವಪ್ರಭು ಇದ್ದರು.

ಜುಲೈ 20 ರಂದು ಪ್ರಶಸ್ತಿ ಪ್ರದಾನ :

ಜುಲೈ 20 ರಂದು ಕಲಬುರಗಿ ನಗರದ ವಿಶ್ವೇಶ್ವರಯ್ಯ ಭವನದಲ್ಲಿ ಆಯೋಜಿಸಲಾಗುವ ಸಮಾರಂಭದಲ್ಲಿ ಪುರಸ್ಕೃತರಿಗೆ ತಲಾ 10 ಸಾವಿರ ರೂ ನಗದು, ಪ್ರಶಸ್ತಿ ಪತ್ರ, ಸ್ಮರಣಿಕೆ ನೀಡಿ ಗೌರವಿಸಲಾಗುವುದು.

ಬಿಸಿಯಾದ ಆಹಾರ ಪದಾರ್ಥ ಸೇವಿಸಿ, ಕುದಿಸಿ ಆರಿಸಿ ಸೋಸಿದ

# ನೀರು ಕುಡಿಯಿರಿ: ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜು.09–ಸಾರ್ವಜನಿಕರು ಬಿಸಿಯಾದ ಆಹಾರ ಪದಾರ್ಥ ಸೇವಿಸಬೇಕು ಮತ್ತು ಕುದಿಸಿ ಆರಿಸಿ ಸೋಸಿದ ನೀರು ಕುಡಿಯುವ ಮೂಲಕ ಸಂಭಾವ್ಯ ವಾಂತಿ–ಭೇದಿ ತಡೆಗೆ ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಅವರು ಹೇಳಿದರು.

ನಗರದ ಮರಿಸ್ವಾಮಿಮಠ ನಗರ ಪ್ರಾಥಮಿಕ ಆರೋಗ್ಯ ಕೇಂದ್ರವ್ಯಾಪ್ತಿಯ ಬಾಪೂಜಿನಗರ ಬಡಾವಣೆಯಲ್ಲಿ ಶಂಕಿತ ವಾಂತಿ–ಭೇದಿ ಪ್ರಕರಣ ವರದಿ ಹಿನ್ನಲೆಯಲ್ಲಿ ಮನೆ ಭೇಟಿ ನೀಡಿ ಜಾಗೃತಿ ಮೂಡಿಸಿ ಸಾರ್ವಜನಿಕರೊಂದಿಗೆ ಮಾತನಾಡಿದರು. ಮನೆ ಮುಂದೆ ಇರುವ ನಳಗಳ ತಗ್ಗಿನಲ್ಲಿ ಸಂಗ್ರಹಿಸಿದ ನೀರು ಪೈಪ್‌ನಲ್ಲಿ ಪುನಃ ಹೋಗುವ ಸಾಧ್ಯತೆ ಇರುವುದರಿಂದ ಮಹಾನಗರ ಪಾಲಿಕೆ ಸರಬರಾಜು ಮಾಡುವ ನೀರನ್ನು ನಳದ ಮೂಲಕ ಸಂಗ್ರಹಿಸುವ ಪೂರ್ವದಲ್ಲಿ ಎರಡು ಮೂರು ನಿಮಿಷ ಹರಿಯಲು ಬಿಡಬೇಕು. ಆಹಾರ ಸುರಕ್ಷಿತವಾಗಿಟ್ಟುಕೊಳ್ಳುವ ಮೂಲಕ ಬಿಸಿಯಾದ ಆಹಾರ ಪದಾರ್ಥ ಸೇವನೆಗೆ ಆದ್ಯತೆ ನೀಡಬೇಕು ಎಂದರು. ಮನೆಯ ಮುಂದೆ ಅಥವಾ ಬಡಾವಣೆಗಳಲ್ಲಿ ನೀರಿನ ಪೈಪ್ ಸೋರಿಕೆಯಾಗುತ್ತಿದ್ದರೆ, ತಕ್ಷಣವೇ ಅರೋಗ್ಯ ಇಲಾಖೆ ಅಥವಾ ಮಹಾನಗರಪಾಲಿಕೆಯ ಗಮನಕ್ಕೆ ತರಬೇಕು ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ ನೇತೃತ್ವದಲ್ಲಿ ಜಿಲ್ಲಾ ಕಾಲರಾ ತಂಡ ನೀರನ್ನು ಪರೀಕ್ಷೆ ಮಾಡುತ್ತಿದ್ದು, ಮನೆಯ ಆವರಣದಲ್ಲಿ ನೀರು ಸಂಗ್ರಹ ಮಾಡಿಕೊಳ್ಳುವ ಸಂಪ್‌ಗಳಿಗೆ ಬಸಿ ನೀರು ಬರದಿರುವಂತೆ ಮುಂಜಾಗೃತೆ ವಹಿಸಬೇಕು ಹಾಗೂ ಊಟದ ಪೂರ್ವ, ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ ಕನಿಷ್ಟ 20 ಸೆಕೆಂಡ್ ತೊಳೆಯಬೇಕು ಎಂದು ಸೂಚಿಸಿದರು. ರಸ್ತೆ ಬದಿ ತೆರದಿಟ್ಟ ಆಹಾರ ಸೇವಿಸದಂತೆ, ಕುಡಿಯುವ ನೀರನ್ನು ಸರಿಯಾಗಿ ಮುಚ್ಚಳ ಮುಚ್ಚುವಂತೆ, ಬಾಧಿತರಿಗೆ ಇಲಾಖೆಯ ಸಿಬ್ಬಂದಿ ಕೊಡುವ ಜೀವಜಲ ಓಆರ್‌ಎಸ್ ದ್ರಾವಣವನ್ನು ಶುದ್ದ ನೀರಿನಲ್ಲಿ ತಯಾರಿಸಿ ಕುಡಿಯುವ ಮೂಲಕ ಇಪ್ಪತ್ನಾಲ್ಕು ಗಂಟೆಯೊಳಗೆ ಬಳಸಬೇಕು. ವಾಂತಿ ಭೇದಿ ಕಂಡು ಬಂದಲ್ಲಿ ಹತ್ತಿರದ ಸರ್ಕಾರಿ ಆಸ್ಪತ್ರೆ ಅಥವಾ ಜಿಲ್ಲಾ ಆಸ್ಪತ್ರೆಯಲ್ಲಿ ಉಚಿತ ಚಿಕಿತ್ಸೆ ಲಭ್ಯವಿದ್ದು, ಪಡೆಯಬೇಕು ಎಂದು ವಿನಂತಿಸಿದರು. ಈ ಸಂದರ್ಭದಲ್ಲಿ ಮರಿಸ್ವಾಮಿ ಮಠನಗರ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಸೌಜನ್ಯ, ಡಾ.ಮಹಮ್ಮದ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ದಾಸಪ್ಪನವರ, ಜಿಲ್ಲಾ ಎಪಡಮಲಾಜಿಸ್ಟ್ ಡಾ.ವಿಶಾಲಾಕ್ಷಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶಿವಕುಮಾರ, ಹೆಚ್‌ಐ ತಿಪ್ಪೇಸ್ವಾಮಿ, ಉಮಾದೇವಿ, ಸವಿತಾ, ಖಾಸಿಂ, ಮಂಜುಳಮ್ಮ, ಹೆಚ್.ಜಿ.ನಾಗರಾಜ, ಬಸವರಾಜ್ ಸೇರಿದಂತೆ ಆಶಾ ಕಾರ್ಯಕರ್ತೆಯರು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

## ನರೇಗಾ ನೌಕರರ ಕಷ್ಟದಲ್ಲಿ ನಾವಿದ್ದೇವೆ ರಾಜ್ಯ ಜಂಟಿ ಕಾರ್ಯದರ್ಶಿ : ವೀರನಗೌಡ ಚನ್ನವೀರನಗೌಡ್ರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ನರೇಗಾ ನೌಕರರ 6 ತಿಂಗಳ ವೇತನ ಪಾವತಿ ಹಾಗೂ ಉಳಿದ ಬೇಡಿಕೆಗಳನ್ನು ಈಡೆರಿಸಬೇಕು. ನೌಕರರ ಕಷ್ಟದಲ್ಲಿ ನಾವು ಇದ್ದೇವೆ. ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘವು ಸಂಪೂರ್ಣ ಬೆಂಬಲವಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಜಂಟಿ ಕಾರ್ಯದರ್ಶಿಗಳಾದ ವೀರನಗೌಡ ಚನ್ನವೀರನಗೌಡ್ರ ಹೇಳಿದರು.

ಕರ್ನಾಟಕ ರಾಜ್ಯ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘ, ಕರ್ನಾಟಕ ರಾಜ್ಯ ಬೇರ್ ಫೂಟ್ ಟೆಕ್ನಿಷಿಯನ್ ಕ್ಷೇಮಾಭಿವೃದ್ಧಿ ಸಂಘ ಮತ್ತು ಗ್ರಾಮ ಕಾಯಕ ಮಿತ್ರರ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು ಯಲಬುರ್ಗಾ/ಕುಕನೂರ ಇವರು ನೌಕರರ ವೇತನ ವಿಳಂಬ, ಆರೋಗ್ಯ ವಿಮೆ, ಭದ್ರತೆ ಸೇರಿ ನ್ಯಾಯಯುತ ವಿವಿಧ ಬೇಡಿಕೆಗಳಿಗಾಗಿ ಸರ್ಕಾರದ ಗಮನ ಸೆಳೆಯಲು ರಾಜ್ಯಾದ್ಯಂತ ಅಸಹಕಾರ ಪ್ರತಿಭಟನೆಯಲ್ಲಿ ಬೆಂಬಲ ವ್ಯಕ್ತಪಡಿಸಿ ಅವರು ಮಾತನಾಡಿದರು.

ಸರ್ಕಾರ ಕೂಡಲೇ ನೌಕರರ ಸಮಸ್ಯೆಗಳ ಪರಿಹಾರವನ್ನು ಶೀಘ್ರದಲ್ಲೆ ಪರಿಹರಿಸಬೇಕು. 6 ತಿಂಗಳ ವೇತನ ನಿಡದಿರುವುದಕ್ಕೆ ಬೇಸರವಾಗಿದೆ. ನಾವು ಯಾವುದೇ ಸರ್ಕಾರದ ವಿರುದ್ದವಾಗಲಿ, ಅಧಿಕಾರಿಗಳ ವಿರುದ್ದವಾಗಲಿ ಪ್ರತಿಭಟನೆಯಿಲ್ಲ. ನಮ್ಮ ಕುಟುಂಬದ ನಿರ್ವಹಣೆಗಾಗಿ ಹೋರಾಟ ಮಾಡುತ್ತಿದ್ದೇವೆ ಎಂದು ಬೆಂಬಲ ನೀಡಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ನೌಕರರ ಸಂಘದ ಕುಕನೂರ ತಾಲೂಕು ನಿರ್ದೇಶಕರಾದ ಸಿದ್ದನಗೌಡ ರಬ್ಬನಗೌಡ್ರ ಮಾತನಾಡಿ, ತಾಳ್ಮೆಯ ಕಟ್ಟೆ ಒಡೆದ ಮೇಲೆ ಅಸಹಕಾರ ಚಳವಳಿ ನಡೆಸಲಾಗುತ್ತದೆ. ಈಗ ನರೇಗಾ ನೌಕರರ 6 ತಿಂಗಳಿಂದ ವೇತನ ಇಲ್ಲದಿರುವುದಕ್ಕೆ ಅವರ ತಾಳ್ಮೆಯ ಕಟ್ಟೆ ಒಡೆದು ಈಗ ರಾಜ್ಯಾದ್ಯಂತ ಪ್ರತಿಭಟನೆ ನಡೆ–ಯುತ್ತಿದೆ. ಅವರಿಗೆ ಪಿಡಿಒರೆಲ್ಲ ಪ್ರತಿಭಟನೆಗೆ ಬೆಂಬಲ ನೀಡಿದ್ದೇವೆ ಎಂದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ನೌಕರರ ಸಂಘದ ಕುಕನೂರ ತಾಲೂಕು ನಿರ್ದೇಶಕರಾದ ರಮೇಶ ತಿಮ್ಮಾರೆಡ್ಡಿ, ಸರ್ಕಾರ ನೌಕರರ ನೋವನ್ನು ಮನಗಂಡು ವೇತನವನ್ನು ಕೊಡಬೇಕು. ನೌಕರರ ಸೇವಾ ಭದ್ರತೆ, ಆರೋಗ್ಯ ವಿಮೆ ಒದಗಿಸಬೇಕೆಂದು ಆಗ್ರಹಿಸಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ನೌಕರರ ಸಂಘದ ಯಲಬುರ್ಗಾ ತಾಲೂಕು ನಿರ್ದೇಶಕರಾದ ಹಜರತ್ ಅಲಿ ಅವರು ಮಾತನಾಡಿ, ನೌಕರರಿಂದ ಗರಿಷ್ಠ ಮಟ್ಟದ ಕೆಲಸ ಪಡೆಯುತ್ತಾರೆ. ಆದರೆ, ವೇತನ ಕೊಡುತ್ತಿಲ್ಲ. ಅದನ್ನು ಕೊಡಲೇಬೇಕು. ಅವರಿಗೆ ನಾವು ನೈತಿಕ ಬೆಂಬಲ ನೀಡಿದ್ದು, ದುಡಿದವರಿಗೆ ವೇತನ ಸಿಗದಿದ್ದರೆ ಕೆಲಸಕ್ಕೆ ನಿರಾಸಕ್ತಿ ಮೂಡುತ್ತದೆ ಎಂದರು.

ತಾ.ಪಂ ಸಹಾಯಕ ನಿರ್ದೇಶಕರಾದ ಫಕೀರಪ್ಪ ಕಟ್ಟಿಮನಿ ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನರೇಗಾ ಹೃದಯ ಭಾಗ ಇದ್ದಂತೆ. ಅಲ್ಲಿ ಕೆಲಸ ಮಾಡುವ ನೌಕರರಿಗೆ ವೇತನ ನೀಡದಿರುವುದು ಬೇಸರದ ಸಂಗತಿಯಾಗಿದೆ. ಈ ಕೂಡಲೇ ವೇತನ ಬಿಡುಗಡೆ ಮಾಡಬೇಕು ಎಂದರು.

ಪಿಡಿಒ ಸಂಘದ ತಾಲೂಕು ಅಧ್ಯಕ್ಷರಾದ ವೀರಭದ್ರಗೌಡ ಮೂಲಿಮನಿ ಮಾತನಾಡಿ, ನೌಕರರು ಗ್ರಾಮೀಣ ಪ್ರದೇಶದ ಕಟ್ಟ ಕಡೆಯ ಜನರಿಗೆ ಕೆಲಸ ಒದಗಿಸಿ ವೇತನ ನೀಡಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ. ಅವರಿಗೆ ಕೂಡಲೇ ವೇತನ ನೀಡಬೇಕು ಎಂದು ಆಗ್ರಹಿಸಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ರಾಜ್ಯ ಆಯುಕ್ತಾಲಯದ ಅಧಿಕಾರಿಗಳ ಜತೆ ಫೋನ್ ಕರೆಯಲ್ಲಿ ಮಾತನಾಡಿ ಈ ವಾರದಲ್ಲಿ ವೇತನ ಮಾಡಲು ತಿಳಿಸಿದರು. ತಾ.ಪಂ ಅಧಿಕಾರಿಗಳಾದ ಬಸವರಾಜ ಹಳ್ಳಿ ಮಾತನಾಡಿದರು.

ಈ ಸಂದರ್ಭದಲ್ಲಿ ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘದ ಯಲಬುರ್ಗಾ/ಕುಕನೂರ ತಾಲೂಕು ಘಟಕದ ಪದಾಧಿಕಾರಿಗಳಾದ ಬಸವರಾಜ ದೊಡ್ಡಮನಿ, ಸಂತೋಷ ನಂದಾಪುರ, ಸುರೇಶ ದೇಸಾಯಿ, ಗಿರಿಶ್, ಶರಣಪ್ಪ ಹಾಳಕೇರಿ, ವಿನಯಾ, ಮಂಜುನಾಥ, ಪ್ರಸಾದ್, ವಿಜಯಕುಮಾರ ಬಂಡಿ, ವಿಜಯಕುಮಾರ ಬಳಿಗಾರ, ಸಂಗಮೇಶ ಜಡಿಮಠ, ಕಿರಣಕುಮಾರ, ವಿಜಯ ರಾಮಶೆಟ್ಟಿ, ನಾಗರಾಜ ಹಳ್ಳಿ, ನೇತ್ರಾವತಿ, ಸಂಜೀವ್ ಕುಮಾರ, ಚೇತನ, ಮಂಜುನಾಥ, ರವಿರಾಜ ಹುಲಿ ಶ್ರೀದೇವಿ ಹಾಗೂ ಸಮುದಾಯ ತಾಂತ್ರಿಕ ಸಹಾಯಕರು, ಗ್ರಾಮ ಕಾಯಕ ಮಿತ್ರರು ಅಸಹಕಾರ ಚಳುವಳಿಯಲ್ಲಿ ಪಾಲ್ಗೊಂಡಿದ್ದರು.

# ಪತ್ನಿಯ ಕೊಲೆ ಮಾಡಿದನಿಗೆ ಜೀವಾವಧಿ ಸಜೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜು.9: ಮದ್ಯಪಾನ ಮಾಡಲು ಹಣ ನೀಡದ ಪತ್ನಿಯ ಮೇಲೆ ಹಲ್ಲೆ ಮಾಡಿ ಕೊಲೆ ಮಾಡಿದ ಆರೋಪ ಸಾಬೀತಾದ್ದರಿಂದ ಜೇವರಗಿ ತಾಲೂಕಿನ ಕುರನಳ್ಳಿ ಗ್ರಾಮದ ಮಹಾಂತಪ್ಪ ನಿಂಗಪ್ಪ ದೊಡ್ಡಮನಿ ಎಂಬಾತನಿಗೆ ನಗರದ 5 ನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಜೀವಾವಧಿ ಶಿಕ್ಷೆ ಹಾಗೂ 50 ಸಾವಿರ ರೂ ದಂಡ ವಿಧಿಸಿ ಆದೇಶ ಹೊರಡಿಸಿದೆ.

ಅಪರಾಧಿ ಮಹಾಂತಪ್ಪ ಮದ್ಯವ್ಯಸನಿಯಾಗಿದ್ದ. ಅಲ್ಲದೇ ದುಡಿಯಲು ಹೋಗುತ್ತಿರಲಿಲ್ಲ. ಹೆಂಡ ಕುಡಿಯಲು ಹಣ ನೀಡುವಂತೆ ಪತ್ನಿ ಸಂಗೀತಾರಿಗೆ ಪೀಡಿಸುತ್ತಿದ್ದ. 2023 ರ ಡಿ 26 ರಂದು ಸಂಜೆ ಕುಡಿಯಲು ಹಣ ನೀಡದ ಕಾರಣಕ್ಕೆ ಪತ್ನಿಯನ್ನು ಕೊಡಲಿಯಿಂದ ಹೊಡೆದು ಕೊಲೆ ಮಾಡಿದ್ದಾನೆ. ಈ ಸಂಬಂಧ ನೆಲೋಗಿ ಠಾಣೆಯಲ್ಲಿ ದೂರು ದಾಖಲಾಗಿ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಾದ, ಪ್ರತಿವಾದ ಆಲಿಸಿದ ನ್ಯಾಯಾಧೀಶ ಮಹ್ಮದ್ ಮುಜೀರ್ ಉಲ್ಲಾ ಅವರು ಅಪರಾಧಿಗೆ ಶಿಕ್ಷೆ ವಿಧಿಸಿದ್ದಾರೆ. ಸರಕಾರದ ಪರವಾಗಿ ಸರಕಾರಿ ಅಭಿಯೋಜಕ ಹಯ್ಯಾಳಪ್ಪ ಎನ್ ಬಳಬಟ್ಟಿ ಅವರು ವಾದ ಮಂಡಿಸಿದ್ದರು.

## ಇನ್ನರ್‌ವೀಲ್ ಕ್ಲಬ್ ಪದಾಧಿಕಾರಿಗಳ ಪದಗ್ರಹಣ

### ಪರಿಸರ ರಕ್ಷಣೆ, ಮಹಿಳಾ ಸಬಲೀಕರಣಕ್ಕೆ ಒತ್ತು-ವೀಣಾ ವಾಘ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9-ಮಹಿಳಾ ಸಬಲೀಕರಣ ಹಾಗೂ ಪರಿಸರ ರಕ್ಷಣೆಗೆ ಹೆಚ್ಚು ಒತ್ತು ನೀಡುವ ಮೂಲಕಜನಪರಕಾರ್ಯಕ್ರಮಗಳನ್ನು ಇನ್ನರ್ ವ್ಹೀಲ್ ಕ್ಲಬ್ ಹಮ್ಮಿಕೊಳ್ಳಲಿದೆ ಎಂದು ನಗರದ ಇನ್ನರ್ ವ್ಹೀಲ್ ಕ್ಲಬ್ ನೂತನ ಅಧ್ಯಕ್ಷೆ ವೀಣಾ ವಾಘ ಹೇಳಿದರು. ಸೋಮವಾರ ವಿದ್ಯಾಗಿರಿ ಸಾಯಿ ಮಂದಿರದ ಸಭಾ ಭವನದಲ್ಲಿ ನಡೆದ ಇನ್ನರ್ ವೀಲ್ ಕ್ಲಬ್ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿ ಮಾತನಾಡಿದ ಅವರು,ನಮ್ಮ ಕ್ಲಬ್ ಕೇವಲ ನಗರಕ್ಕೆ ಸೀಮಿತವಾಗಿರದೆ ಗ್ರಾಮೀಣ ಪ್ರದೇಶಗಳಲ್ಲೂ ಆರೋಗ್ಯ ಶಿಬಿರ, ಮಹಿಳೆಯರಿಗೆ ವಿವಿಧ ತರಬೇತಿ ಸೇರಿ ಅನೇಕ ಸಾಮಾಜಿಕ ಕಾರ್ಯಕ್ರಮ ಆಯೋಜಿಸಲಿದೆ ಎಂದು ಹೇಳಿದರು.

ಇನ್ನರ್ ವ್ಹೀಲ್ ಕ್ಲಬ್ ಕಾರ್ಯದರ್ಶಿಯಾಗಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಖಜಾಂಚಿಯಾಗಿ ಸಂಗೀತಾ ಹಂದ್ರಾಳ, ಐಎಸ್‌ಓ ಸಾಕ್ಷಿ ಶಿಂಧೆ ಹಾಗೂ ಎಡಿಟರ್ ಆಗಿ ಮಧು ಕೊಂಡಿಕೊಪ್ಪ ಅಧಿಕಾರ ಗ್ರಹಣ ಮಾಡಿದರು.

ಮಾಜಿ ದಿಸ್ಟ್ರಿಕ್ಟ್ ಚೇರಮನ್ ಜ್ಯೋತಿ ಕಿರಣ ದಾಸ, ಜಿಲ್ಲಾ ಎಡಿಟರ್ ಗೀತಾ ಗಿರಿಜಾ, ಜಿಲ್ಲಾ ಚೇರಮನ್ ಡಾ.ರೇವತಿ ಹುಯಿಲಗೋಳ,ಶ್ರೀಲತಾ ಹೆರಂಜಲ್ ಮತ್ತಿತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ತಾಲೂಕಿಗೊಬ್ಬ ಶಾಸಕ ಇರಬೇಕು ನಂಜಯ್ಯನಮಠ ಅಭಿಮತ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9-ಪ್ರತಿ ತಾಲೂಕಿಗೆ ಒಬ್ಬ ಶಾಸಕರು ಇರುವ ವ್ಯವಸ್ಥೆಯಾಗಬೇಕು. ಈ ಸಂಬಂಧ ಕಾನೂನು ತಿದ್ದುಪಡಿಯಾಗಬೇಕೆಂದು ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ, ಮಾಜಿ ಶಾಸಕ ಎಸ್.ಜಿ. ನಂಜಯ್ಯನಮಠ ಅಭಿಪ್ರಾಯ ಪಟ್ಟಿದ್ದಾರೆ.

> ಕಾರ್ಯಕರ್ತರು ಅಪೇಕ್ಷೆಪಟ್ಟರೆ ಪಕ್ಷದ ಜಿಲ್ಲಾ ಅಧ್ಯಕ್ಷನಾಗಿ ಮುಂದುವರೆಯುತ್ತೇನೆ. ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರ ಆಯ್ಕೆ ಪ್ರಕ್ರಿಯೆ ಜುಲೈ 15 ರಂದು ನಡೆಯಲಿದ್ದು, ಜಿಲ್ಲೆಯ ಸಚಿವರು, ಶಾಸಕರು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಮಾಜಿ ಸಂಸದರು, ಮಾಜಿ ಶಾಸಕರು, ಮುಂಚೂಣಿ ಘಟಕದ ಅಧ್ಯಕ್ಷರು, ಎಲ್ಲಾ ಕಾರ್ಯಕರ್ತರು ಒಮ್ಮತದಿಂದ ನನ್ನ ಹೆಸರು ಹೇಳಿದರೆ ಅಧ್ಯಕ್ಷನಾಗಿ ಮುಂದುವರೆಯುತ್ತೇನೆ. ಇದರ ಹೊರತಾಗಿ ಬೇರೆಯವರಿಗೆ ಅವಕಾಶ ಕೊಟ್ಟರೆ ಅವರನ್ನು ಬೆಂಬಲಿಸುತ್ತೇನೆ ಎಂದು ನಂಜಯ್ಯನಮಠ ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2028ರಲ್ಲಿ ಕ್ಷೇತ್ರಗಳ ಪುನರ್ ವಿಂಗಡಣೆಯಾಗುವ ವದಂತಿಗಳಿದ್ದು ಕ್ಷೇತ್ರಗಳು, ಶಾಸಕರು, ಸಂಸದರ ಸಂಖ್ಯೆ ಹೆಚ್ಚಾಗಬಹುದು ಎಂದು ಹೇಳಿದರು. ರಾಜ್ಯದಲ್ಲಿ ಸದ್ಯ ಒಬ್ಬೊಬ್ಬ ಶಾಸಕರಿಗೆ 3 ತಾಲೂಕುಗಳ ಗ್ರಾಮಗಳು ಬರುತ್ತವೆ. ಇದರಿಂದ ಆಡಳಿತ ನಡೆಸುವುದು ಕಷ್ಟದಾಯಕವಾಗಿದೆ. ಕೆಡಿಪಿ ಸಭೆಗಳು ಹಾಗೂ ಅಧಿಕಾರಿಗಳೊಂದಿಗೆ ಸಂಪರ್ಕ ಸಾಧಿಸಿ ಆಡಳಿತ ನಡೆಸುವುದು ಕಷ್ಟದ ಕೆಲಸವಾಗಿದೆ. ರಾಜ್ಯದಲ್ಲಿ 236 ತಾಲೂಕು ಗಳಿದ್ದು, ಅದರಲ್ಲಿ 224 ಕ್ಷೇತ್ರಗಳಿವೆ. ಈ ಬಾರಿ ಜನಸಂಖ್ಯೆ ಹೆಚ್ಚಾಗುವುದರಿಂದ 224 ಕ್ಷೇತ್ರಗಳ ಬದಲಾಗಿ 236 ಮತಕ್ಷೇತ್ರಕ್ಕೆ ವಿಸ್ತರಿಸಿ ತಾಲೂಕಿಗೊಬ್ಬ ಶಾಸಕರನ್ನು ಮಾಡುವ ಅವಶ್ಯಕತೆಯಿದೆ ಎಂದು ನಂಜಯ್ಯನಮಠ ಹೇಳಿದರು.

ಬಾಗಲಕೋಟೆ ಜಿಲ್ಲೆಯಲ್ಲಿ ಬೀಳಗಿ ಮತಕ್ಷೇತ್ರಕ್ಕೆ ಬದಾಮಿ ತಾಲೂಕಿನ 41 ಗ್ರಾಮಗಳು, ಬಾಗಲಕೋಟೆ ಮತಕ್ಷೇತ್ರಕ್ಕೆ ಹುನಗುಂದ ತಾಲೂಕಿನ 13 ಗ್ರಾಮಗಳು ಒಳಪಡುತ್ತವೆ. ಕ್ಷೇತ್ರಗಳ ಪುನರ್ ವಿಂಗಡಣೆ ಕಾಲಕ್ಕೆ ಒಂದು ವಿಧಾಸಭಾ ಕ್ಷೇತ್ರಕ್ಕೆ ಒಂದು ತಾಲೂಕು ಒಬ್ಬ ಶಾಸಕರಂತೆ ಇರಬೇಕೆಂದು ರಾಷ್ಟ್ರಪತಿಗಳಿಗೆ ಜಿಲ್ಲಾಧಿಕಾರಿಗಳ ಮುಖಾಂತರ ಮನವಿಯನ್ನು ಸಲ್ಲಿಸಲಾಗುವುದು. ನಂತರ ಮುಖ್ಯಮಂತ್ರಿಗಳು, ಸಚಿವರು, ಶಾಸಕರಿಗೆ ಮನವಿಯನ್ನು ಸಲ್ಲಿಕೆ ಮಾಡಲಾಗುವುದು ಎಂದರು.

ಸುದ್ದಿಗೋಷ್ಠಿಯಲ್ಲಿ ಮುಖಂಡರಾದ ನಾಗರಾಜ್ ಹದ್ಲಿ, ಚಂದ್ರಶೇಖರ ರಾಠೋಡ, ಶ್ರೀನಿವಾಸ ಬಳ್ಳಾರಿ, ನಗರಸಭೆ ಸದಸ್ಯೆ ಮಂಜುಳಾ ಭೂಸಾರೆ ಇದ್ದರು.

## ಬೇಡಿಕೆಗಳಿಗೆ ಆಗ್ರಹಿಸಿ ಔಷಧಿ ಮಾರಾಟ ಪ್ರತಿನಿಧಿಗಳ ಪ್ರತಿಭಟನೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9-ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಔಷಧಿ ಮಾರಾಟ ಪ್ರತಿನಿಧಿಗಳ ಜಿಲ್ಲಾ ಘಟಕ ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಎದುರು ಪ್ರತಿಭಟನೆ ನಡೆಸಿತು. 4 ಕಾರ್ಮಿಕ ಸಂಹಿತೆಗಳನ್ನು ರದ್ದು ಮಾಡಬೇಕು, ಎಸ್‌ಪಿಈ ಕಾಯ್ದೆ (1976)ಯನ್ನು ರಕ್ಷಿಸ ಬೇಕು. ಮಾರಾಟ ಪ್ರತಿನಿಧಿಗಳಿಗೆ ಶಾಸನಬದ್ಧ ಕೆಲಸದ ನಿಯಮಾವಳಿಗಳನ್ನು ರೂಪಿಸಬೇಕು. ಸಾರ್ವಜನಿಕ ಆಸ್ಪತ್ರೆಯಲ್ಲಿ ಮತ್ತು ಸಂಸ್ಥೆಗಳಲ್ಲಿ ವೈದ್ಯಕೀಯ ಪ್ರತಿನಿಧಿಗಳ ಪ್ರವೇಶದ ಮೇಲೆ ಹೇರಿರುವ ನಿರ್ಬಂಧನೆಗಳನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು. ಪ್ರತಿನಿಧಿಗಳು ಕೆಲಸ ನಿರ್ವಹಿಸುವ ಹಕ್ಕನ್ನು ಸಮರ್ಥಿಸಬೇಕು. ಔಷಧಿಗಳನ್ನು ಒಳಗೊಂಡು ಅಗತ್ಯ ವಸ್ತುಗಳ ಮೇಲಿನ ಬೆಲೆಗಳನ್ನು ನಿಯಂತ್ರಿಸಬೇಕು ಮತ್ತು ಜೀವರಕ್ಷಕ ಔಷಧಿಗಳ ಮೇಲಿನ ಜಿಎಸ್‌ಟಿಯನ್ನು ತೆಗೆದು ಹಾಕಬೇಕು. ಔಷಧ ತಯಾರಿಕೆಯಲ್ಲಿ ದೇಶ ಸ್ವಾವಲಂಬನೆಯನ್ನು ಸಾಧಿಸಲು ಖಾಸಗೀಕರಣ ನಿಲ್ಲಿಸುವುದು ಅಲ್ಲದೆ ಸಾರ್ವಜನಿಕ ಔಷಧ ತಯಾರಿಕಾ ಸಂಸ್ಥೆಗಳನ್ನು ಜೀರ್ಣೋದ್ಧಾರ ಗೊಳಿಸಬೇಕು ಎಂಬುದು ಸೇರಿ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕೆಂದು ಆಗ್ರಹಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಪ್ರತಿನಿಧಿಗಳ ಸಂಘಟನೆಯ ರಾಜ್ಯ ಕಾರ್ಯದರ್ಶಿ ವಿನಾಯಕ ದೇಸಾಯಿ, ಜಿಲ್ಲಾ ಅಧ್ಯಕ್ಷ ಪ್ರಸನ್ನ ಮಿರ್ಜಿ, ಕಾರ್ಯದರ್ಶಿ ಸುರೇಶ ಹಳ್ಳಿ, ಸಹಕಾರ್ಯದರ್ಶಿ ಸತೀಶ ಮುಷ್ಠಿಗೇರಿ, ಸಂಗಮೇಶ ಅಬ್ದುಲ್‌ಪುರ, ಅರವಿಂದ ಸುಲಾಖೆ, ಶ್ರೀಕಾಂತ್ ಪಾಟೀಲ, ರಾಘವೇಂದ್ರ ಗುಮಾಸ್ತೆ, ಶ್ರೀಕಾಂತ ದಳವಾಯಿ, ನವೀನ ಹುಂಡೇಕಾರ, ಪ್ರಶಾಂತ್ ಪ್ರತಿಭಟನೆಯಲ್ಲಿದ್ದರು.

## ಮಹಾರಾಜನವರಿಗೆ ಕಾಂಗ್ರೆಸ್ ಅಧ್ಯಕ್ಷ ಸ್ಥಾನ ನೀಡಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9-ಕಾಂಗ್ರೆಸ್ ಪಕ್ಷದ ಜಿಲ್ಲಾ ಅಧ್ಯಕ್ಷ ಸ್ಥಾನದ ಅವಕಾಶವನ್ನು ಪರಿಶಿಷ್ಟರಿಗೆ ನೀಡಬೇಕು. ಪರಶುರಾಮ ಮಹಾರಾಜನವರ ಜಿಲ್ಲಾಧ್ಯಕ್ಷ ಸ್ಥಾನಕ್ಕೆ ಸೂಕ್ತ ವ್ಯಕ್ತಿಯಾಗಿದ್ದು ಅವರಿಗೆ ಈ ಹುದ್ದೆ ನೀಡುವಂತೆ ಬ್ಲಾಕ್ ಕಾಂಗ್ರೆಸ್ ನಗರ ಘಟಕದ ಪ್ರಧಾನ ಕಾರ್ಯದರ್ಶಿ ಮಹ್ಮದ ಮನಿಯಾರ ಮತ್ತಿತರರು ಮನವಿ ಮಾಡಿದ್ದಾರೆ.

ಕರ್ನಾಟಕ ಕಾಂಗ್ರೆಸ್ ಪಕ್ಷ ರಾಜ್ಯದ ಎಲ್ಲಾ ಜಿಲ್ಲಾ ಘಟಕಗಳ ಅಧ್ಯಕ್ಷರುಗಳ ಬದಲಾವಣೆಗಾಗಿ ವೀಕ್ಷಕರುಗಳ ಸಮಿತಿ ನೇಮಕ ಮಾಡಿದೆ. ಜಿಲ್ಲೆಯ ಏಳು ಮತಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಸಂಖ್ಯೆ ಅತಿ ಹೆಚ್ಚು ಸಂಖ್ಯೆಯಲ್ಲಿದೆ. ಸ್ವಾತಂತ್ರ್ಯ ಬಂದಾಗಿನಿಂದಲೂ ಇವರು ಕಾಂಗ್ರೆಸ್ ಪಕ್ಷದ ಗಟ್ಟಿ ಮತದಾರರಾಗಿದ್ದಾರೆ.ಆದರೆ ಪಕ್ಷದ ಮುಖ್ಯ ಹುದ್ದೆಗಳಲ್ಲಿ ಅವಕಾಶ ಸಿಕ್ಕಿಲ್ಲ. ಅಖಂಡ ಬಿಜಾಪುರ ಜಿಲ್ಲೆಯಿಂದ ಬಾಗಲಕೋಟೆ ಜಿಲ್ಲೆ ಪ್ರತ್ಯೇಕವಾದಾಗಿನಿಂದ ಪಕ್ಷದ ಪ್ರಮುಖ ಹುದ್ದೆಗಳಲ್ಲಿ ಎಲ್ಲಾ ಜಾತಿಯವರಿಗೆ ಅವಕಾಶ ನೀಡಲಾಗಿದ್ದು, ಪರಿಶಿಷ್ಟರಿಗೆ ಈ ಬಾರಿ ಅವಕಾಶ ನೀಡಬೇಕೆಂದು ಪತ್ರಿಕಾ ಹೇಳಿಕೆಯ ಮೂಲಕ ಮನವಿ ಮಾಡಿದ್ದಾರೆ.

ಪರಶುರಾಮ ಮಹಾರಾಜನವರ ಸಾಮಾಜಿಕ ಸಂಘಟನೆ,ರಾಜಕೀಯ ಸಂಘಟನೆಗಳನ್ನು ಕಟ್ಟಿ ಬೆಳೆಸಿದ ಅನುಭವವಿದೆ. ಉತ್ತಮ ವಾಗ್ಮಿಗಳು, ಪ್ರಗತಿಪರ ಚಿಂತಕರಾಗಿದ್ದಾರೆ. ಕಳೆದ ವಿಧಾನಸಭೆ ಮತ್ತು ಲೋಕಸಭೆ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷದ ಪರವಾಗಿ ಪ್ರಚಾರ ಮಾಡಿ ಪಕ್ಷಕ್ಕೆ ದೊಡ್ಡ ಮಟ್ಟದ ಓಟುಗಳನ್ನು ಕ್ರೂಢೀಕರಿಸಿದ್ದಾರೆ. ದಲಿತ, ಹಿಂದುಳಿದ, ಅಲ್ಪಸಂಖ್ಯಾತ ಮತ್ತು ಮುಂದುವರಿದ ಸಮುದಾಯಗಳ ಜೊತೆಗೆ ಉತ್ತಮ ಒಡನಾಟ ಹೊಂದಿದವರಾಗಿದ್ದಾರೆ.

ಹೀಗಾಗಿ ಪರಶುರಾಮ ಮಹಾರಾಜನವರನ್ನು ಬಾಗಲಕೋಟೆ ಜಿಲ್ಲೆಯ ಜಿಲ್ಲಾ ಘಟಕದ ಅಧ್ಯಕ್ಷರನ್ನಾಗಿ ಮಾಡಿದರೆ ಪಕ್ಷಕ್ಕೆ ಮುಂದಿನ ದಿನಗಳಲ್ಲಿ ಲಾಭವಾಗಲಿದೆ ಎಂದು ಮಹಮ್ಮದ ಮನಿಯಾರ, ಸುನೀಲ ಬಂಡಿ, ಸಾಧಿಕ ಬೇಪಾರಿ, ರಾಘವೇಂದ್ರ ಮುಳಗುಂದ, ಹಣಮಂತ ಚಲವಾದಿ, ವಾಸುದೇವ ಮಾದರ, ವೆಂಕಟೇಶ ವಡ್ಡರ, ಗೌರೀಶ ಮಜ್ಜಗಿ, ಆಶೀಫ ಮಾಲದಾರ, ಗಂಗಾಧರ ಪೂಜಾರಿ ಪಕ್ಷದ ವರಿಷ್ಠರಿಗೆ ಮನವಿ ಮಾಡಿದ್ದಾರೆ

### ಡಾ.ಅಂಬೇಡ್ಕರ, ಹೇಮರಡ್ಡಿ ಮಲ್ಲಮ್ಮ ಭಾವಚಿತ್ರಕ್ಕೆ

## ಅವಮಾನ-ತಪ್ಪಿತಸ್ಥರ ವಿರುದ್ಧ ಕ್ರಮಕ್ಕೆ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9-ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರ ಕಚೇರಿಯಲ್ಲಿ ಡಾ. ಬಾಬಾಸಾಹೇಬ ಅಂಬೇಡ್ಕರ್ ಹಾಗೂ ಹೇಮರಡ್ಡಿ ಮಲ್ಲಮ್ಮನವರ ಭಾವಚಿತ್ರಗಳನ್ನು ಕಸದ ಬುಟ್ಟಿಗೆ ಹಾಕಿ ಅವಮಾನಿಸಿರುವ ಘಟನೆಗೆ ಕಾರಣರಾಗಿರುವ ಅಧಿಕಾರಿಗಳನ್ನು ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ನಾಗರಿಕ ರಕ್ಷಣಾ ಸಮಿತಿ ಹಾಗೂ ರಡ್ಡಿ ಸಮಾಜ ಬಾಂಧವರು ಬುಧವಾರ ಪ್ರತಿಭಟನೆ ನಡೆಸಿದರು. ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆ ನಡೆಸಿದ ಸಮಿತಿ ಕಾರ್ಯಕರ್ತರು ಹಾಗೂ ರಡ್ಡಿ ಸಮಾಜದ ಯುವಕರು ಈ ಸಂಬಂಧ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮಕ್ಕೆ ಒತ್ತಾಯಿಸಿದರು. ಜೂನ್ 6 ರಂದು ಜಿಲ್ಲಾಡಳಿತ ಭವನದಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಛೇರಿಯಲ್ಲಿ ಶೌಚಾಲಯದ ಎದುರಿನ ಕಸದ ಡಬ್ಬಿಯಲ್ಲಿ ಅಂಬೇಡ್ಕರ್ ಹಾಗೂ ಮಲ್ಲಮ್ಮನವರ ಭಾವಚಿತ್ರಗಳು ಬಿದ್ದಿರುವುದು ಕಂಡು ಬಂದಿದ್ದು, ಇದು ರಾಷ್ಟ್ರನಾಯಕ ಹಾಗೂ ಮಹಾಸಾಧ್ವಿ ಮಲ್ಲಮ್ಮನಿಗೆ ಆವಮಾನದ ಸಂಗತಿ. ಇಂತಹ ಮಹಾನ್ ಚಿಂತಕ ಹಾಗೂ ದೇವತಾ ಸ್ವರೂಪಿನಿಗೆ ಅವಮಾನ ಮಾಡಿರುವುದು ನಾಗರಿಕ ಸಮಾಜ ತಲೆ ತಗ್ಗಿಸುವಂತಹದ್ದು. ಕಾರಣ ಇದಕ್ಕೆ ಕಾರಣರಾದವರನ್ನು ಅಮಾನತ್ತುಗೊಳಿಸಿ ಕ್ರಮಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಪ್ರತಿಭಟನೆಯಲ್ಲಿ ನಾಗರಿಕ ರಕ್ಷಣಾ ಸಮಾಜದ ಶಿವರಾಜ ಬೆಣ್ಣೂರ, ಪ್ರಶಾಂತ ಪಾಟೀಲ, ರಾಹುಲ್, ಪೂಜಾ, ಹನಮಂತ ದೊಡಮನಿ, ರಮೇಶ ಮಾದರ ಹಾಗೂ ರಾಷ್ಟ್ರಕೂಟ ರಡ್ಡಿ ಪರಿವಾರದ ಪ್ರಮುಖರು ಪಾಲ್ಗೊಂಡಿದ್ದರು.

## ಜು.10 ರಂದು ಹಡಪದ ಅಪ್ಪಣ ಜಯಂತಿ ಕಾರ್ಯಕ್ರಮ

ಬಳ್ಳಾರಿ,ಜು.09-ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ಶಿವಶರಣ ಹಡಪದ ಅಪ್ಪಣ ಜಯಂತಿ ಕಾರ್ಯಕ್ರಮವನ್ನು ಜು.10 ರಂದು ಬೆಳಿಗ್ಗೆ 11.30 ಗಂಟೆಗೆ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರದಲ್ಲಿ ಆಯೋಜಿಸಲಾಗಿದೆ. ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಬಳ್ಳಾರಿ ಉಸ್ತುವಾರಿ ಸಚಿವ ಬಿ.ಝಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರು ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ಶಾಸಕ ಜೆ.ಎನ್ ಗಣೇಶ್, ಸಂಸದರಾದ ಈ.ತುಕಾರಾಂ, ಕೆ.ರಾಜಶೇಖರ ಬಸವರಾಜ ಹಿಟ್ನಾಳ್, ಡಾ.ಸೈಯದ್ ನಾಸೀರ್ ಹುಸೇನ್, ಶಾಸಕ ಬಿ.ನಾಗೇಂದ್ರ, ವಿಧಾನಪರಿಷತ್ ಶಾಸಕ ಡಾ.ಚಂದ್ರಶೇಖರ್ ಬಿ.ಪಾಟೀಲ, ಶಾಸಕರಾದ ಬಿ.ಎಂ.ನಾಗರಾಜ, ಈ.ಅನ್ನಪೂರ್ಣ, ವಿಧಾನಪರಿಷತ್ ಶಾಸಕ ಶಶೀಲ್ ನಮೋಶಿ, ವೈ.ಎಂ.ಸತೀಶ್, ಡಾ.ಬಾಬು ಜಗಜೀವನ್‌ರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮಹಾಪೌರರಾದ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್. ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ, ಜಿಲ್ಲಾ ಹಡಪದ ಅಪ್ಪಣ ಸೇವಾ ಸಮಿತಿಯ ಅಧ್ಯಕ್ಷ ಹೆಚ್.ರುದ್ರಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಬಳ್ಳಾರಿಯ ನಿವೃತ್ತಿ ಮುಖ್ಯಗುರುಗಳಾದ ಸಿ.ಕೊಟ್ರಪ್ಪ ಅವರು ಜಯಂತಿ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸ ನೀಡುವರು. ಕಾರ್ಯಕ್ರಮದಲ್ಲಿ ಸಿರುಗುಪ್ಪದ ವಿರೇಶ ದಳವಾಯಿ ಅವರಿಂದ ವಚನ ಸಂಗೀತ ಇರಲಿದೆ.

***ಮೆರವಣಿಗೆ:**

ಜಯಂತಿ ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 09.30 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಿಂದ ಮೆರವಣಿಗೆ ನಡೆಯಲಿದ್ದು, ಗಡಿಗಿ ಚೆನ್ನಪ್ಪ ವೃತ್ತ-ಬೆಂಗಳೂರು ರಸ್ತೆ-ಹಳೇ ಬ್ರೂಸ್‌ಪೇಟೆ ಪೊಲೀಸ್ ಠಾಣೆ ರಸ್ತೆ-ತೇರು ಬೀದಿ-ಹೆಚ್.ಆರ್. ಗವಿಯಪ್ಪ ವೃತ್ತ-ಡಾ.ಜೋಳದರಾಶಿ ದೊಡ್ಡನಗೌಡ ರಂಗಮಂದಿರ ದವರೆಗೆ ನಡೆಯಲಿದೆ. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ.ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರೀಸ್ ಸುಮೈರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

## ಗ್ರಾಮೀಣ ರಸ್ತೆಗಳ ಸುಧಾರಣೆಗೆ ಒತ್ತು ಕೊಡಿ-ಶಾಸಕ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9-ಹಿಂದುಳಿದ ತಾಲೂಕುಗಳ ಸಮಗ್ರ ಅಭಿವೃದ್ಧಿಗೆ ಗ್ರಾಮೀಣ ರಸ್ತೆಗಳ ಸುಧಾರಣೆ ಮೊದಲ ಹೆಜ್ಜೆಯಾಗಬೇಕು. ಇದರಿಂದ ಕೃಷಿ ಅವಲಂಬಿತ ಜನತೆ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಜೊತೆಗೆ ರೈತರಿಗೆ ಅನುಕೂಲವಾಗುವಂತೆ ನೀರಾವರಿ ಯೋಜನೆಗಳಿಗೆ ಒತ್ತು ಕೊಟ್ಟು ಮತ್ತಷ್ಟು ಬಲಪಡಿಸಬೇಕು ಎಂದು ಹಟ್ಟಿ ಚಿನ್ನದ ಗಣಿ ನಿಗಮದ ಅಧ್ಯಕ್ಷ ಹಾಗೂ ಬೀಳಗಿ ಮತಕ್ಷೇತ್ರದ ಶಾಸಕ ಜೆ.ಟಿ. ಪಾಟೀಲ ಹೇಳಿದರು.

ಜಿಲ್ಲಾ ಪಂಚಾಯತಿ ಸಭಾಭವನದಲ್ಲಿ ಜರುಗಿದ ಡಾ.ಡಿ.ಎಂ.ನಂಜುಂಡಪ್ಪ ವರದಿಯ ಪ್ರಾದೇಶಿಕ ಅಸಮತೋಲನ ನಿವಾರಣಾ ಉನ್ನತಾಧಿಕಾರ ಸಮಿತಿಯ ಬಾಗಲಕೋಟೆ ಜಿಲ್ಲಾಮಟ್ಟದ ಸಮಾಲೋಚನಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹಿಂದುಳಿದ ತಾಲೂಕುಗಳ ಅಭಿವೃದ್ಧಿಗೆ ಹಿಂದುಳಿದ, ಅತಿ ಹಿಂದುಳಿದ ಹಾಗೂ ಅತ್ಯಂತ ಹಿಂದುಳಿದ ತಾಲೂಕುಗಳೆಂದು ಗುರುತಿಸುವುದರೊಂದಿಗೆ ಹಂಚಿಕೆ ಕೂಡ ಆಗಬೇಕು. ಮುಖ್ಯವಾಗಿ ಆ ತಾಲೂಕಿನ ಶಿಕ್ಷಣ ಕ್ಷೇತ್ರವನ್ನು ಗುಣಮಟ್ಟದಿಂದ ಕೂಡಿರುವಂತೆ ಅಭಿವೃದ್ಧಿಪಡಿಸಬೇಕು. ಜಿಲ್ಲೆಯಲ್ಲಿರುವ ತೋಟಗಾರಿಕೆ ವಿಶ್ವವಿದ್ಯಾಲಯವು ಕೇವಲ ಪದವೀಧರರನ್ನು ನೀಡುವ ಕೆಲಸವನ್ನಷ್ಟೇ ಮಾಡದೇ ರೈತರಿಗೆ ಬೆಳೆಗಳ ಕುರಿತು ಸಂಪೂರ್ಣ ಮಾಹಿತಿಯನ್ನೂ ಹಾಗೂ ತಿಳುವಳಿಕೆಯನ್ನು ನೀಡಬೇಕು ಎಂದು ಸಲಹೆ ನೀಡಿದರು.

ಬದಾಮಿ ಕ್ಷೇತ್ರದ ಶಾಸಕರಾದ ಬಿ.ಬಿ. ಚಿಮ್ಮನಕಟ್ಟಿ ಮಾತನಾಡಿ, ಒಂದು ತಾಲೂಕಿನಲ್ಲಿ ಲಭ್ಯವಿರುವ ಮಾನವ ಸಂಪನ್ಮೂಲ ಹಾಗೂ ನೈಸರ್ಗಿಕ ಸಂಪತ್ತನ್ನು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಮೀಸಲು ನೀಡಿದ ಮಾದರಿಯಂತೆ ಹಿಂದುಳಿದ ತಾಲೂಕುಗಳಿಗೂ ಮೀಸಲು ವ್ಯವಸ್ಥೆ ತರಲು ಸರ್ಕಾರ ಗಮನ ಹರಿಸಬೇಕು ಎಂದು ಅಭಿಪ್ರಾಯಪಟ್ಟರು.

ಕೇರಳ ಮಾದರಿಯಲ್ಲಿ ಜಿಲ್ಲೆಯ ಪ್ರವಾಸೋದ್ಯಮವನ್ನು ಬೆಳೆಸಿದರೆ ಬದಾಮಿ ಕ್ಷೇತ್ರಕ್ಕೆ ಹೆಚ್ಚಿನ ಅನುಕೂಲವಾಗಲಿದೆ. ಜೊತೆಗೆ ಗ್ರಾಮೀಣ ಪ್ರದೇಶದ ಜನತೆಗೆ ಡಿಜಿಟಲ್ ಮಾರುಕಟ್ಟೆ ಬಗ್ಗೆ ತರಬೇತಿ ನೀಡಬೇಕು. ಚೆಕ್ ಡ್ಯಾಮ್‌ಗಳ ನಿರ್ಮಾಣದ ಮೂಲಕ ನೀರಾವರಿ ಸುಧಾರಿಸಿದರೆ ರೈತರಿಗೆ ದೊಡ್ಡ ಮಟ್ಟದ ಸೌಲಭ್ಯ ಒದಗಿಸಬಹುದಾಗಿದೆ ಎಂದು ಅವರು ಹೇಳಿದರು.

ಪ್ರಾದೇಶಿಕ ಅಸಮತೋಲನ ನಿವಾರಣಾ ಉನ್ನತಾಧಿಕಾರ ಸಮಿತಿ ಸದಸ್ಯ ಕಾರ್ಯದರ್ಶಿ ಡಾ.ಎಂ. ವಿಶಾಲ ಪ್ರಮುಖವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಶಿಕ್ಷಣ, ತೋಟಗಾರಿಕೆ ಮತ್ತು ಮೀನುಗಾರಿಕೆ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ ಮಾಹಿತಿ ಪಡೆದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ಜಿಲ್ಲಾ ಅರಣ್ಯಾಧಿಕಾರಿ ರುಥ್ರೇನ್, ಸಮಿತಿಯ ಸದಸ್ಯೆ ಸಂಗೀತಾ ಕಟ್ಟಿಮನಿ ಹಾಗೂ ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ಉಪನ್ಯಾಸಕ ಪ್ರೊ. ಸಿದ್ದಪ್ಪ ಟಿ ಸೇರಿದಂತೆ ಇತರರು ಇದ್ದರು.

## ರೈತರ ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಿ : ಡಿಸಿ ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9-ಹೊಸ ಹೊಸ ತಂತ್ರಜ್ಞಾನ ಹಾಗೂ ವಿವಿಧ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಮೂಲಕ ರೈತರ ಆದಾಯ ಹೆಚ್ಚಿಸುವತ್ತ ಆಸಕ್ತಿ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಸಂಜೆ ಜರುಗಿದ ಕೃಷಿ ಮತ್ತು ಕೃಷಿ ಸಂಬಂಧಿತ ವಲಯಗಳಿಗೆ ಐದು ವರ್ಷಗಳ ಸಮಗ್ರ ಕ್ರೀಯಾ ಯೋಜನೆ ತಯಾರಿಕೆ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕೃಷ್ಣ, ಮಲಪ್ರಭಾ ಹಾಗೂ ಘಟಪ್ರಭಾ ನದಿಗಳು ಹರಿಯುವದರಿಂದ ಮೀನುಗಾರಿಕೆ ಕೂಡ ಉತ್ತಮ ಆದಾಯ ನೀಡುವಂತಹ ಕೃಷಿ ಚಟುವಟಿಕೆಯಾಗಿದೆ. ಸಮುದ್ರ ಮೀನಿಗೆ ಬೇಡಿಕೆ ಇರುವಂತೆ ಸಿಹಿ ನೀರಿನ ಮೀನಿಗೆ ಕೂಡ ಬೇಡಿಕೆ ಇದೆ. ಈ ನಿಟ್ಟಿನಲ್ಲಿ ಜಿಲ್ಲೆಯ ರೈತರಲ್ಲಿ ಮೀನುಗಾರಿಕೆ ಬಗ್ಗೆ ಜಾಗೃತಿ ಮೂಡಿಸಬೇಕು ಎಂದರು.

ಕುರಿ ಮೇಕೆ ಸಾಕುವದರೊಂದಿಗೆ ಪಶು ಸಂಗೋಪನೆಯಲ್ಲಿ ತೊಡಗಿಸಿಕೊಂಡಾಗ ಸಣ್ಣ ರೈತರಿಗೆ ಆರ್ಥಿಕ ಸಹಾಯ ದೊರೆಯುತ್ತದೆ. ಹೈನುಗಾರಿಕೆಯು ಒಂದು ಉದ್ಯಮವಾಗಿ ಬೆಳೆಯುತ್ತದೆ ಎಂಬುದನ್ನು ರೈತ ಸಮುದಾಯದಲ್ಲಿ ಅರಿವು ಮೂಡಿಸಿದಾಗ ಸಹಜವಾಗಿ ರೈತರ ಆದಾಯ ಹೆಚ್ಚಾಗುತ್ತದೆ. ಪ್ರತಿ ಸಾರಿ ಸಾಂಪ್ರದಾಯಿಕ ಬೆಳೆಗಳನ್ನು ಬೆಳೆಯುವ ಬದಲು ತೋಟಗಾರಿಕೆ ಮತ್ತು ಇತರೆ ಹೆಚ್ಚಿನ ಮೌಲ್ಯದ ಬೆಳೆಗಳನ್ನು ಬೆಳೆಸಲು ಉತ್ತೇಜಿಸಬೇಕು ಅದೇ ರೀತಿ ಅವರು ಬೆಳೆದ ಬೆಳೆಗಳಿಗೆ ಮಾರುಕಟ್ಟೆ ಒದಗಿಸುವ ಕಾರ್ಯ ಮಾಡಬೇಕು ಎಂದು ಅವರು ಸೂಚಿಸಿದರು.

ಸಾಮಾಜಿಕ ಅರಣ್ಯ ಪ್ರದೇಶಗಳಲ್ಲಿ ಒಂದೇ ರೀತಿಯ ಸಸಿಗಳನ್ನು ನೆಡುವ ಬದಲು ವಿವಿಧ ಜಾತಿಯ ಹಣ್ಣು ಹಂಪಲುಗಳ ಹಾಗೂ ಜನಸ್ನೇಹಿ ಗಿಡ ಮರಗಳ ಸಸಿಗಳನ್ನು ನೆಡುವದರಿಂದ ಪ್ರಾಣಿ ಪಕ್ಷಿಗಳಿಗೂ ಮತ್ತು ಸಾರ್ವಜನಿಕರಿಗೆ ಅನಕೂಲವಾಗುತ್ತದೆ ಅಲ್ಲದೇ ಪರಿಸರ ಸಮತೋಲನ ಕಾಯ್ದುಕೊಳ್ಳಲು ಸಹಕಾರಿಯಾಗುತ್ತದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ತಿಳಿಸಿದರು.

ಅರಣ್ಯ ಪ್ರದೇಶದಲ್ಲಿ ಮಳೆಯಿಂದ ಬಿದ್ದ ನೀರು ಹರಿದು ಒಂದೆಡೆ ಸೇರುವ ಜಾಗಗಳಲ್ಲಿ ಆ ನೀರನ್ನು ಸೂಕ್ತ ರೀತಿಯಲ್ಲಿ ಶೇಖರಿಸಿ ಬಳಸಲು ಚಿಕ್ಕ ಕಾಲುವೆ ರೀತಿಯ ಯೋಜನೆಗಳನ್ನು ಹಾಕಿಕೊಳ್ಳಬೇಕು ಎಂದು ಸೂಚಿಸಿದರು. ತಾಲೂಕುವಾರು ಸಾಗುವಳಿ ಭೂಮಿ, ನೀರಾವರಿ ಲಭ್ಯತೆ, ಪರಿವರ್ತನೆಗಿರುವ ಪ್ರದೇಶ, ಹಣಕಾಸಿನ ಅಗತ್ಯತೆ ಕುರಿತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿ ಚರ್ಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಲಕ್ಷಣ ಕಳ್ಳೆನವರ, ಉಪ ನಿರ್ದೇಶಕ ಎಲ್.ಐ.ರೂಡಗಿ, ಕೈಗಾರಿಕೆ ಇಲಾಖೆ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ, ತೋಟಗಾರಿಕೆ ಉಪನಿರ್ದೇಕ ರವೀಂದ್ರ ಹಕಾಟಿ, ಪಶುಸಂಗೋಪನಾ ಇಲಾಖೆ ಉಪನಿರ್ದೇಶಕ ಎಸ್.ಹೆಚ್. ಕರಡಿಗುಡ್ಡ ಸೇರಿದಂತೆ ಇತರರು ಇದ್ದರು.

## ಪ್ರಾದೇಶಿಕ ಆಯುಕ್ತರಾಗಿ ಜಹೀರಾ ನಸೀಮ್ ಅಧಿಕಾರ ಸ್ವೀಕಾರ



ಮಲ್ಲಮ್ಮನುಡಿವಾರ್ತೆ

ಕಲಬುರಗಿ:ಜು.09: ಕಲಬುರಗಿ ಕಂದಾಯ ವಿಭಾಗದ ನೂತನ ಪ್ರಾದೇಶಿಕ ಆಯುಕ್ತರಾಗಿ 2013ರ ಕರ್ನಾಟಕ ಕೇಡರ್ ಐ.ಎ.ಎಸ್. ಅಧಿಕಾರಿ ಜಹೀರಾ ನಸೀಮ್ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ಪ್ರಾದೇಶಿಕ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದ ಕೃಷ್ಣ ಭಾಜಪೇಯಿ ಸ್ಥಾನಕ್ಕೆ ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಜಹೀರಾ ನಸೀಮ್ ಅವರನ್ನು ಸರ್ಕಾರ ಮಂಗಳವಾರ ವರ್ಗಾಯಿಸಿ ಆದೇಶ ಹೊರಡಿಸಿತ್ತು. ಮೂಲತ ರಾಜ್ಯದ ಧಾರವಾಡ ಜಿಲ್ಲೆಯವರಾಗಿರುವ ಜಹೀರಾ ನಸೀಮ್ ಅವರು ಎಂ.ಎಸ್ಸಿ(ಎಂ.ಫಿಲ್) ಪದವೀಧರರಾಗಿದ್ದಾರೆ. ಧಾರವಾದ, ತರಿಕೆರೆ ಸಹಾಯಕ ಅಯುಕ್ತರಾಗಿ, ಹಾವೇರಿ ಅಪರ ಜಿಲ್ಲಾಧಿಕಾರಿಯಾಗಿ, ಬೀದರ ಜಿಲ್ಲಾ ಪಂಚಾಯತ್ ಸಿ.ಇ.ಓ, ನಗರ ಭೂ ಸಾರಿಗೆ ಇಲಾಖೆಯ ಜಂಟಿ ನಿರ್ದೇಶಕರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿರುವ ಇವರು, ಈ ಹಿಂದೆ ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕರ ನಿರ್ದೇಶಕರಾಗಿ ಮತ್ತು ಅಪರ ಪ್ರಾದೇಶಿಕ ಅಯುಕ್ತರಾಗಿ ಕಾರ್ಯನಿರ್ವಹಿಸಿದ್ದು, ಇದೀಗ ಮತ್ತೆ ತೊಗರಿ ನಾಡಿನ ಸೇವೆಗೆ ಮರಳಿದ್ದಾರೆ.

# ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದವರನ್ನು ಸ್ಮರಿಸುವುದು ಶ್ಲಾಘನೀಯ : ಮಹೇಶ ಮಾಲಗಿತ್ತಿ

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ :ಜು.9: ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾದ ಯೋಧರನ್ನು ಸ್ಮರಿಸುವುದು ಮತ್ತು ಅವರಕುಟುಂಬದವರನ್ನುಗೌರವಿಸುವ ಕಾರ್ಯ ಶ್ಲಾಘನೀಯ ಎಂದು ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಹೇಳಿದ್ದಾರೆ.

ನಗರದ ನಿವೃತ್ತಿ ಸೈನಿಕರ ಸಂಘದ ಕಾರ್ಯಾಲಯದಲ್ಲಿ ಕೇಂದ್ರ ಸರ್ಕಾರ ಸೇನೆಯ ವತಿಯಿಂದ ಘರ್ ಘರ್ ಶೌರ್ಯ ಸನ್ಮಾನ ಕಾರ್ಯಕ್ರಮದಡಿಯಲ್ಲಿ ಕಾರ್ಗಿಲ್ ಹುತಾತ್ಮ ಯೋಧರ ಪತ್ನಿಯರಿಗೆ ಹಮ್ಮಿಕೊಂಡಿದ್ದ ಸನ್ಮಾನಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಇದು, ಅತ್ಯಂತ ಗೌರವದ ಕಾರ್ಯವಾಗಿದೆ. ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರದವರನ್ನು ಸ್ಮರಿಸುವುದಕ್ಕಾಗಿ ಕೇಂದ್ರಸರ್ಕಾರಿ ಘರ್ ಘರ ಶೌರ್ಯ ಸನ್ಮಾನ ಮಾಡುವ ಮೂಲಕ ಮತ್ತೆ ಆ ಹೋರಾಟವನ್ನುನಾಡಿಗೆ ತಿಳಿಸುವ ಪ್ರಯತ್ನಮಾಡಲಾಗುತ್ತಿದೆ ಎಂದರು.

ಕಾರ್ಗಿಲ್ ಯುದ್ಧದ ರೋಚಕತೆ ಮತ್ತು ಅಲ್ಲಿಯ ಸೈನಿಕರ ಹೋರಾಟ ಸಾಮಾನ್ಯವಲ್ಲ. ಆಗಿನ ಸ್ಥಿತಿಯಲ್ಲಿ ಅಲ್ಲಿಯ ವಾತವಾರಣದಲ್ಲಿ ಸೇನೆ ಹೋರಾಟ ಮಾಡಿದ್ದನ್ನು ಪದಗಳಲ್ಲಿ ಹೇಳಲು ಸಾಧ್ಯವೇ ಇಲ್ಲ ಎಂದರು.

ನಾನು ಸಹ ಆ ಯುದ್ಧದಲ್ಲಿ ಭಾಗಿಯಾಗಿದ್ದೆ ಎಂದು ತಮ್ಮ ಹೋರಾಟದ ನೆನಪನ್ನು ಸ್ಮರಿಸಿದರು. ಕೊಪ್ಪಳ ತಾಲೂಕಿನ ಅಳವಂಡಿ ವೀರಯೋಧ ಮಲ್ಲಯ್ಯಮೇಗಳಮಠ ಅವರು ಈ ಯುದ್ಧದಲ್ಲಿ ಹೋರಾಡಿ ಹುತಾತ್ಮರಾಗಿದ್ದರು. ಈಗ ಅವರನ್ನು ಪುನಃ ಸ್ಮರಿಸುವುದು ಮತ್ತು ಅವರ ಕುಟುಂಬವನ್ನು ಸನ್ಮಾನಿಸುತ್ತಿರುವುದು ನಿಜಕ್ಕೂ ಅರ್ಥಪೂರ್ಣ ಎಂದರು.

ನಿವೃತ್ತ ಸೈನಿಕರು ಸಾಕಷ್ಟು ಬೇಡಿಕೆಗಳು ಇದ್ದು, ಅವುಗಳನ್ನು ಈಡೇರಿಸುವ ಪ್ರಯತ್ನವನ್ನು ನಾನು ಪ್ರಮಾಣಿಕವಾಗಿ ಮಾಡಿದ್ದೇನೆ. ಆದರೂ ಕಾನೂನು ಸಮಸ್ಯೆಯಿಂದ ತೊಡಕಾಗಿದ್ದರಿಂದ ಆಗಿಲ್ಲ. ಇನ್ನಾದರೂ ಈಡೇರಿಸುವ ಪ್ರಮಾಣಿಕ ಪ್ರಯತ್ನ ಮಾಡುವುದಾಗಿ ಹೇಳಿದರು. ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಮಾರುತಿ ಗೊಂದಿ ಅವರು ಮಾತನಾಡಿ, ಸೈನಿಕರನ್ನು ಕಾರ್ಗಿಲ್ ವಿಜಯ ದಿವಸ ಸ್ಮರಿಸುತ್ತಾರೆ, ಆದರೆ ನಂತರ ಮರೆತುಬಿಡುತ್ತಾರೆ ಎಂದು ವಿಷಾಧ ವ್ಯಕ್ತಪಡಿಸಿದರು. ಸೈನಿಕರು ನಿವೃತ್ತಿಯಾದ ಮೇಲೆ ಅವರಿಗೆ ದೊರೆಯಬೇಕಾದ ಗೌರವ ದೊರೆಯುತ್ತಿಲ್ಲ. ಸಿಗಬೇಕಾದ ಸೌಲತ್ತುಗಳು ಸಿಗುತ್ತಿಲ್ಲ. ಇದಕ್ಕಾಗಿ ಹೋರಾಟ ಮಾಡಬೇಕಾಗಿದೆ ಎಂದರು. ಸೇನೆಯ ಪರವಾಗಿ ಆಗಮಿಸಿದ್ದ ನಾಯಕ ಸುಭೇದಾರ ತಿಲಕ್ ಅವರು ಮಾತನಾಡಿ, ಕಾರ್ಗಿಲ್ ಯುದ್ಧದಲ್ಲಿ ಹೋರಾಟ ಮಾಡಿ, ಹುತಾತ್ಮರಾದವರ ಕುಟಂಬದವರನ್ನು ಗೌರವಿಸುವುದಕ್ಕಾಗಿ ಘರ್ ಘರ್ ಶೌರ್ಯ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಅದರಂತೆ ದೇಶದಾದ್ಯಂತ 521 ಕುಟುಂಬದವರ ಬಳಿಗೆ ಸೇನೆ ತೆರಳಿ, ಗೌರವಿಸುತ್ತಿದೆ. ರಾಜ್ಯದಲ್ಲಿಯೂ ನಾಲ್ವರು ಯೋಧರು ಕಾರ್ಗಿಲ್ ಯುದ್ಧದಲ್ಲಿ ಹುತಾತ್ಮರಾಗಿದ್ದು, ಅವರನ್ನು ಗೌರವಿಸಲಾಗುತ್ತಿದೆ. ಕೊಪ್ಪಳದಲ್ಲಿ ಮಲ್ಲಯ್ಯಮೇಗಳಮಠ ಅವರ ಪತ್ನಿ ಸರೋಜಾ ಹಾಗೂ ಶಿವಬಸಯ್ಯ ಕುಲಕರ್ಣಿ ಅವರ ಪತ್ನಿ ನಿರ್ಮಲಾ ಅವರನ್ನು ಘರ್ ಘರ್ ಶೌರ್ಯ ಸನ್ಮಾನ ಕಾರ್ಯಕ್ರಮದಡಿ ಸ್ಥಳೀಯ ನಿವೃತ್ತ ಸೈನಿಕರ ಸಂಘದ ಸಹಯೋಗದಲ್ಲಿ ಸನ್ಮಾನಿಸಿ, ಪ್ರಸಂಶನಾ ಪತ್ರ ನೀಡಲಾಗಿದೆ ಎಂದರು. ತಹಸೀಲ್ದಾರ ವಿಠ್ಠಲ್ ಚೌಗಲಿ, ಸಂತರಾಮ ಭಟ್, ದ್ರಾಕ್ಷಾಯಿಣಿ ಕೊಪ್ಪಳ, ಸರೋಜಮ್ಮ ಮೇಗಳಮಠ, ನಿರ್ಮಲಾ ಕುಲಕರ್ಣಿ, ಸೈನಿಕರಾದ ರಜೀಸ್, ಲಕ್ಷ್ಮಣ ಅಸುಂಡಿ, ಸೈಯೂಜ್, ಉಮೇಶ ಕಾಮನೂರು, ಇಂಧುದರ ಸೊಪ್ಪಿಮಠ, ಕಾರ್ಯದರ್ಶಿ ನಿಂಗಪ್ಪ ಗಾಣಿಗೇರ, ಮಲ್ಲಿಕಾರ್ಜುನ ಸಜ್ಜನ ಇದ್ದರು. ನಿವೃತ್ತ ಸೈನಿಕರ ಸಂಘದ ಉಪಾಧ್ಯಕ್ಷ ಶ್ರೀಧರ ಪೊಲೀಸ್ ಪಾಟೀಲ್ ಕಾರ್ಯಕ್ರಮ ನಿರೂಪಿಸಿದರು.

# ಜಿಲ್ಲಾ ಪಂಚಾಯತ್ ಅಧಿಕಾರಿ, ಸಿಬ್ಬಂದಿಗೆ

## ಸ್ವಚ್ಛತೆ, ಶಿಸ್ತಿನ ಪಾಠ ಮಾಡಿದ ಸಿಇಓ ಈಶ್ವರ ಕುಮಾರ ಕಾಂದೂ

ಮಲ್ಲಮ್ಮ ನುಡಿ ವಾರ್ತೆ



ರಾಯಚೂರ ಜು 09: ರಾಯಚೂರ ಜಿಲ್ಲಾ ಪಂಚಾಯತನ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಜುಲೈ 9ರಂದು ಅಧಿಕಾರ ಸ್ವೀಕರಿಸಿದ ಈಶ್ವರ ಕುಮಾರ ಕಾಂದೂ ಅವರು ಮೊದಲ ದಿನವೇ ಜಿಲ್ಲಾ ಪಂಚಾಯತ್ ಅಧಿಕಾರಿ ಮತ್ತು ಸಿಬ್ಬಂದಿಗೆ ಶಿಸ್ತು ಮತ್ತು ಸ್ವಚ್ಛತೆಯ ಬಗ್ಗೆ ಪಾಠ ಮಾಡಿದರು.

ಜಿಲ್ಲಾ ಪಂಚಾಯತನ ಆಡಳಿತ ಶಾಖೆ, ಲೆಕ್ಕಪತ್ರ ಶಾಖೆ, ಲೆಕ್ಕ ಶಾಖೆ ಸೇರಿದಂತೆ ವಿವಿಧೆಡೆ ಖುದ್ದು ತೆರಳಿ ಅಧಿಕಾರಿ ಮತ್ತು ಸಿಬ್ಬಂದಿಯನ್ನು ಸ್ವತಃ ಪರಿಚಯಿಸಿಕೊಂಡರು. ಹೆಸರು ಮತ್ತು ಕಾರ್ಯದ ಬಗ್ಗೆ ಕೇಳಿ ಬೇರೆ ಬೇರೆ ಅಧಿಕಾರಿಗಳು ಮತ್ತು ಸಿಬ್ಬಂದಿಯ ಕಾರ್ಯ ನಿರ್ವಹಣೆಯ ಬಗ್ಗೆ ಸಿಇಓ ಅವರು ವಿಚಾರಿಸಿದರು.

ವಾರಕ್ಕೊಂದು ಬಾರಿ ಸ್ವಚ್ಛತಾ ಕಾರ್ಯ: ಜಿಲ್ಲಾ ಪಂಚಾಯತನ ಬೇರೆ ಬೇರೆ ವಿಭಾಗಗಳು, ವಿಸಿ ಹಾಲ್, ಎನ್‌ಐಸಿ ಹಾಲ್ ಮತ್ತು ಸಭಾಂಗಣದಲ್ಲಿ ಸಂಚರಿಸುವ ವೇಳೆ ಸಿಇಓ ಅವರು ಕಚೇರಿಯನ್ನು ಮತ್ತು ಕಡತಗಳನ್ನು ಶಿಸ್ತುಬದ್ಧವಾಗಿಡುವಂತೆ ಸೂಚನೆ ನೀಡಿದರು. ವಾರಕ್ಕೊಂದು ಬಾರಿ ಸ್ವಚ್ಛತಾ ದಿನ ಎಂದು ನಿಗದಿಪಡಿಸಿ ಎಲ್ಲಿಯೂ ಧೂಳು ಕಾಣದಂತೆ ನಿಯಮಿತವಾಗಿ ಸ್ವಚ್ಛತಾ ಕಾರ್ಯ ನಡೆಸಬೇಕು ಎಂದು ಸಿಇಓ ಅವರು ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

ಕಡತಗಳ ನಿರ್ವಹಣೆ: ಕಚೇರಿಯ ಎಲ್ಲ ಶಾಖೆಗಳಲ್ಲಿ ಸ್ವಚ್ಛತೆ ಜತೆಗೆ ಕಡತಗಳನ್ನು ಶಿಸ್ತುಬದ್ಧವಾಗಿಡಬೇಕು. ತಾವು ಮರಳಿ ಭೇಟಿ ನೀಡಿದಾಗ ಎಲ್ಲವೂ ಸರಿಯಾಗಬೇಕು ಎಂದು ಸಿಇಓ ಅವರು ಬೇರೆ ಬೇರೆ ಶಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ವಾರದ ಗಡುವು ವಿಧಿಸಿದರು. ಲೆಕ್ಕಪತ್ರ ಶಾಖೆ ಎದುರುಗಡೆ ಹರಡಿದ ಕಡತಗಳ ಗಂಟನ್ನು ಸರಿಯಾಗಿ ರಕ್ಷಣೆ ಮಾಡಲು ನಿರ್ದೇಶನ ನೀಡಿದರು.

ಪ್ರತಿವಾರ ವಿ.ಸಿ ನಡೆಸಿ: ಪ್ರತಿಯೊಂದು ಕಾರ್ಯವು ಸುಗಮವಾಗಿ ನಡೆಯುವ ನಿಟ್ಟಿನಲ್ಲಿ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ವಾರಕ್ಕೊಮ್ಮೆ ವಿಡಿಯೋ ಸಂವಾದ ನಡೆಸಿ ಕಾರ್ಯನಿರ್ಹಣೆಯ ಬಗ್ಗೆ ಅವಲೋಕನ ಮಾಡಬೇಕು. ಈ ಬಗ್ಗೆ ಸೂಕ್ತ ಮೇಲ್ವಿಚಾರಣೆ ಮಾಡುವಂತೆ ಜಿಪಂ ಉಪ ಕಾರ್ಯದರ್ಶಿಗಳು ಮತ್ತು ಮುಖ್ಯ ಯೋಜನಾಧಿಕಾರಿಗಳಿಗೆ ಸಿಇಓ ಅವರು ನಿರ್ದೇಶನ ನೀಡಿದರು.

ಸಾರ್ವಜನಿಕರಿಗೆ ಸ್ಪಂದಿಸಿ: ಬೇರೆ ಬೇರೆ ಅಹವಾಲುಗಳನ್ನು ಹೊತ್ತು ಕಚೇರಿಗೆ ಬರುವ ಸಾರ್ವಜನಿಕರ ಅಹವಾಲುಗಳಿಗೆ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಸ್ಪಂದಿಸಬೇಕು. ಜಿಲ್ಲೆಯಲ್ಲಿನ ಎಲ್ಲ ಗ್ರಂಥಾಲಯಗಳಿಗೆ ಮೇಲ್ವಿಚಾರಕರ ನೇಮಕ ಸೇರಿದಂತೆ ಯಾವುದೇ ರೀತಿಯ ಅಧಿಕಾರಿ ಸಿಬ್ಬಂದಿ ನೇಮಕ ಕಾರ್ಯವನ್ನು ತ್ವರಿತಗತಿಯಲ್ಲಿ ನಡೆಸಬೇಕು. ವಿಶೇಷವಾಗಿ ಹಿರಿಯ ನಾಗರಿಕರನ್ನು ಕಾಯಿಸದೇ ಅವರಿಗೆ ಸಕಾಲಕ್ಕೆ ಸ್ಪಂದನೆ ನೀಡಬೇಕು ಎಂದು ಸಿಇಓ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಮಾಹಿತಿ ಹಕ್ಕು ಕಾಯಿದೆ ಅರ್ಜಿಗಳಿಗೆ ಸಹ ಸಕಾಲಕ್ಕೆ ಮಾಹಿತಿ ಒದಗಿಸಬೇಕು ಎಂದು ಸೂಚನೆ ನೀಡಿದರು. ಈ ವೇಳೆ ಜಿಲ್ಲಾ ಪಂಚಾಯತನ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಮುಖ್ಯ ಯೋಜನಾಧಿಕಾರಿ ಡಾ.ಟಿ ರೋಣಿ, ಆಡಳಿತದ ಸಹಾಯಕ ನಿರ್ದೇಶಕರಾದ ಕೆ ಸೋಮಶೇಖರ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ, ಅಕ್ಷರ ದಾಸೋಹ ಶಿಕ್ಷಣಾಧಿಕಾರಿ ಕನಾನ್ ಪ್ರಭು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಅಭಿಯಂತರ ನಾಗೇಶ್, ವಾರ್ತಾ ಇಲಾಖೆಯ ಗವಿಸಿದ್ದಪ್ಪ ಹೊಸಮನಿ ಸೇರಿದಂತೆ ಇನ್ನಿತರರು ಇದ್ದರು.

# ಜಿಲ್ಲಾ ಮಟ್ಟದ ಶಿಶಿಕ್ಷು ಹಾಗೂ ಉದ್ಯೋಗ ಮೇಳಕ್ಕೆ ಚಾಲನೆ

ಮಲ್ಲಮ್ಮ ನುಡಿ ವಾರ್ತೆ




ಕಲಬುರಗಿ,ಜು.09: ಕಲಬುರಗಿ ಜಿಲ್ಲೆಯಲ್ಲಿರುವ ನಿರುದ್ಯೋಗ ಯುವ ಜನತೆಗೆ ಉದ್ಯೋಗಾಧರಿತ ಶಿಶಿಕ್ಷು ತರಬೇತಿ ಹಾಗು ಉದ್ಯೋಗವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕಲಬುರಗಿ ಸರ್ಕಾರಿ, ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳು ಹಾಗೂ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ ಕಲಬುರಗಿ ಇವುಗಳ ಸಹಯೋಗದೊಂದಿಗೆ ಬುಧವಾರ ಕಲಬುರಗಿ (ಪುರುಷ) ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಶಿಶಿಕ್ಷು ಹಾಗೂ ಉದ್ಯೋಗ ಮೇಳಕ್ಕೆ ಕಲಬುರಗಿ ನಗರ ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್.ಡಿ. ಅವರು ಉದ್ಘಾಟಿಸಿದರು. ನಂತರ ಅವರು ಮಾತನಾಡಿ, ವಿದ್ಯಾರ್ಥಿಗಳಿಗೆ ಐ.ಟಿ.ಐ. ಕೋರ್ಸುಗಳ ಮಹತ್ವದ ಬಗ್ಗೆ ತಿಳಿಸಿದಲ್ಲದೇ ಆಸಕ್ತಿಯಿಂದ ತರಬೇತಿಯನ್ನು ಪಡೆದುಕೊಂಡು ಸೂಕ್ತ ಉದ್ಯೋಗವನ್ನು ಪಡೆದು ನಿಷ್ಠೆಯಿಂದ ಕೆಲಸ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿದ ಸಂಸ್ಥೆಯ ಪ್ರಾಚಾರ್ಯ ಮುರಳೀಧರ ರತ್ನಗಿರಿ ಅವರು ಮಾತನಾಡಿ, ಇಂದು ನಡೆದ ಉದ್ಯೋಗಮೇಳದಲ್ಲಿ ಸುಮಾರು 25ಕ್ಕೂ ಹೆಚ್ಚು ಉದ್ಯೋಗದಾತರು ಭಾಗವಹಿಸಿದ್ದು, ಸುಮಾರು 800 ಅಭ್ಯರ್ಥಿಗಳು ಆನ್‌ಲೈನನಲ್ಲಿ ನೋಂದಣಿ ಮಾಡಿಸಿಕೊಂಡಿದ್ದು ಸುಮಾರು 300ಕ್ಕೂ ಹೆಚ್ಚು ಅಭ್ಯರ್ಥಿಗಳು ಶಿಶಿಕ್ಷು/ಉದ್ಯೋಗಾವಕಾಶವನ್ನು ಪಡೆಯಲಿದ್ದಾರೆ. ಈ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಕಂಪನಿಗಳಾದ ಎಲ್ ಆಂಡ್ ಟಿ, ಎಂಆರ್‌ಫ್, ಟೊಯೊಟೋ, ರಾಜಶ್ರೀ ಸಿಮೆಂಟ್, ಶ್ರೀ ಸಿಮೆಂಟ್ ಸೇರಿದಂತೆ ಅನೇಕ ಕಂಪನಿಗಳು ಭಾಗವಹಿಸಿದರು ಎಂದರು.

ಕಾರ್ಯಕ್ರಮದಲ್ಲಿ ವಿಭಾಗೀಯ ಕಚೇರಿ ಜಂಟಿ ನಿರ್ದೇಶಕ ರಾಜೇಶ ಬಾವಗಿ ಅವರು ಮಾತನಾಡಿ, ಇವತ್ತಿನ ಸ್ಪರ್ಧಾತ್ಮಕ ಯುಗದಲ್ಲಿ ತಾಂತ್ರಿಕ ಕೋರ್ಸುಗಳಾದಂದ ಐ.ಟಿ.ಐ. ವೃತ್ತಿಯನ್ನು ಅಭ್ಯಾಸ ಮಾಡಿ ತಮ್ಮ ಭವಿಷ್ಯವನ್ನು ಉಜ್ವಲವಾಗಿಸಿಕೊಳ್ಳಬೇಕು. ಉದ್ಯೋಗದ ಜೊತೆಗೆ ಸ್ವಯಂ ಉದ್ಯೋಗದ ಅವಕಾಶಗಳು ಕೂಡ ಸಾಕಷ್ಟು ಇವೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಆಡಳಿತಾಧಿಕಾರಿ ಸುರೇಶ ವಗ್ಗೆ, ವಿಭಾಗೀಯ ಕಚೇ–ರಿಯ ಉಪನಿರ್ದೇಶಕಿ ಡಾ.ರುಬಿನಾ ಪರ್ವೀನ, ಪಿಯುಶ್ ಪರಿಹಾರ, ಪ್ರಾಚಾರ್ಯ ಶಕೀಲ ಅನ್ಸಾರಿ, ಉದ್ಯಮಿ ವೀರೇಶ ಸೇರಿದಂತೆ ಹಲವಾರು ಉದ್ಯೋಗದಾತರು, ಸರ್ಕಾರಿ, ಅನುದಾನಿತ ಕೈಗಾರಿಕಾ ತರಬೇತಿ ಸಂಸ್ಥೆಗಳ ಪ್ರಾಚಾರ್ಯರು, ಸಿಬ್ಬಂದಿ ಹಾಗೂ ತರಬೇತಿದಾರರು ಉಪಸ್ಥಿತರಿದ್ದರು.

# ಅಂಗನವಾಡಿ ಕಾರ್ಯಕರ್ತರ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9–50 ವರ್ಷಗಳಿಂದ ಐಸಿಡಿಎಸ್ ಅಡಿಯಲ್ಲಿ ದುಡಿಯುತ್ತಿರುವ ಅಂಗನವಾಡಿ ಕಾರ್ಯಕರ್ತೆಯರ ಹುದ್ದೆಯನ್ನು ಖಾಯಂಗೊಳಿಸುವವರೆಗೂ ಕನಿಷ್ಠ ವೇತನ ನೀಡುವಂತೆ ಆಗ್ರಹಿಸಿ ಅಂಗನವಾಡಿ ಕಾರ್ಯಕರ್ತರು ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ದೇಶದ ಕಾರ್ಪೊರೇಟ್ ಬಂಡವಾಳಗಾರರಿಗೆ 15.32 ಲಕ್ಷ ಕೋಟಿ ಸಾಲ ಮನ್ನಾ, 1.97 ಲಕ್ಷ ಕೋಟಿ ಸಬ್ಸಿಡಿಗಳನ್ನು ಉದಾರವಾಗಿ ಕೊಡುವ ಕೇಂದ್ರ ಸರ್ಕಾರ ದೇಶದ ಭವಿಷ್ಯತ್ತನ್ನು ರೂಪಿಸಲು ಪೂರಕವಾಗಿ ಮಾನವ ಸಂಪನ್ಮೂಲದ ಬೆಳವಣಿಗೆಗೆ ದುಡಿಯುತ್ತಿರುವ ಐಸಿಡಿಎಸ್ ಯೋಜನೆ ಮತ್ತು ಇದರಲ್ಲಿ ದುಡಿಯುವ ಅಂಗನವಾಡಿ ನೌಕರರಿಗೆ ಕೊಡಲು ಹಣವಿಲ್ಲ ಎಂದು ಹೇಳುವುದು ಸರಿಯಾದ ಕ್ರಮವೇ ಎಂದು ಪ್ರತಿಭಟನಾಕಾರರು ಪ್ರಶ್ನಿಸಿದರು.

ಕೇಂದ್ರಸರ್ಕಾರದಿಂದ ಕೊಡಲಾಗುತ್ತಿರುವ ವಂತಿಗೆ ಹಣವನ್ನು ಕಡಿತಗೊಳಿಸಲು ಹಾಗೂ ಪೋಷಣ್ ಫಲಾನುಭವಿಗಳಿಗೆ ಮನೆಗೆ ಪಡಿತರ ಸಾಮಾಗ್ರಿಗಳನ್ನು ನೀಡಲು 2025 ಮೇ ತಿಂಗಳಿನಿಂದ ಕಡ್ಡಾಯಗೊಳಿಸಿದ್ದಾರೆ. ಇಷ್ಟೆಲ್ಲಾ ನಿರ್ದೇಶನಗಳಿದ್ದರೂ ಕೂಡಾ ಮುಖ ಗುರುತಿಸುವ ವ್ಯವಸ್ಥೆಗೆ ಬೇಕಾದ ಅಂಗನವಾಡಿ ಕೇಂದ್ರಗಳಿಗೆ ವಾಯ್.ಪೈ ಅಳವಡಿಕೆ, 5 ಜಿ ಸಾಮಾರ್ಥ್ಯದ ಮೊಬೈಲ್ ಮತ್ತು ಸಿಮ್‌ಗಳನ್ನು ಒದಗಿಸದೇ ಎಫ್‌ಆರ್‌ಎಸ್ ಜಾರಿಗಾಗಿ ಅಂಗನವಾಡಿ ನೌಕರರ ಮೇಲೆ ತುಂಬಾ ಒತ್ತಡ ಹೇರಲಾಗುತ್ತಿದೆ ಇದು ನಿಲ್ಲಬೇಕು ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ.

# ಯಾದಗಿರಿ ನೂತನ ಜಿಲ್ಲಾಧಿಕಾರಿಗಳಾಗಿ ಭೋಯಾರ್ ಹರ್ಷಲ್ ನಾರಾಯಣರಾವ್ ಅಧಿಕಾರ ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ:ಜು:9: ಯಾದಗಿರಿ ನೂತನ ಜಿಲ್ಲಾಧಿಕಾರಿಗಳಾಗಿ ಭೋಯಾರ್ ಹರ್ಷಲ್ ನಾರಾಯಣರಾವ್ ಅವರು ಇಂದು ಅಧಿಕಾರ ವಹಿಸಿಕೊಂಡಿದ್ದಾರೆ. ನಿರ್ಗಮಿತ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಅಧಿಕಾರ ಹಸ್ತಾಂತರಿಸಿದರು. ನೂತನ ಜಿಲ್ಲಾಧಿಕಾರಿಗಳಾದ ಶ್ರೀ ಭೋಯಾರ್ ಹರ್ಷಲ್ ನಾರಾಯಣರಾವ್ ಮೂಲತಃ ಮಹಾರಾಷ್ಟ್ರರಾಜ್ಯದವರಾಗಿದ್ದು, ವರದಾ ಇವರ ಜನ್ಮಸ್ಥಳವಾಗಿದೆ ಇವರು 2016ರ ಐ.ಎ.ಎಸ್ ಬ್ಯಾಚ್ ನವರಾಗಿದ್ದಾರೆ. ಸವನೂರ್, ಚಾಮರಾಜನಗರ, ವಿಜಯನಗರ, ಸಹಾಯಕ ಆಯುಕ್ತರಾಗಿ ಹಾಗೂ ಬೆಳಗಾವಿ ಜಿಲ್ಲಾ ಪಂಚಾಯತ್‌ನ ಮುಖ್ಯಕಾರ್ಯನಿರ್ವಹಣಾಧಿಕಾರಿಗಳಾ, ಅಟಲ್‌ಜಿ ಜನಸ್ನೇಹಿ ಕೇಂದ್ರದ ನಿರ್ದೇಶಕರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿದ್ದಾರೆ. ನಿರ್ಗಮಿತ ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರು ಕಲ್ಬುರ್ಗಿ, ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರಾಗಿ ವರ್ಗಾವಣೆಗೊಂಡಿದ್ದಾರೆ.

# 20 ಎಕರೆ ಪಳಿಗೂಡಿಸಿ ಸಾಹಸ ಮೆರೆದ ಎತ್ತುಗಳು!



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜು.9–'ಸಾಧನೆ ಅಂದರೆ ತಾನು...ತಾನು ಅಂ–ದರೆ ಸಾಧನೆ..' ಎನ್ನುವ ರೀತಿ ಬಾಗಲಕೋಟೆ ತಾಲೂಕಿನ ಬೆನಕಟ್ಟಿ ಗ್ರಾಮದ ರೈತ ಅಶೋಕ ಮೆಳ್ಳಿ ತನ್ನ ಎತ್ತುಗಳ ಮೂಲಕ ಸತತ ಸಾಧನೆ ಮಾಡುತ್ತಲೇ ಬಂದಿದ್ದಾರೆ.

ಹೊಲ ಹರಗುವುದು, ಬಿತ್ತನೆ ಮಾಡುವುದು... ಹೀಗೆ ಎಲ್ಲ ವಿಧದ ಕೃಷಿ ಚಟುವಟಿಕೆಗಳಲ್ಲಿ ಈಗಾಗಲೇ ಹಲವು ಸಾಧನೆ ಮಾಡಿರುವ ಮೆಳ್ಳಿ ಅವರ ಎತ್ತುಗಳು ಈಗ ಮತ್ತೊಂದು ಸಾಹಸ ತೋರಿ ರೈತಾಪಿ ಜನ ಹುಬ್ಬೇರುವಂತೆ ಮಾಡಿವೆ. ಮುಂಗಾರು ಹಂಗಾಮಿಗೆ ಮಂಗಳವಾರ 20 ಎಕರೆ ಹೊಲದಲ್ಲಿ ಟ್ರ್ಯಾಕ್ಟರ್ ಮೂಲಕ ಈರುಳ್ಳಿ ಬಿತ್ತನೆ ಮಾಡಿದ್ದನ್ನು ಈ ಎತ್ತುಗಳು ಪಳಿ (ಬೆಳಿಸಾಲು) ಹೊಡೆದು ಸಾಹಸ ಮೆರೆದಿವೆ. ಸಾಮಾನ್ಯವಾಗಿ ಎತ್ತುಗಳು ಒಂದು ದಿನಕ್ಕೆ 12 ಎಕರೆ ತನಕ ಪಳಿ (ಬೆಳೆಸಾಲು) ಕೂಡಿಸಬಹುದಾಗಿದ್ದು, ಅಶೋಕನ ಎತ್ತುಗಳು ಬರೋಬ್ಬರಿ 20 ಎಕರೆ ಪಳಿಗೂಡಿಸಿ ಸೈ ಎನಿಸಿಕೊಂಡಿವೆ. ಬೆಳಿಗ್ಗೆ 7 ಗಂಟೆಯಿಂದ ಪ್ರಾರಂಭವಾದ ಬಿತ್ತನೆ ಕಾರ್ಯ ಮಧ್ಯಾಹ್ನ 4 ಗಂಟೆಗೆ ಪೂರ್ಣಗೊಂಡಾಗ ವೀಕ್ಷಿಸಲು ಬಂದಿದ್ದ ನೂರಾರು ಜನ ರೈತರು ಎತ್ತುಗಳ ಸಾಹಸ ಕೊಂಡಾಡಿ ಗುಲಾಲು ಹಾಕಿ ಸಂಭ್ರಮಿಸಿದರು. ಎತ್ತುಗಳ ಮಾಲಿಕ ಅಶೋಕ ಮೆಳ್ಳಿ ಸತತ ಕುಂಟಿಯ ಮೇಲೆ ನಿಂತು ಪಳಿಗೂಡಿಸುವ ಕಾರ್ಯ ಮಾಡಿರುವುದಕ್ಕೂ ಸಹ ಮೆಚ್ಚುಗೆ ವ್ಯಕ್ತವಾಗಿದೆ.

# ಪ್ರಾದೇಶಿಕ ಆಯುಕ್ತರಾಗಿ ಜಹೀರಾ ನಸೀಮ್ ಅಧಿಕಾರ ಸ್ವೀಕಾರ



ಕಲಬುರಗಿ,ಜು.9: ಕಲಬುರಗಿ ಕಂದಾಯ ವಿಭಾಗದ ನೂತನ ಪ್ರಾದೇಶಿಕ ಆಯುಕ್ತರಾಗಿ 2013ರ ಕರ್ನಾಟಕ ಕೇಡರ್ ಐ.ಎ.ಎಸ್. ಅಧಿಕಾರಿ ಜಹೀರಾ ನಸೀಮ್ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು. ಪ್ರಾದೇಶಿಕ ಆಯುಕ್ತರಾಗಿ ಕಾರ್ಯನಿರ್ವಹಿಸುತ್ತಿದ್ದ ಕೃಷ್ಣ ಭಾಜಪೇಯಿ ಸ್ಥಾನಕ್ಕೆ ಕರ್ನಾಟಕ ರೇಷ್ಮೆ ಉದ್ಯಮಗಳ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಜಹೀರಾ ನಸೀಮ್ ಅವರನ್ನು ಸರ್ಕಾರ ಮಂಗಳವಾರ ವರ್ಗಾಯಿಸಿ ಆದೇಶ ಹೊರಡಿಸಿತ್ತು. ಮೂಲತ ರಾಜ್ಯದ ಧಾರವಾಡ ಜಿಲ್ಲೆಯವರಾಗಿರುವ ಜಹೀರಾ ನಸೀಮ್ ಅವರು ಎಂ.ಎಸ್ಸಿ (ಎಂ.ಫಿಲ್) ಪದವೀಧರರಾಗಿದ್ದಾರೆ. ಧಾರವಾದ, ತರಿಕೆರೆ ಸಹಾಯಕ ಅಯುಕ್ತರಾಗಿ, ಹಾವೇರಿ ಅಪರ ಜಿಲ್ಲಾಧಿಕಾರಿಯಾಗಿ, ಬೀದರ ಜಿಲ್ಲಾ ಪಂಚಾಯತ್ ಸಿ.ಇ.ಓ., ನಗರ ಭೂ ಸಾರಿಗೆ ಇಲಾಖೆಯ ಜಂಟಿ ನಿರ್ದೇಶಕರಾಗಿ ಸೇವೆ ಸಲ್ಲಿಸಿದ ಅನುಭವ ಹೊಂದಿರುವ ಇವರು, ಈ ಹಿಂದೆ ಕಲಬುರಗಿಯಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವ್ಯವಸ್ಥಾಪಕರ ನಿರ್ದೇಶಕರಾಗಿ ಮತ್ತು ಅಪರ ಪ್ರಾದೇಶಿಕ ಅಯುಕ್ತರಾಗಿ ಕಾರ್ಯನಿರ್ವಹಿಸಿದ್ದು, ಇದೀಗ ಮತ್ತೆ ತೊಗರಿ ನಾಡಿನ ಸೇವೆಗೆ ಮರಳಿದ್ದಾರೆ.

# ರಾಯಚೂರ ಜಿಲ್ಲೆಯ ನೂತನ ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ ಅಧಿಕಾರ ಸ್ವೀಕಾರ



ರಾಯಚೂರು ಜು 09: 2018ರ ಬ್ಯಾಚನ ಐಎಎಸ್ ಅಧಿಕಾರಿ ಈಶ್ವರ ಕುಮಾರ ಕಾಂದೂ ಅವರು ರಾಯಚೂರು ಜಿಲ್ಲಾ ಪಂಚಾಯತನ ನೂತನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಜುಲೈ 9ರಂದು ಅಧಿಕಾರ ಸ್ವೀಕರಿಸಿದರು. ಮೂಲತಃ ಉತ್ತರ ಪ್ರದೇಶ ರಾಜ್ಯದವರಾದ ಈಶ್ವರ ಕುಮಾರ ಕಾಂದೂ ಅವರು ಈ ಮೊದಲು 2019–20ರಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ಪ್ರೊಬೆಷನರಿ ಅವಧಿಯನ್ನು ಪೂರ್ಣಗೊಳಿಸಿದರು. ಬಳಿಕ ಮಡಿಕೇರಿಯಲ್ಲಿ 19 ತಿಂಗಳು ಸಹಾಯಕ ಆಯುಕ್ತರಾಗಿ ಸೇವೆ ಸಲ್ಲಿಸಿದರು. ನಂತರ ಬೆಂಗಳೂರಿನಲ್ಲಿ ವಾಣಿಜ್ಯ ತೆರಿಗೆ ಇಲಾಖೆಯ ಹೆಚ್ಚುವರಿ ಆಯುಕ್ತರಾಗಿ, ಆ ಬಳಿಕ ಕಾರವಾರ ಜಿಲ್ಲೆಯಲ್ಲಿ ಎರಡೂವರೆ ವರ್ಷಗಳ ಕಾಲ ಜಿಲ್ಲಾ ಪಂಚಾಯತ್ ಸಿಇಓ ಆಗಿ ಕಾರ್ಯನಿರ್ವಹಿಸಿದ್ದಾರೆ. ಇಲ್ಲಿನ ಜಿಪಂ ಸಿಇಓ ಆಗಿದ್ದ ರಾಹುಲ್ ತುಕಾರಾಂ ಪಾಂಡ್ವೆ ಅವರನ್ನು ಸರ್ಕಾರವು ಬೇರೆಡೆ ವರ್ಗಾಯಿಸಿದೆ.

ಕರ್ನಾಟಕ ಅರಣ್ಯ ಇಲಾಖೆ

**ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳ ಕಛೇರಿ, ಸಾಮಾಜಿಕ ಅರಣ್ಯ ಉಪ ವಿಭಾಗ, ಕಲಬುರಗಿ**

ಮಿಂಚಂಚೆ ವಿಳಾಸ: sfgulbarga@gmail.com

ಸಂಖ್ಯೆ: ಬಿ2/ಬಜೆಟ್/ಹೊರಗುತ್ತಿಗೆ/ಇ–ಟೆಂಡರ್/ಸಿಆರ್– /2025–26 ದಿನಾಂಕ: 08/07/2025

**ಅಲ್ಪಾವಧಿ ಸಂಕ್ಷಿಪ್ತ ದ್ವಿಲಕೋಟೆ ಟೆಂಡರ್ ಪ್ರಕಟಣೆ (ಇ–ಟೆಂಡರ್ ಮೂಲಕ) (ಕರೆ–4)**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 2000ರ ಅನ್ವಯ ಈ ಮೂಲಕ ಸಾರ್ವಜನಿಕರ ಅವಗಾಹನೆಗೆ ತಿಳಿಯಪಡಿಸುವುದೇನೆಂದರೆ ಈ ಕೆಳಕಂಡ ಅನುಸೂಚಿಯಲ್ಲಿ ನಮೂದಿಸಿರುವಂತೆ 2025–26ನೇ ಸಾಲಿಗೆ ಕಲಬುರಗಿ ಸಾಮಾಜಿಕ ಅರಣ್ಯ ವಿಭಾಗ, ಉಪ ವಿಭಾಗ ಹಾಗೂ ವಿಭಾಗ ವ್ಯಾಪ್ತಿಯ ವಲಯ ಕಛೇರಿಗಳಿಗೆ ಅಗತ್ಯವಿರುವ ಗಣಕಯಂತ್ರ ನಿರ್ವಾಹಕರು, ಲಿಪಿಕ ಸಾಯಕರು, ವಾಹನ ಚಾಲಕರು ಹಾಗೂ ಕಾವಲುಗಾರರು/ಕಸಗೂಡಿಸುವವರು ಸೇವೆಯನ್ನು ಹೊರಗುತ್ತಿಗೆ (Outsource) ಮೂಲಕ ಪಡೆಯಲು ಇ–ಟೆಂಡರ್ ಆಹ್ವಾನಿಸಲಾಗಿದ್ದು, **ರೂ. 36.38 ಲಕ್ಷಗಳಲ್ಲಿ** ಇ–ಟೆಂಡರ್ ವೆಬ್ ಸೈಟ್ ಸಂಖ್ಯೆ: http://kppp.karnataka.gov.in ರ ಮೂಲಕ ಟೆಂಡರ್ ದಾಖಲಿಸಲು ದಿನಾಂಕ: 08/07/2025 ರಿಂದ ದಿನಾಂಕ: 15/07/2025 ಅಪರಹ್ನ 04:00 ಗಂಟೆಯ ವರೆಗೆ ಆಹ್ವಾನಿಸಲಾಗಿದೆ. ತಾಂತ್ರಿಕ ಬಿಡ್‌ಗಳನ್ನು ದಿ:16/07/2025ರಂದು ಅಪರಹ್ನ 04:00ರ ನಂತರ ತೆರೆಯಲಾಗುವುದು. ತಾಂತ್ರಿಕ ಬಿಡ್‌ನಲ್ಲಿ ಯಶಸ್ವಿಯಾದ ಟೆಂಡರ್‌ಗಳ ಆರ್ಥಿಕ ಬಿಡ್‌ಗಳನ್ನು ದಿ:17/07/2025 ರಂದು ಅಪರಹ್ನ 04:00ರ ನಂತರ ತೆರೆಯಲಾಗುವುದು.

ಹೆಚ್ಚಿನ ವಿವರಗಳಿಗಾಗಿ ಕಛೇರಿ ಕೆಲಸದ ದಿನಗಳಂದು ಕಛೇರಿ ಸಮಯದಲ್ಲಿ ಸಂಪರ್ಕಿಸಿ ಪಡೆಯಬಹುದು ಅಥವಾ ದೂರವಾಣಿ ಸಂಖ್ಯೆ: 08472–278633ಕ್ಕೆ ಕರೆ ಮಾಡಿ ಪಡೆಯಬಹುದು.

**ಸಹಿ/– ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು,**
**ಸಾಮಾಜಿಕ ಅರಣ್ಯ ಉಪ ವಿಭಾಗ, ಕಲಬುರಗಿ**

ವಾ.ಸಾ.ಸಂ.ಇ/ಕಲಬುರಗಿ/278/ಕೆ.ಎಸ್.ಎಂ.ಸಿ.&ಎ/2025–26

**Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330. Editor: Ramesh Reddy, Office Ph. No: +91 9449732000.**